


ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡವೇ ಸತ್ಯ, ಕನ್ನಡವೇ ನಿತ್ಯ

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 22, ಸಂಚಿಕೆ: 31, ಪುಟಗಳು: 8, ಭಾನುವಾರ, 10 ನವೆಂಬರ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines



## ಸುಭಾಷಿತ

ವಿವೇಕವೆಂದರೆ ಬಿಡಿಸಿ ನೋಡುವುದು, ವಿಶ್ಲೇಷಿಸುವುದು , ತೂಗುವುದು , ಅಳೆಯುವುದು.

। ಗೋಪಾಲಕೃಷ್ಣ ಅಡಿಗ

## ಪಂಚಾಂಗ

(ಭಾನುವಾರ 10, ನವೆಂಬರ್-2024)

- ಸಂವತ್ಸರ: ಕ್ರೋಧಿನಾಮ
- ಋತು: ಶರದ್, ಅಯನ: ದಕ್ಷಿಣಾಯನ
- ಮಾಸ: ಕಾರ್ತಿಕ, ಪಕ್ಷ: ಶುಕ್ಲ
- ತಿಥಿ: ನವಮಿ, ನಕ್ಷತ್ರ: ಧನಿಷ್ಠಾ
- ಶ್ರವಣ ನಕ್ಷತ್ರ / ಧನಿಷ್ಠ ನಕ್ಷತ್ರ
- ರಾಹುಕಾಲ: 04:23 ರಿಂದ 05:50
- ಗುಳಿಕಕಾಲ: 02:57 ರಿಂದ 04:23
- ಯಮಗಂಡಕಾಲ: 12:03 ರಿಂದ 01:30

## ಸಂಕ್ಷಿಪ್ತ ಸುದ್ದಿ

### ಫ್ಲೈಓವರ್ ಮೇಲೆ ಮತ್ತೊಂದು ಅಪಘಾತ



**ಬೆಂಗಳೂರು:** ಯಶವಂತಪುರ ಫ್ಲೈಓವರ್ ಮೇಲೆ ಮತ್ತೊಂದು ಅಪಘಾತ ಸಂಭವಿಸಿದೆ. ವೇಗವಾಗಿ ಬಂದ ಕಾರು ನಿಯಂತ್ರಣ ತಪ್ಪಿ ಪಲ್ಟಿಯಾಗಿರುವ ಘಟನೆ ನಡೆದಿದೆ. ಕಾರಿನಲ್ಲಿದ್ದ ನಾಲ್ವರು ಕೂದಲೆಳೆ ಅಂತರದಿಂದ ಪಾರಾಗಿದ್ದಾರೆ. ಕಾರ್ಯಕ್ರಮ ಮುಗಿಸಿ ಸಂಜಯ್‌ನಗರದಿಂದ ರಾಜಾಜಿನಗರಕ್ಕೆ ಯುವಕರು ವಾಪಸ್ ಆಗುತ್ತಿದ್ದರು. ತಡರಾತ್ರಿ ಅಪಘಾತ ಸಂಭವಿಸಿದೆ. ಕೆಎ 04ಎಂಟಿ 8618 ನಂಬರ್‌ನ ಕ್ರೇಟಾ ಕಾರು ಯಶವಂತಪುರ ಮಾರ್ಗವಾಗಿ ವೇಗವಾಗಿ ಬರುತ್ತಿತ್ತು. ಈ ವೇಳೆ ಕಾರು ಫ್ಲೈಓವರ್ ಮೇಲೆ ನಿಯಂತ್ರಣ ತಪ್ಪಿದೆ. ವೇಗವಾಗಿ ಡ್ರೈವರ್ ಹತ್ತಿ ಕಂಟ್ರೋಲ್ ತಪ್ಪಿ ಪಲ್ಟಿಯಾಗಿದೆ. ಕೂಡಲೇ ಸ್ಥಳದಲ್ಲಿದ್ದ ಕೆಲ ಆಟೋ ಚಾಲಕರು ಕಾರಿನ ಒಳಗಿದ್ದ ಯುವಕರನ್ನ ಆಚೆ ಕರೆತಂದಿದ್ದಾರೆ. ಯುವಕರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಯಶವಂತಪುರ ಸಂಚಾರಿ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ. ಕಳೆದ ಒಂದು ಒಂದೂವರೆ ತಿಂಗಳ ಹಿಂದಷ್ಟೇ ಇದೇ ಜಾಗದಲ್ಲಿ ಅಪಘಾತವಾಗಿ ಫ್ಲೈಓವರ್ ಮೇಲಿಂದ ಕಾರು ಕೆಳಗೆ ಬಿದ್ದು ಅಪಘಾತ ಸಂಭವಿಸಿತ್ತು. ಈ ವೇಳೆ ಒಬ್ಬರು ಮೃತಪಟ್ಟಿದ್ದರು.

### ಕಾಡಾನೆಗಳ ಉಪಟಳ



**ಚಿಕ್ಕಮಗಳೂರು:** ಕಳೆದ ನಾಲ್ಕು ದಿನಗಳಿಂದ ಚಿಕ್ಕಮಗಳೂರು ಜಿಲ್ಲೆಯ ಆಲ್ದೂರು ಸುತ್ತಮುತ್ತಲಿನ ಹಳ್ಳಿಗಳಲ್ಲಿ ಕಾಡಾನೆಗಳ ಹಿಂಡು ಬೀಡುಬಿಟ್ಟಿದೆ. ಇದರಿಂದಾಗಿ ಆಲ್ದೂರು ಸುತ್ತ ಮುತ್ತಲಿನ 10 ಹಳ್ಳಿಗಳಲ್ಲಿ ಶನಿವಾರ ರಾತ್ರಿಯಿಂದ ಇಂದು ರಾತ್ರಿ 9:00 ಗಂಟೆ ವರೆಗೂ ನಿಷೇಧಾಜ್ಞೆ ಜಾರಿ ಮಾಡಿ ತಹಶೀಲ್ದಾರ್ ಆದೇಶ ಹೊರಡಿಸಿದ್ದಾರೆ. ಚಿಕ್ಕಮಗಳೂರು ತಾಲೂಕಿನ ತುಡುಕೂರು, ಆಲ್ದೂರು ಹೊಸಳ್ಳಿ, ತೋರಣಮಾವು, ಚಿತ್ತುವಳ್ಳಿ, ಆಲ್ದೂರುಪುರ, ಮಡೆನೇರಳು, ದೊಡ್ಡಮಾಗರವಳ್ಳಿ, ಗುಲ್ಲನ್ ಪೇಟೆ, ಹಾಂದಿ ಹಾಗೂ ಕೆಳಗೂರು ಗ್ರಾಮದಲ್ಲಿ ನಿಷೇಧಾಜ್ಞೆ ಜಾರಿ ಮಾಡಲಾಗಿದೆ. ಈ ಗ್ರಾಮಗಳಲ್ಲಿ 5 ಜನ ಸೇರುವಂತಿಲ್ಲ.

ಪುಟ 2

## ಪತ್ನಿ, ಮಗುವನ್ನು ಕೊಂದು ತಾನೂ ಆತ್ಮಹತ್ಯೆಗೆ ಶರಣಾದ ಪತಿ

**ಮಂಗಳೂರು:** ಪತ್ನಿ ಹಾಗೂ ಮಗುವನ್ನು ಕೊಂದು ಪತಿ ತಾನೂ ಆತ್ಮಹತ್ಯೆಗೆ ಶರಣಾದ ಘಟನೆ ಮಂಗಳೂರು ಹೊರವಲಯದ ಪಕ್ಷಿಕೆರೆಯಲ್ಲಿ ನಡೆದಿದೆ.

ಸಹಕಾರಿ ಬ್ಯಾಂಕ್‌ವೊಂದರಲ್ಲಿ ಕೆಲಸ ಮಾಡುತ್ತಿದ್ದ ಕಾರ್ತಿಕ್ ಭಟ್ (32) ತನ್ನ ಪತ್ನಿ ಪ್ರಿಯಾಂಕ (28) ಹಾಗೂ ಮಗು ಹೃದಯ್‌ನನ್ನು (4) ಹತ್ಯೆಗೈದು ಬಳಿಕ ತಾನೂ ರೈಲಿಗೆ ತಲೆಕೊಟ್ಟು ಆತ್ಮಹತ್ಯೆಗೆ ಶರಣಾಗಿದ್ದಾನೆ. ಪತ್ನಿಗೆ ಅತ್ತೆ ಮಾವನೊಂದಿಗೆ ಮನಸ್ತಾಪ ಇದ್ದ ಹಿನ್ನೆಲೆ ಕಾರ್ತಿಕ್ ಕುಟುಂಬ ಮನೆಯ ಕೋಣೆಯಲ್ಲಿ ಪ್ರತ್ಯೇಕವಾಗಿ ವಾಸಿಸುತ್ತಿದ್ದರು. ಕಾರ್ತಿಕ್ ತಂದೆ ಜನಾರ್ದನ ಭಟ್ ಪಕ್ಷಿಕೆರೆ ಜಂಕ್ಷನ್‌ನಲ್ಲಿ ಹೋಟೆಲ್ ನಡೆಸಿಕೊಂಡಿದ್ದು, ಎಂದಿನಂತೆಯೇ ಶುಕ್ರವಾರವೂ ಹೋಟೆಲ್‌ಗೆ ತೆರಳಿದ್ದರು. ಈ ವೇಳೆ ಹೆಂಡತಿ ಮಗುವನ್ನು ಕಾರ್ತಿಕ್ ಹತ್ಯೆ ಮಾಡಿದ್ದ. ಹತ್ಯೆಯ ಬಳಿಕ ಮಧ್ಯಾಹ್ನದ ವೇಳೆಗೆ ರೈಲಿಗೆ ತಲೆ ಕೊಟ್ಟು ತಾನೂ ಆತ್ಮಹತ್ಯೆಗೆ ಶರಣಾಗಿದ್ದಾನೆ.

ಮನಸ್ತಾಪದ ಹಿನ್ನೆಲೆ ಶುಕ್ರವಾರ ರಾತ್ರಿಯೂ ಮಗ, ಸೊಸೆ ಹಾಗೂ ಮೊಮ್ಮಗ ಕೋಣೆಯಲ್ಲಿಯೇ ಇದ್ದಾರೆಂದು ಮಾವ ಜನಾರ್ದನ ಭಟ್ ಭಾವಿಸಿ ಶನಿವಾರ ಕೂಡ ಎಂದಿನಂತೆಯೇ ಹೋಟೆಲ್‌ಗೆ ತೆರಳಿದ್ದರು. ಇತ್ತ ಕಾರ್ತಿಕ್ ಮೃತದೇಹ ಪತ್ತೆಯಾದ ಕಾರಣ ಆತನ ವಿಳಾಸ ಹುಡುಕಿಕೊಂಡು ಪೊಲೀಸರು ಮನೆಗೆ ಬಂದಿದ್ದಾರೆ. ಕೋಣೆಯ ಬಾಗಿಲು ತೆರೆದು ನೋಡಿದಾಗ ಪತ್ನಿ ಹಾಗೂ ಮಗುವಿನ ಮೃತದೇಹ ಪತ್ತೆಯಾಗಿದೆ. ಕಾರ್ತಿಕ್ ಪತ್ನಿ ಪ್ರಿಯಾಂಕ ಶಿವಮೊಗ್ಗ ಮೂಲದವರಾಗಿದ್ದರು. ಮಾತುಕತೆ ಇಲ್ಲದ ಕಾರಣ ಸೊಸೆ ಹಾಗೂ ಮೊಮ್ಮಗನ ಮೃತದೇಹ ಮನೆಯಲ್ಲಿದ್ದರೂ ವೃದ್ಧ ಅತ್ತೆ ಮಾವನಿಗೆ ಗೊತ್ತೇ ಆಗಿರಲಿಲ್ಲ. ಮಂಗಳೂರು ನಗರ ಪೊಲೀಸ್ ಕಮೀಷನರ್ ಅನುಪಮ್ ಅಗರ್ವಾಲ್ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾರ್ತಿಕ್ ತನ್ನ ಹೆಂಡತಿ ಹಾಗೂ ಮಗುವನ್ನು ಗ್ಲಾಸ್ ಪೀಸ್‌ನಿಂದ ಚುಚ್ಚಿ ಹತ್ಯೆ ಮಾಡಿದ್ದಾನೆ.

ಪುಟ 2



### ಕರ್ನಾಟಕ ಸರ್ಕಾರ ಅಧಿಕೃತ ಆದೇಶ ರೈತರಲ್ಲಿ ಹರ್ಷ

# ವಕ್ಫ್ ನೋಟಿಸ್ ವಾಪಸ್

**ಬೆಂಗಳೂರು:** ಕರ್ನಾಟಕದಲ್ಲಿ ಇದೀಗ ವಕ್ಫ್ ಆಸ್ತಿ ವಿವಾದ ಭುಗಿಲೆದ್ದಿದೆ. ಈ ಮಧ್ಯೆ ರೈತರಿಗೆ ನೀಡಲಾಗಿರುವ ನೋಟಿಸ್‌ಗಳನ್ನು ತಕ್ಷಣದಿಂದಲೇ ವಾಪಸ್ ಪಡೆಯುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಖಡಕ್ ಸೂಚನೆ ನೀಡಿದ್ದು ಅಧಿಕೃತ ಆದೇಶವೂ ಹೊರಬಿದ್ದಿದೆ.

ರೈತರ ಪಹಣಿ ಬದಲಾವಣೆ ಸಂಬಂಧ ಈಗಾಗಲೇ ನೀಡಿರುವ ನೋಟಿಸ್‌ಗಳನ್ನು ತಕ್ಷಣ ವಾಪಸ್ ಪಡೆಯಿರಿ. ರೈತರ ಸ್ವಾಧೀನದಲ್ಲಿರುವ ಜಮೀನುಗಳಿಗೆ ಯಾವುದೇ ರೀತಿಯ ತೊಂದರೆ ನೀಡಬಾರದು ಎಂದು ಸೂಚಿಸಿದ್ದರು. ಕಾನೂನು ಬಾಹಿರವಾಗಿ ಹಾಗೂ ನೋಟಿಸ್ ನೀಡದೆ ಪಹಣಿಯಲ್ಲಿ ಯಾವುದೇ ರೀತಿಯ ತಿದ್ದುಪಡಿಗಳನ್ನು ಮಾಡಿದ್ದರೆ ತಕ್ಷಣ ರದ್ದು ಮಾಡಬೇಕು ಎಂದು ಕೆಲಸ ದಿನಗಳ ಹಿಂದೇ ಸೂಚನೆ ನೀಡಿದ್ದರು. ಇದೀಗ ಅಧಿಕೃವಾಗಿ ಆದೇಶ ಹೊರಬಿದ್ದಿದೆ.

ರೈತರ ಜಮೀನಿನಿಂದ ಆರಂಭವಾದ ಈ ವಕ್ಫ್ ಆಸ್ತಿ ವಿವಾದ ಕೊನೆಗೆ ಮಠ ಹಾಗೂ ಹಿಂದೂ ದೇವಾಲಯಗಳಿಗೂ ನೋಟಿಸ್ ನೀಡುವವರೆಗೆ ಬಂದಿತ್ತು. ಬಳಿಕ ರಾಜ್ಯದಲ್ಲಿ ರೈತರು ರಾಜ್ಯಾದ್ಯಂತ ಪ್ರತಿಭಟನೆ ನಡೆಸಿ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದರು. ಸದ್ಯ ಎಚ್ಚೆತ್ತುಕೊಂಡಿರುವ ಸರ್ಕಾರ ರೈತರಿಗೆ ನೀಡಿದ್ದ ನೋಟಿಸ್‌ನ್ನು ಅಧಿಕೃತವಾಗಿ ವಾಪಾಸ್ ಪಡೆದುಕೊಂಡಿದೆ.

ಪುಟ 2




## ಮುಸ್ಲಿಮರಿಗೆ ಮೀಸಲಾತಿ ಕೊಟ್ಟಿದ್ದು ಹೆಚ್.ಡಿ.ದೇವೇಗೌಡರಲ್ಲ: ಜಮೀರ್

**ರಾಮನಗರ:** ಮುಸ್ಲಿಮರಿಗೆ ಮೀಸಲಾತಿ ಕೊಟ್ಟಿದ್ದು ಹೆಚ್.ಡಿ.ದೇವೇಗೌಡರಲ್ಲ. ಅವರು ಜನರನ್ನು ದಾರಿ ತಪ್ಪಿಸುವುದು ಬೇಡ ಎಂದು ಸಚಿವ ಜಮೀರ್ ಅಹ್ಮದ್ ವಾಗ್ದಾಳಿ ನಡೆಸಿದ್ದಾರೆ.

ಚನ್ನಪಟ್ಟಣ ಉಪಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಪರ ಪ್ರಚಾರ ನಡೆಸಿದ ಜಮೀರ್, ಮೀಸಲಾತಿ ಕೊಟ್ಟಿದ್ದು ದೇವೇಗೌಡರಲ್ಲ. ಅದನ್ನ ವೀರಪ್ಪ ಮೊಯ್ಲಿ ಕೊಟ್ಟಿದ್ದು. ದೇವೇಗೌಡರಿಗೆ ಮನವಿ ಮಾಡ್ತೇನೆ. ಜನರನ್ನು ದಾರಿತಪ್ಪಿಸೋದು ಬೇಡ. 1994 ರಲ್ಲಿ ವೀರಪ್ಪ ಮೊಯ್ಲಿ ಕೊಟ್ಟಿದ್ದು. ಹಿಂದುಳಿದ ವರ್ಗಗಳ ಆಯೋಗಕ್ಕೆ ಮೀಸಲಾತಿ ಕುರಿತು ವರದಿ ಕಳುಹಿಸಿದ್ರು. ಆಗ ಸರ್ಕಾರ ಹೋಯ್ತು. ಸರ್ಕಾರ ಹೋದ ಮೇಲೆ ದೇವೇಗೌಡರು ಬಂದ್ರು. ವೀರಪ್ಪ ಮೊಯ್ಲಿ 6% ಗೆ ರೆಕ್ಮೆಂಡ್ ಮಾಡಿದ್ದರು. ಆದ್ರೆ ದೇವೇಗೌಡರು ಕೊಟ್ಟಿದ್ದು ಕೇವಲ 4%. ನಮಗೆ ದೇವೇಗೌಡರು ಮೋಸ ಮಾಡಿದ್ದಾರೆ. 6% ಮೀಸಲಾತಿ ಕೊಟ್ಟಿದ್ದು ಕಾಂಗ್ರೆಸ್ ಪಕ್ಷ ತಿಳಿಸಿದ್ದಾರೆ.



ಜನರ ಜೋಶ್ ನೋಡಿದ್ದೇನೆ. ನಾನು ಕೂಡ ಇದನ್ನ ನಿರೀಕ್ಷೆ ಇಟ್ಟಿರಲಿಲ್ಲ. 25ರಿಂದ 30 ಸಾವಿರ ಮತಗಳ ಅಂತರದಿಂದ ನಮ್ಮ ಅಭ್ಯರ್ಥಿ ಗೆಲ್ತಾರೆ ಅನ್ನೊ ವಿಶ್ವಾಸ ಇದೆ. ನಿಖಿಲ್ ಎನ್‌ಡಿಎ ಅಭ್ಯರ್ಥಿ, ಕುಮಾರಸ್ವಾಮಿಗೆ ಮುಸ್ಲಿಂ ವೋಟ್ ಬೇಕಿಲ್ಲ. ಅಲ್ಪಸಂಖ್ಯಾತರ ವೋಟ್ ಬೇಕಿಲ್ಲ ಅಂತಾ ಅವರು ಮಾತಾಡಿರೋ ವೀಡಿಯೋ ಇದೆ.

ಪುಟ 2

### ಅಸಮಾಧಾನ ಹೊರ ಹಾಕಿದ ಮುಸ್ಲಿಂ ವಿದ್ಯಾರ್ಥಿಗಳು

## ಗಡ್ಡ ತೆಗೆಯುವಂತೆ ಸೂಚನೆ

**ಹಾಸನ:** ಗಡ್ಡ ತೆಗೆಯುವಂತೆ ಆಡಳಿತ ಮಂಡಳಿ ತಮಗೆ ಸೂಚನೆ ನೀಡಿದೆ ಅಂತ 13ಕ್ಕೂ ಹೆಚ್ಚು ಮುಸ್ಲಿಂ ವಿದ್ಯಾರ್ಥಿಗಳು ಟ್ವೀಟ್ ಮೂಲಕ ಹೊಳೆನರಸೀಪುರ ಸರ್ಕಾರಿ ನರ್ಸಿಂಗ್ ಕಾಲೇಜಿನ ವಿರುದ್ಧ ಅಸಮಾಧಾನ ಹೊರ ಹಾಕಿದ್ದಾರೆ. ಈ ವಿಚಾರವಾಗಿ ಕಾಲೇಜು ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳ ನಡುವೆ ಸಂಘರ್ಷ ಏರ್ಪಟ್ಟಿದೆ.

ಪಿಎಂಎಸ್‌ಎಸ್ ಯೋಜನೆಯಡಿ ನರ್ಸಿಂಗ್ ಓದಲು ಜಮ್ಮು-ಕಾಶ್ಮೀರದಿಂದ 13ಕ್ಕೂ ಹೆಚ್ಚು ಮುಸ್ಲಿಂ ಯುವಕರು ಹೊಳೆನರಸೀಪುರಕ್ಕೆ ಬಂದಿದ್ದಾರೆ. ವಿದ್ಯಾರ್ಥಿಗಳು ಹೊಳೆನರಸೀಪುರ ಸರ್ಕಾರಿ ನರ್ಸಿಂಗ್ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಈ ವಿದ್ಯಾರ್ಥಿಗಳಿಗೆ ಪ್ರಾಂಶುಪಾಲರು ಗಡ್ಡ ತೆಗೆದು ಕಾಲೇಜು ಚಟುವಟಿಕೆಗಳಲ್ಲಿ ಭಾಗವಹಿಸುವಂತೆ ಮೌಖಿಕವಾಗಿ ಸೂಚನೆ ನೀಡಿದ್ದಾರೆ ಎಂದು ವಿದ್ಯಾರ್ಥಿಗಳು ಆರೋಪ ಮಾಡಿದ್ದಾರೆ.




ಆದರೆ, ಗಡ್ಡ ತೆಗೆಯಲು ವಿದ್ಯಾರ್ಥಿಗಳು ನಿರಾಕರಿಸಿದ್ದಾರೆ.

"ನಮ್ಮ ಸಂಪ್ರದಾಯದಂತೆ ಗಡ್ಡ ಬಿಡುವುದು ನಮ್ಮ ಹಕ್ಕು. ಗಡ್ಡ ತೆಗೆಯುವಂತೆ ಸೂಚನೆ ನೀಡಿದ್ದು, ನಮ್ಮ ವಿದ್ಯಾಭ್ಯಾಸದ ಮೇಲೆ ಪರಿಣಾಮ ಬೀರುತ್ತಿದೆ. ಕೂಡಲೇ ಮಧ್ಯಪ್ರವೇಶಿಸಿ ಸಮಸ್ಯೆ ಬಗೆಹರಿಸುವಂತೆ" ವಿದ್ಯಾರ್ಥಿಗಳು ಸಾಮಾಜಿಕ ಮಾಧ್ಯಮ ಎಕ್ಸ್ ಮುಖಾಂತರ ಮುಖ್ಯಮಂತ್ರಿ ಸಿದ್ದರಾಮಯ್ಯ, ಜಮ್ಮು-ಕಾಶ್ಮೀರ ಮುಖ್ಯಮಂತ್ರಿ ಹಾಗೂ ಅಲ್ಲಿನ ಪ್ರಮುಖ ನಾಯಕರಿಗೆ ಮನವಿ ಮಾಡಿದ್ದಾರೆ.

ಪುಟ 2

### ಮೋದಿಗೆ ಮುಜುಗರ ಉಂಟುಮಾಡಲು ಕೈ ಹೈಕಮಾಂಡ್ ಪ್ಲಾನ್?

## ಚುನಾವಣೆ ವೇಳೆ ಕಾಂಗ್ರೆಸ್‌ಗೆ ಸಿಕ್ತು ಬ್ರಹ್ಮಾಸ್ತ್ರ

**ಬೆಂಗಳೂರು:** ರಾಜ್ಯದ ಮೂರು ಕ್ಷೇತ್ರಗಲ್ಲಿ ವಿಧಾನಸಭೆ ಉಪಚುನಾವಣೆ ಕಣ ರಂಗೇರಿದ್ದು, ಆಡಳಿತರೂಢ ಕಾಂಗ್ರೆಸ್ ಪಕ್ಷದ ವಿರುದ್ಧ ಎಲ್ಲಾ ಕ್ಷೇತ್ರಗಳಲ್ಲಿ ಗೆಲುವು ಸಾಧಿಸುವ ಗುರಿ ಹೊಂದಿರುವ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ವಿವಿಧ ಅಸ್ತ್ರಗಳನ್ನು ಪ್ರಯೋಗಿಸುತ್ತಿವೆ. ಸಿಎಂ ಸಿದ್ದರಾಮಯ್ಯ ವಿರುದ್ಧ ಮುಡಾ ಹಗರಣ, ವಾಲ್ಮೀಕಿ ನಿಗಮದ ಹಗಣ ಸೇರಿ ವಿವಿಧ ಆರೋಪಗಳ ಮೂಲಕ ಕಾಂಗ್ರೆಸ್ ವಿರುದ್ಧ ಜನಾಭಿಪ್ರಾಯ ರೂಪಿಸಲು ವಿರೋಧ ಪಕ್ಷಗಳು ತಂತ್ರ ಹೆಣೆಯುತ್ತಿವೆ. ಈ ನಡುವೆ ಕಾಂಗ್ರೆಸ್ ಪಕ್ಷಕ್ಕೆ ಬಿಜೆಪಿಯನ್ನು ಎದುರಿಸಲು ಬ್ರಹ್ಮಾಸ್ತ್ರವೊಂದು ಸಿಕ್ಕಿದ್ದು, ಅದನ್ನ ಸಂಪೂರ್ಣವಾಗಿ ಬಳಸಿಕೊಳ್ಳಲು ಕಾಂಗ್ರೆಸ್ ಹೈಕಮಾಂಡ್ ನಿರ್ಧಾರ ಮಾಡಿದೆ ಎಂಬ ಮಾತು ಕೇಳಿಬಂದಿದೆ.

ಪುಟ 2



## ಪ್ರಜ್ವಲ್ ರೇವಣ್ಣ ವಿರುದ್ಧ ಅತ್ಯಾಚಾರ ಕೇಸ್; ಜಾಮೀನು ಕೋರಿ ಸುಪ್ರೀಂಗೆ ಅರ್ಜಿ

**ನವದೆಹಲಿ:** ಅತ್ಯಾಚಾರ ಪ್ರಕರಣದಲ್ಲಿ ಬಂಧನಕ್ಕೆ ಒಳಗಾಗಿರುವ ಜೆಡಿಎಸ್‌ನ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಜಾಮೀನು ಕೋರಿ ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದಾರೆ.



ಕರ್ನಾಟಕ ಹೈಕೋರ್ಟ್ ಆದೇಶ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದಾರೆ. ಸೋಮವಾರ (ನವೆಂಬರ್ 11) ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆ ನಡೆಯುವ ಸಾಧ್ಯತೆಯಿದೆ.

ಕಳೆದ ಅಕ್ಟೋಬರ್ 21ರಂದು ಪ್ರಜ್ವಲ್ ರೇವಣ್ಣ ಪರ ವಕೀಲರು ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾಗೊಳಿಸಿತ್ತು. ಪ್ರಜ್ವಲ್ ರೇವಣ್ಣ ಒಂದು ಪ್ರಕರಣದಲ್ಲಿ ಜಾಮೀನು ಹಾಗೂ ಇನ್ನೆರಡು ಪ್ರಕರಣಗಳಲ್ಲಿ ನಿರೀಕ್ಷಣಾ ಜಾಮೀನು ಕೋರಿದ್ದರು.

ಹೊಳೆನರಸೀಪುರ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಜಾಮೀನು ಕೋರಿದ್ದರೆ, ಸಿಐಡಿ ಸೈಬರ್ ಸೆಲ್‌ನಲ್ಲಿ ದಾಖಲಾಗಿದ್ದ 2 ಪ್ರಕರಣಗಳಲ್ಲಿ ನಿರೀಕ್ಷಣಾ ಜಾಮೀನು ಕೋರಿದ್ದರು. ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಮೂರು ಅರ್ಜಿಗಳನ್ನು ವಜಾಗೊಳಿಸಿತ್ತು.

ಪ್ರಜ್ವಲ್ ರೇವಣ್ಣ ತಂದೆ ಹಾಗೂ ಮಾಜಿ ಸಚಿವ ಹೆಚ್.ಡಿ.ರೇವಣ್ಣ ವಿರುದ್ಧ ಕಳೆದ ಏಪ್ರಿಲ್ 28ರಂದು ರೇವಣ್ಣ ಅವರ ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದ ಸಂತ್ರಸ್ತೆ ದೂರು ದಾಖಲಿಸಿದ್ದರು. ಹೊಳೆನರಸೀಪುರ ನಗರ ಪೊಲೀಸ್ ಠಾಣೆಯಲ್ಲಿ ಇಬ್ಬರ ವಿರುದ್ಧ ದೂರು ದಾಖಲಾಗಿತ್ತು. ಎಫ್‌ಐಆರ್‌ನಲ್ಲಿ ಹೆಚ್.ಡಿ.ರೇವಣ್ಣ ಎ1 ಮತ್ತು ಪ್ರಜ್ವಲ್ ರೇವಣ್ಣ ಎ2 ಆರೋಪಿಯಾಗಿದ್ದಾರೆ. 354 A, 354 D, 509 ಅಡಿ ಪ್ರಕರಣ ದಾಖಲಾಗಿತ್ತು. 2015 ರಲ್ಲಿ ಹೆಚ್.ಡಿ.ರೇವಣ್ಣ ಮನೆಯಲ್ಲಿ ಕೆಲಸ ಮಾಡಿಕೊಂಡಿದ್ದ ಸಂತ್ರಸ್ತೆ ದೂರು ನೀಡಿದ್ದರು. ತಂದೆ ಮತ್ತು ಮಗನ ವಿರುದ್ಧ ಸಂತ್ರಸ್ತೆ ಗಂಭೀರ ಆರೋಪಗಳನ್ನು ಮಾಡಿದ್ದರು.

## ಪಕ್ಷದ ಕಚೇರಿಯಲ್ಲಿ ಬಿಜೆಪಿ ನಾಯಕನ ಶವ ಪತ್ತೆ

**ನವದೆಹಲಿ:** ಪಕ್ಷದ ಕಚೇರಿಯಲ್ಲಿ ಪಶ್ಚಿಮ ಬಂಗಾಳ ಬಿಜೆಪಿ ನಾಯಕನ ಶವ ಪತ್ತೆಯಾಗಿದೆ. ಪಶ್ಚಿಮ ಬಂಗಾಳದ ದಕ್ಷಿಣ 24 ಪರಗಣ ಜಿಲ್ಲೆಯ ಉಸ್ತಿಯಲ್ಲಿರುವ ಪಕ್ಷದ ಕಚೇರಿಯಲ್ಲಿ ಬಿಜೆಪಿ ನಾಯಕನ ಶವ ಪತ್ತೆಯಾಗಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ಶನಿವಾರ ತಿಳಿಸಿದ್ದಾರೆ.

ಮೃತ ಪೃಥ್ವಿರಾಜ್ ನಾಸ್ಕರ್ ಜಿಲ್ಲೆಯಲ್ಲಿ ಪಕ್ಷದ ಸಾಮಾಜಿಕ ಜಾಲತಾಣ ಖಾತೆಯನ್ನು ನಿರ್ವಹಿಸುತ್ತಿದ್ದರು. ಬಿಜೆಪಿಯು ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮೇಲೆ ಬೆರಳು ಮಾಡಿದೆ. ಹತ್ಯೆಗೆ ಸಂಬಂಧಿಸಿದಂತೆ ಮಹಿಳೆಯನ್ನು ಬಂಧಿಸಿದ ನಂತರ ಪೊಲೀಸರು ಕೊಲೆಗೆ ಕಾರಣ ವೈಯಕ್ತಿಕವಾಗಿರಬಹುದು ಎಂದು ಹೇಳಿದರು. ಶುಕ್ರವಾರ ರಾತ್ರಿ ಪಕ್ಷದ ಕಚೇರಿಯಲ್ಲಿ ನಸ್ಕರ್ ಅವರ ರಕ್ತಸಿಕ್ತ ಶವ ಪತ್ತೆಯಾಗಿದೆ. ನವೆಂಬರ್ 5 ರಿಂದ ನಾಪತ್ತೆಯಾಗಿದ್ದಾರೆ ಎಂದು ಅವರ ಕುಟುಂಬ ಸದಸ್ಯರು ತಿಳಿಸಿದ್ದಾರೆ. ಪೊಲೀಸರು ಕಚೇರಿಯ ಬಾಗಿಲನ್ನು ಒಡೆದು ಒಳಗೆ ಪ್ರವೇಶಿಸಿದ್ದಾರೆ. ಪಕ್ಷದ ಕಚೇರಿಯ ಗೇಟ್ ಅನ್ನು ಲಾಕ್ ಮಾಡಲಾಗಿತ್ತು. ಶಂಕಿತ ದುಷ್ಕರ್ಮಿ ಹಿಂಬಾಗಿಲ ಮೂಲಕ ಪರಾರಿಯಾಗಬೇಕು ಎಂದಿದ್ದಾರೆ.



ಪುಟ 2

## ಛತ್ತೀಸಗಢದಲ್ಲಿ ಪೊಲೀಸ್ ಎನ್‌ಕೌಂಟರ್‌ಗೆ ಗ್ಯಾಂಗ್‌ಸ್ಟರ್ ಬಲಿ

**ರಾಯ್ಪುರ:** ಛತ್ತೀಸ್‌ಗಢದಲ್ಲಿ ಮೋಸ್ಟ್ ವಾಂಟೆಡ್ ಪಟ್ಟಿಯಲ್ಲಿದ್ದ ರೌಡಿ ಶೀಟರ್‌ನನ್ನು ದುರ್ಗ್ ಜಿಲ್ಲೆಯ ಭಿಲಾಯಿ ನಗರದಲ್ಲಿ ಪೊಲೀಸರು ಎನ್‌ಕೌಂಟರ್‌ನಲ್ಲಿ ಗುಂಡಿಕ್ಕಿ ಹತ್ಯೆ ಮಾಡಿದ್ದಾರೆ.

ಸುಮಾರು 20 ವರ್ಷಗಳಲ್ಲಿ ರಾಜ್ಯದ ನಗರ ಪ್ರದೇಶದಲ್ಲಿ ಇದೇ ಮೊದಲ ಎನ್‌ಕೌಂಟರ್ ಆಗಿದೆ. ಕೊಲೆ, ಕೊಲೆ ಯತ್ನ ಮತ್ತು ಲೂಟಿ ಪ್ರಕರಣಗಳಲ್ಲಿ ಬೇಕಾಗಿದ್ದ ದರೋಡೆಕೋರ ಅಮಿತ್ ಜೋಶ್, ಪೊಲೀಸರೊಂದಿಗೆ ಗುಂಡಿನ ಚಕಮಕಿಯಲ್ಲಿ ಹೋರಾಡಿ ಮೃತಪಟ್ಟಿದ್ದಾನೆ. ಜೂನ್ 25 ರ ರಾತ್ರಿ ಜೋಶ್ ಮತ್ತು ಅವನ ಗ್ಯಾಂಗ್ ಪಾರ್ಕಿಂಗ್ ವಿವಾದದ ವಿಚಾರಕ್ಕೆ ನಾಗರಿಕರೊಂದಿಗೆ ಜಗಳವಾಡಿತ್ತು. ಗ್ಯಾಂಗ್‌ನಿಂದ ಮೂವರ ಮೇಲೆ ಗುಂಡು ಹಾರಿಸಲಾಗಿತ್ತು. 2005 ರಲ್ಲಿ ಭಿಲಾಯ್‌ನಲ್ಲಿ ಎನ್‌ಕೌಂಟರ್‌ವೊಂದು ನಡೆದಿತ್ತು. ಕೊಲೆ ಆರೋಪಿ ಗೋವಿಂದ್ ವಿಶ್ವಕರ್ಮನನ್ನು ತಾಲ್ಪುರಿ ಪ್ರದೇಶದಲ್ಲಿ ಗುಂಡಿಕ್ಕಿ ಕೊಲ್ಲಲಾಗಿತ್ತು.



# ಸಿಂಗನಗಳ್ಳಿ ಶೆಡ್‌ನಲ್ಲಿ ಡಬಲ್ ಮರ್ಡರ್: ಖಾಸಗಿ ಬಸ್ ಸಿಬ್ಬಂದಿ ಕೊಲೆ

**ಬೆಂಗಳೂರು:** ನಗರದ ಹೊರವಲಯದ ಸಿಂಗನಗಳ್ಳಿ ಶೆಡ್‌ನಲ್ಲಿ ಖಾಸಗಿ ಬಸ್‌ನ ಇಬ್ಬರು ಸಿಬ್ಬಂದಿ ಕೊಲೆಯಾಗಿರುವ ಘಟನೆ ನಡೆದಿದೆ.ಮೃತ ವ್ಯಕ್ತಿಗಳನ್ನು ನಾಗೇಶ್, ಮಂಜೇಗೌಡ ಎಂದು ಗುರುತಿಸಲಾಗಿದ್ದು, ಖಾಸಗಿ ಬಸ್‌ನ ಕ್ಲೀನರ್‌ಗಳಾಗಿ ಕಾರ್ಯನಿರ್ವಹಿಸುತ್ತಿದ್ದರು.ರಾತ್ರಿ ಕುಡಿದ ಅಮಲಿನಲ್ಲಿ ಹೊಡೆದಾಡಿಕೊಂಡ ಪರಿಣಾಮ ಕೊಲೆಯಾಗಿರುವ ಶಂಕೆ ವ್ಯಕ್ತವಾಗಿದ್ದು, ಬಾಗಲೂರು ಪೊಲೀಸ್ ಠಾಣಾ ವ್ಯಾಪ್ತಿಯ ಸಿಂಗನಗಳ್ಳಿ ಶೆಡ್‌ನಲ್ಲಿ ಒಟ್ಟಿಗೆ ಡಬಲ್ ಮರ್ಡರ್‌ಗಳಾಗಿವೆ. ಆದರೆ ಘಟನೆಗೆ ನಿಖರವಾದ ಕಾರಣ ತಿಳಿದು ಬಂದಿಲ್ಲ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸುತ್ತಿದ್ದಾರೆ.



# ಡಿಸಿಎಂ ಹೆಸರು ಹೇಳಿಕೊಂಡು ಅಧಿಕಾರಿಗಳಿಗೆ ವಂಚನೆ

**ಬೆಂಗಳೂರು:** ಡಿಸಿಎಂ ಡಿ.ಕೆ ಶಿವಕುಮಾರ್ ಮತ್ತು ಸಚಿವರ ಆಪ್ತ ಕಾರ್ಯದರ್ಶಿ ಹಾಗೂ ವಿಶೇಷಾಧಿಕಾರಿ ಎಂದು ಹೇಳಿಕೊಂಡು ಅಧಿಕಾರಿಗಳಿಗೆ ವಂಚಿಸುತ್ತಿದ್ದ ವ್ಯಕ್ತಿಯನ್ನು ವಿಧಾನಸೌಧ ಠಾಣೆ ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಯನ್ನು ತುಮಕೂರು ಮೂಲದ ರಘುನಾಥ್ ಎಂದು ಗುರುತಿಸಲಾಗಿದೆ. ಆರೋಪಿ ಸರ್ಕಾರಿ ಅಧಿಕಾರಿಗಳಿಗೆ ಕರೆ ಮಾಡಿ ವರ್ಗಾವಣೆ ಮಾಡಿಸಿಕೊಡುವುದಾಗಿ ಆಮಿಷವೊಡ್ಡಿ ಹಣ ಪಡೆದು ವಂಚಿಸುತ್ತಿದ್ದ. ಸಚಿವ ಪ್ರಿಯಾಂಕ್ ಖರ್ಗೆಯವರ ಹೆಸರನ್ನು ಹೇಳಿಕೊಂಡು ಇತ್ತೀಚೆಗೆ ರಘುನಾಥ್ ಇಂಜಿನಿಯರ್ ಒಬ್ಬರಿಗೆ ಕರೆ ಮಾಡಿದ್ದ. ಬಳಿಕ ವರ್ಗಾವಣೆ ಮಾಡಿಸಿಕೊಡುವುದಾಗಿ 2 ಲಕ್ಷ ರೂ. ಬೇಡಿಕೆ ಇಟ್ಟಿದ್ದ. ಇವನ ಮಾತನ್ನು ನಂಬಿದ್ದ ಇಂಜಿನಿಯರ್ 80 ಸಾವಿರ ರೂ. ಹಣ ಕೊಟ್ಟಿದ್ದರು. ಬಳಿಕ ಈತನ ವಂಚನೆ ಬಗ್ಗೆ ತಿಳಿದು ಸಚಿವರ ಆಪ್ತ ಕಾರ್ಯದರ್ಶಿಗಳು ದೂರು ನೀಡಿದ್ದರು. ಆರೋಪಿಯನ್ನು ಬಂಧಿಸಲಾಗಿದ್ದು, ಹೆಚ್ಚಿನ ವಿಚಾರಣೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಗ್ರಾಮ ಪಂಚಾಯಿತಿ ಕಟ್ಟಡಕ್ಕೆ ಪೆಟ್ರೋಲ್ ಬಾಂಬ್ ಎಸೆದ ಕಿಡಿಗೇಡಿಗಳು

**ಬೆಳಗಾವಿ:** ತಾಲೂಕಿನ ಕಲಕಾಂಬ ಗ್ರಾಮ ಪಂಚಾಯಿತಿ ಕಟ್ಟಡದ ಮೇಲೆ ತಡರಾತ್ರಿ ದುಷ್ಕರ್ಮಿಗಳು ಪೆಟ್ರೋಲ್ ಬಾಂಬ್ ಎಸೆದಿರುವ ಘಟನೆ ನಡೆದಿದೆ.

ನಿನ್ನೆ ರಾತ್ರಿ ಗ್ರಾಮ ಪಂಚಾಯಿತಿಯಲ್ಲಿ ಎರಡು ಗುಂಪುಗಳ ಮಧ್ಯೆ ತೀವ್ರ ಗಲಾಟೆ ಆಗಿರುವ ಮಾಹಿತಿ ಲಭ್ಯವಾಗಿದೆ. ಅದೇ ವಿಚಾರಕ್ಕೆ ತಡರಾತ್ರಿ ಕಿಡಿಗೇಡಿಗಳಿಂದ ಗ್ರಾಮ ಪಂಚಾಯಿತಿ ಕಟ್ಟಡಕ್ಕೆ ಬೆಂಕಿ ಹಚ್ಚಲಾಗಿದೆ ಎನ್ನುವ ಆರೋಪ ಕೇಳಿಬಂದಿದೆ. ತಡರಾತ್ರಿ ಆಗಮಿಸಿದ್ದ ಕಿಡಿಗೇಡಿಗಳು ಬಿಯರ್ ಬಾಟಲ್‌ನಲ್ಲಿ ಪೆಟ್ರೋಲ್ ಸುರಿದು ಬಟ್ಟೆ ಹಾಕಿ ಬೆಂಕಿ ಹಚ್ಚಿ ಎಸ್ಕೇಪ್ ಆಗಿದ್ದಾರೆ. ಅಲ್ಲದೇ, ಗ್ರಾಮ ಪಂಚಾಯಿತಿ ಆವರಣ ಹಾಗೂ ಒಳಗಡೆ ಬಿಯರ್ ಬಾಟಲ್‌ಗಳನ್ನು ಎಸೆಯಲಾಗಿದೆ. ಕೃತ್ಯ ಎಸಗಿ ಸಿಕ್ಕಿಬಿಳುತ್ತೇವೆ ಎಂದು ಗ್ರಾಪಂ ಕಟ್ಟಡದ ಸಿಸಿಟಿವಿ ಕ್ಯಾಮೆರಾ ತೆಗೆದುಕೊಂಡು ಹೋಗಿದ್ದಾರೆ. ಮಾರಿಹಾಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಗ್ರಾಮದಲ್ಲಿ ಪೊಲೀಸರು ಠಿಕಾಣಿ ಹೂಡಿದ್ದಾರೆ.

# ಮುಡಾದ 50:50 ಅನುಪಾತದ ಫಲಾನುಭವಿಗಳ ಮೊದಲ ಲಿಸ್ಟ್ ಬಿಡುಗಡೆ

**ಮೈಸೂರು:** ಮುಡಾ 50:50 ಅನುಪಾತದ ಫಲಾನುಭವಿಗಳ ಮೊದಲ ಲಿಸ್ಟ್ ಹೊರಬಂದಿದೆ. ಒಬ್ಬ ವ್ಯಕ್ತಿಗೆ ಮುಡಾದಿಂದ ಪರಿಹಾರ ರೂಪದಲ್ಲಿ ಸಿಕ್ಕಿರೋದು ಹತ್ತಲ್ಲ, ಹದಿನೈದಲ್ಲ ಬರೋಬರಿ 20ರಿಂದ 25 ಸೈಟ್ ಎಂಬುದು ಲಿಸ್ಟ್‌ನಿಂದ ಬಹಿರಂಗವಾಗಿದೆ.



50:50 ಅನುಪಾತದ ಮೊದಲ ಲಿಸ್ಟ್‌ನ ಟಾಪ್ ರ್ಯಾಂಕಿಂಗ್‌ನಲ್ಲಿ ಇರೋದು ಅಬ್ದುಲ್ ವ್ಹಾಜಿದ್. ಈ ವ್ಯಕ್ತಿಗೆ 25 ಸೈಟ್ ಸಿಕ್ಕಿದೆ. ಸೈಯದ್ ಯೂಸೂಫ್‌ಗೆ 22 ಸೈಟ್, ಮಲ್ಲಪ್ಪಗೆ 20 ಸೈಟ್ ಮತ್ತು ವೈರಮುಡು ಎಂಬವರಿಗೆ 10 ಸೈಟ್ ನೀಡಲಾಗಿದೆ. ಮೊದಲ ಪಟ್ಟಿಯಲ್ಲಿ 300 ಸೈಟ್‌ಗಳ ಬಗ್ಗೆ ಮಾಹಿತಿ ಸಿಕ್ಕಿದೆ.

50:50 ಅನುಪಾತದ ಸೈಟ್ ಹಂಚುವಲ್ಲಿ ಆಯುಕ್ತರು ಶರವೇಗ ತೋರಿದ್ದಾರೆ. 1962 ರಲ್ಲಿ ವಶಪಡಿಸಿಕೊಂಡ ಭೂಮಿಗೆ 2023 ರಲ್ಲಿ ಪರಿಹಾರ ನೀಡಲಾಗಿದೆ. ಅರ್ಜಿ ಕೊಟ್ಟ 2 ತಿಂಗಳಿಗೆ ಮುಡಾ 25 ಸೈಟ್ ಕೊಟ್ಟಿದೆ. ಅಬ್ದುಲ್ ವಾಜಿದ್‌ನ ಭೂಮಿಗೆ ಪರಿಹಾರ ಕೊಡಿ ಎಂದು 61 ವರ್ಷಗಳ ಬಳಿಕ 2022ರ ಡಿಸೆಂಬರ್‌ನಲ್ಲಿ ಮುಡಾಗೆ ಅರ್ಜಿ ಹಾಕುತ್ತಾರೆ. ಮುಡಾದ ಆಯುಕ್ತರು 2023ರ ಫೆಬ್ರವರಿಯಲ್ಲಿ ಅಂದರೆ ಅರ್ಜಿ ಕೊಟ್ಟ ಎರಡೇ ತಿಂಗಳಿಗೆ 25 ಸೈಟ್ ಮಂಜೂರು ಮಾಡ್ತಾರೆ. ಅಬ್ದುಲ್ ವಾಜಿದ್ ವಂಶಸ್ಥರ ಜಮೀನನ್ನು 1962 ರಲ್ಲಿ ಸ್ವಾಧೀನ ಪಡಿಸಿಕೊಳ್ಳಲಾಗಿತ್ತು.

2009ರ ಹಿಂದಿನ ಬಡಾವಣೆಗಳಿಗೆ 50:50 ಅನುಪಾತ ಅನ್ವಯವಾಗಲ್ಲ. 2009ರ ಹಿಂದಿನ ಸ್ವಾಧೀನ ಪ್ರಕ್ರಿಯೆಗೆ 50:50 ಅನುಪಾತ ಅನುಸರಿಸಿದರೆ ಅದು ಅಕ್ರಮ. ಆದರೆ 25 ಸೈಟ್ ಪಡೆದ ಅಬ್ದುಲ್ ವಾಜಿದ್ ವಂಶದ ಜಮೀನನ್ನು ಪ್ರಾಧಿಕಾರ ವಶಪಡಿಸಿಕೊಂಡಿರುವುದು 1962 ರಲ್ಲಿ. ಅಂದರೆ ಬರೋಬರಿ 61 ವರ್ಷಗಳ ನಂತರ 50:50 ಅನುಪಾತದಲ್ಲಿ ಪರಿಹಾರ ಕೊಟ್ಟಿದೆ. ಅಲ್ಲಿಗೆ ಇದು ಸ್ಪಷ್ಟವಾಗಿ ಅಕ್ರಮ. ಹೀಗೆ ಬಹುತೇಕ ಎಲ್ಲಾ ಸೈಟ್‌ಗಳನ್ನು ಕೊಟ್ಟಿರುವುದು 30-40 ವರ್ಷಗಳ ಹಿಂದಿನ ಪ್ರಕರಣಗಳಿಗೆ. ಅಲ್ಲಿಗೆ ಕಾನೂನು ಪ್ರಕಾರ ಇವು ಅಕ್ರಮ.

ಸಿಎಂ ಪತ್ನಿಗೆ 50:50 ಅನುಪಾತದಲ್ಲಿ ಸೈಟ್ ಕೊಟ್ಟ ಮೇಲೆಯೆ ಉಳಿದ ಎಲ್ಲರಿಗೂ ಸೈಟ್ ಹಂಚಲು ಪ್ಲಾನ್ ನಡೆದಿತ್ತು. ಅದೇ ಪ್ಲಾನ್ ನಂತೆ ಮುಡಾ ಆ ಎಲ್ಲರಿಗೂ ಸೈಟ್ ಹಂಚಿಕೆ ಮಾಡಿದ್ದಾರೆ.

# ಹಿರಿಯ ಶಾಸಕನಾದ್ರೂ ಉದಾಸೀನ ಮನೋಭಾವದಿಂದ ನೋಡ್ತಾರೆ; ಬೈರತಿ ವಿರುದ್ಧ ನಾರಾಯಣಸ್ವಾಮಿ ಬೇಸರ

**ಕೋಲಾರ:** ನಾನು ಜಿಲ್ಲೆಯ ಮಟ್ಟಿಗೆ ಹಿರಿಯ ಶಾಸಕನಾದರು ನನ್ನನ್ನು ಪರಿಗಣಿಸುವುದಿಲ್ಲ. ಜಿಲ್ಲೆಯ ಅಭಿವೃದ್ಧಿ ಸೇರಿದಂತೆ ಪಕ್ಷ ಸಂಘಟನೆ ವಿಚಾರದಲ್ಲಿ ನನ್ನನ್ನು ಉದಾಸೀನ ಮನೋಭಾವದಿಂದ ನೋಡುತ್ತಿದ್ದಾರೆ ಎಂದು ಕೋಲಾರ ಉಸ್ತುವಾರಿ ಸಚಿವ ಬೈರತಿ ಸುರೇಶ್ ವಿರುದ್ಧ ಶಾಸಕ ಹಾಗೂ ಕೆಯುಐಡಿಎಫ್ ಮಂಡಳಿ ಅಧ್ಯಕ್ಷ ಎಸ್.ಎನ್ .ನಾರಾಯಣಸ್ವಾಮಿ ಬೇಸರ ವ್ಯಕ್ತಪಡಿಸಿದ್ದಾರೆ.



ಕೋಲಾರ ಜಿಲ್ಲೆ ಬಂಗಾರಪೇಟೆಯ ಪುರಸಭೆಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ವರ್ಗಾವಣೆ ವಿಚಾರದಲ್ಲಿ ನನ್ನ ಮಾತಿಗೆ ಮನ್ನಣೆ ನೀಡುತ್ತಿಲ್ಲ. ಜಿಲ್ಲೆಯಲ್ಲಿರುವ ಗುಂಪುಗಳಲ್ಲಿ ಗುರುತಿಸಿಕೊಳ್ಳಲು ನನಗೆ ಇಷ್ಟವಿಲ್ಲ. ಕೋಲಾರ ಕಾಂಗ್ರೆಸ್ ಹೊಲಸಾಗಿದೆ. ಇಲ್ಲಿ ಯರ್‍ಯಾರೋ ನಾಯಕರಾಗಿದ್ದಾರೆ. ಇತ್ತೀಚೆಗೆ ಕಾಂಗ್ರೆಸ್ ಸಭೆಯಲ್ಲಿ ನಡೆದ ಗಲಾಟೆಯಿಂದ, ತಲೆ ತಗ್ಗಿಸುವಂತಾಗಿದೆ. ಹಿರಿಯ, ಕಿರಿಯ ಶಾಸಕರು ಯಾರೆಂದು ತಿಳಿದು ಆದ್ಯತೆ ನೀಡಬೇಕೆಂದು ಉಸ್ತುವಾರಿ ಸಚಿವ ಬೈರತಿ ಸುರೇಶ್ ವಿರುದ್ಧ ಬಹಿರಂಗವಾಗಿ ಅಸಮಾಧಾನ ಹೊರಹಾಕಿದರು.

ಸದ್ಯಕ್ಕೆ ನನಗೆ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡಿದ್ದಾರೆ. ಎರಡೂವರೆ ವರ್ಷದ ನಂತರ ನಂಗೆ ಮಂತ್ರಿ ಸ್ಥಾನ ನೀಡುವ ಭರವಸೆಯನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೀಡಿದ್ದಾರೆ. ವಕ್ಫ್ ಬೋರ್ಡ್ ವಿವಾದ ವಿಚಾರದಲ್ಲಿ ನಾವು ರೈತರ ಪರ ನಿಲ್ಲುತ್ತೇವೆ. ಯಾವುದೇ ಕಾರಣಕ್ಕೂ ವಕ್ಫ್ ಬೋರ್ಡ್‌ಗೆ ರೈತರ ಆಸ್ತಿ ನೀಡಬಾರದು. ಈಗಾಗಲೇ ಸಿಎಂ ಸಿದ್ದರಾಮಯ್ಯ ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. ಬಿಜೆಪಿ ನಾಯಕ ಸಿ.ಟಿ ರವಿ ಏನೇನೋ ಹೇಳಿಕೆ ನೀಡುತ್ತಿದ್ದು, ಕೇವಲ ರಾಜಕೀಯ ಮಾಡಲು, ಬಿಜೆಪಿ, ಜೆಡಿಎಸ್ ಹೋರಾಟ ಮಾಡುತ್ತಿದೆ ಎಂದು ಕಿಡಿಕಾರಿದರು. ಇನ್ನು ರಾಜ್ಯ ಕಾಂಗ್ರೆಸ್‌ನಲ್ಲಿ 5 ವರ್ಷದಲ್ಲಿ ಅಧಿಕಾರ ಹಂಚಿಕೆ ವಿಚಾರ ಕುರಿತು ಮಾತನಾಡಿದ ಅವರು, ಅಂತಹ ಯಾವುದೇ ಹಂಚಿಕೆ ಒಪ್ಪಂದವೂ ಆಗಿಲ್ಲ. ಎಲ್ಲವೂ ಹೈಕಮಾಂಡ್ ನಿರ್ಧಾರಕ್ಕೆ ಬಿಟ್ಟದ್ದು ಎಂದರು. 5 ವರ್ಷ ಸಿಎಂ ಆಗಿರ್ತೀನಿ ಎಂಬ ಸಿಎಂ ಸಿದ್ದರಾಮಯ್ಯ ಹೇಳಿಕೆ ವಿಚಾರದ ಕುರಿತು ಪ್ರತಿಕ್ರಿಯಿಸಿ, ಅದು ಸಹಜ ಹೇಳಿಕೆ. ಆದರೆ ಎಲ್ಲವೂ ಹೈಕಮಾಂಡ್ ನಿರ್ಧಾರ ಮಾಡುತ್ತೆ ಎಂದು ತಿಳಿಸಿದರು.

# ಚೀನಾದಿಂದ ಪಿಪಿಇ ಕಿಟ್ ತರಿಸಿ ಸಾವಿರಾರು ಕೋಟಿ ಲೂಟಿ ರಾಮುಲು, ಬಿಎಸ್‌ವೈ ವಿರುದ್ಧ ಸಿಎಂ ಬಾಂಬ್

**ಬಳ್ಳಾರಿ:** ಬಿಜೆಪಿ ಸರ್ಕಾರ ಇದ್ದಾಗ ಕೋವಿಡ್ ವೇಳೆ ಸಾವಿರಾರು ಕೋಟಿ ಲೂಟಿ ಹೊಡೆದಿದ್ದಾರೆ. ದೇಶದಲ್ಲೇ ಅಗತ್ಯ ವಸ್ತುಗಳು ಸಿಕ್ಕರೂ ಚೀನಾದಿಂದ ಪಿಪಿಇ ಕಿಟ್ ತರಿಸಿ ಲೂಟಿ ಹೊಡೆದರು. ಆಗ ಯಡಿಯೂರಪ್ಪ ಸಿಎಂ ಆಗಿದ್ದರು, ಶ್ರೀರಾಮುಲು ಮಂತ್ರಿ ಆಗಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬಾಂಬ್ ಸಿಡಿಸಿದ್ದಾರೆ.



ಮೆಟ್ರಿಕಿ ಗ್ರಾಮದಲ್ಲಿ ನಡೆದ ಕಾಂಗ್ರೆಸ್ ಸಮಾವೇಶದಲ್ಲಿ ಸಿದ್ದರಾಮಯ್ಯ ಅವರು ಬಳ್ಳಾರಿ ಜಿಲ್ಲೆ ಸಂಡೂರು ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪರ ಮತಯಾಚನೆ ನಡೆಸಿದರು. ಬಳಿಕ ಮಾತನಾಡಿ, ಸಂಡೂರು ವಿಧಾನಸಭಾ ಕ್ಷೇತ್ರ ಕಾಂಗ್ರೆಸ್‌ನ ಭದ್ರ ಕೋಟೆ. ಕಾಂಗ್ರೆಸ್ ಪಕ್ಷ ಯಾವತ್ತಿಗೂ ಕೂಡ ಬಡವರ ಪರ, ದೀನದಲಿತರ ಪರ, ಅಲ್ಪಸಂಖ್ಯಾತರು, ಮಹಿಳೆಯರ ಪರ ಇರುವ ಸರ್ಕಾರ. ನೆಹರು, ಇಂದಿರಾ ಗಾಂಧಿ, ರಾಜೀವ್ ಗಾಂಧಿ, ಮನಮೋಹನ್ ಸಿಂಗ್ ಕಾಲದಿಂದಲೂ ಬಡವರ ಪರ ಇರುವ ಸರ್ಕಾರ. ಭಾರತ ದೇಶ ಆಹಾರದಲ್ಲಿ ಸ್ವಾಲಂಭಿ ಆಗಿದೆ, ಅಂದ್ರೆ ಅದಕ್ಕೆ ಕಾಂಗ್ರೆಸ್ ಕಾರಣ ಎಂದು ಬೀಗಿದರು.

ಲಾಲ್‌ಬಹದ್ದೂರ್ ಶಾಸ್ತ್ರಿ ಅವರ ಕಾಲದಲ್ಲಿ ಹಸಿರು ಕ್ರಾಂತಿ ಮಾಡಿದ್ರು. ಆಗ ಭಾರತ ದೇಶವನ್ನ ಆಹಾರದಲ್ಲಿ ಸ್ವಾಲಂಬಿಯನ್ನಾಗಿ ಮಾಡಿದ್ರು. ಬಿಜೆಪಿ ಅಂದ್ರೆ ಕೇವಲ ಮೇಲ್ವರ್ಗದ ಪಕ್ಷ. ಬಡವರ ಪರ, ರೈತರ ಪರವಾದ ಸರ್ಕಾರ ಬಿಜೆಪಿ ಅಲ್ಲಾ. ಬಿಜೆಪಿಯವರು ಕರ್ನಾಟಕದಲ್ಲಿ ಅಧಿಕಾರದಲ್ಲಿದ್ದರೂ ಬಡವರಿಗೋಸ್ಕರ ಏನೂ ಕೆಲಸ ಮಾಡಿಲ್ಲ. ಅಧಿಕಾರ ಕೊಟ್ರು, ಏನು ಕೆಲಸ ಮಾಡಿಲ್ಲ. ಆದ್ರೆ, ಕಾಂಗ್ರೆಸ್ ಅನ್ನಭಾಗ್ಯ, ಕೃಷಿ ಭಾಗ್ಯ, ಮೈತ್ರಿ, ಮನಸ್ವಿನಿ, ಮಾತೃಪೂರ್ಣ, ರೈತರ ಸಾಲ ಮನ್ನಾ ಹತ್ತು ಹಲವು ಕಾರ್ಯಕ್ರಮಗಳನ್ನ ಮಾಡಿದೆ. ಯಡಿಯೂರಪ್ಪ ಕೇವಲ ಸೈಕಲ್ ಕೊಟ್ಟೆ, ಸೀರೆ ಕೊಟ್ಟೆ ಅಂತಾ ಹೇಳ್ತಾರೆ. ಇವೆರಡನ್ನ ಬಿಟ್ಟು ಉಳಿದಿದ್ದೆಲ್ಲವನ್ನ ಲೂಟಿ ಮಾಡಿದ್ದಾರೆ ಎಂದು ಕುಟುಕಿದರು.

ಕೋವಿಡ್ ಸಂದರ್ಭದಲ್ಲಿ ಸಾವಿರಾರು ಕೋಟಿ ಲೂಟಿ ಹೊಡೆದಿದ್ದಾರೆ. ಎಷ್ಟು ಲೂಟಿ ಹೊಡೆದಿದ್ದಾರೆ ಅಂದ್ರೆ, ಹೆಣ ಹೂಳುವುದರಲ್ಲೂ ಹಣ ಲೂಟಿ ಹೊಡೆದಿದ್ದಾರೆ. ಶ್ರೀರಾಮುಲು ಆಗ ಮಂತ್ರಿ ಇದ್ದರು, ಯಡಿಯೂರಪ್ಪ ಸಿಎಂ ಆಗಿದ್ದರು. ಚೀನಾಕ್ಕೆ ಹೋಗಿ ಪಿಪಿಇ ಕಿಟ್ ತಂದ್ರು. ದೇಶದಲ್ಲಿ ವಸ್ತು ಸಿಗುತ್ತಿದ್ದರೂ ಚೀನಾದಿಂದ ತಂದು ಭ್ರಷ್ಟಾಚಾರ ಮಾಡಿದ್ರು. ಅದರಲ್ಲಿ ಕೋಟಿ ಕೋಟಿ ಹಣ ಲೂಟಿ ಹೊಡೆದಿದ್ದಾರೆ. ಭ್ರಷ್ಟಾಚಾರ ಮಾಡಿದವರ ಮೇಲೆ ಕ್ರಮ ಕೈಗೊಳ್ಳಬೇಕು. ಇವರ ಮೇಲೆ ಕ್ರಮಕ್ಕೆ ಶಿಫಾರಸ್ಸು ಮಾಡಿದ್ದಾರೆ. ಯಡಿಯೂರಪ್ಪ, ಶ್ರೀರಾಮುಲು ಭ್ರಷ್ಟಾಚಾರ ಲೂಟಿ ಮಾಡೋದು ಬಿಟ್ರೆ ಏನೂ ಮಾಡಿಲ್ಲ. ಜನಾರ್ದನ ರೆಡ್ಡಿ ಚುನಾವಣೆ ಉಸ್ತುವಾರಿ ತೆಗೆದುಕೊಂಡಿದ್ದಾರೆ. ಲೂಟಿ ಹೊಡೆದವರಿಗೆ ಮನ್ನಣೆ ನೀಡಬೇಡಿ ಎಂದು ಕರೆ ಕೊಟ್ಟರು.

ಅಂದು ಅಕ್ರಮ ಗಣಿ ಬಗ್ಗೆ ಸಂತೋಷ ಹೆಗಡೆ ವರದಿ ಹಿನ್ನಲೆ ಪಾದಯಾತ್ರೆ ಮಾಡಿದೆ. ರಿಪಬ್ಲಿಕ್ ಆಫ್ ಬಳ್ಳಾರಿ ಎಂದು ಸಂತೋಷ ಹೆಗಡೆ ವರದಿ ನೀಡಿದ್ರು. ಈ ವರದಿಯ ಸದನದಲ್ಲಿ ಪ್ರಸ್ತಾಪಿಸಿದ ಹಿನ್ನಲೆ ನನ್ನ ಮೇಲೆ ಹೊಡೆಯಲು ಬಂದ್ರು, ಆಗ ಪಾದಯಾತ್ರೆ ಮಾಡಿದೆವು. ಆಗ ಬಳ್ಳಾರಿಯಿಂದ ಹೊರಗೆ ಹೋದವರು ಈಗ ಬಳ್ಳಾರಿಗೆ ಬಂದಿದ್ದಾರೆ. ಜನಾರ್ದನ ರೆಡ್ಡಿ ಶೋಷಣೆ ಜನರಿಗೆ ಗೊತ್ತಿದೆ. ನನ್ನ ಬಗ್ಗೆ ಮಾತನಾಡಲು ಯಾವ ಯೋಗ್ಯತೆಯೂ ಅವರಿಗೆ ಇಲ್ಲ. ಜನಾರ್ದನ ರೆಡ್ಡಿ ಒಮ್ಮೆ ಮಂತ್ರಿಯಾಗಿ ಇಡೀ ರಾಜ್ಯ ಲೂಟಿ ಹೊಡೆದ್ರು. ಈಗ ನನ್ನ ಮೇಲೆಯೇ ಕೇಂದ್ರ ಸರ್ಕಾರ ಮತ್ತು ರಾಜ್ಯಪಾಲರನನ್ನು ಬಳಸಿಕೊಂಡು ಕೇಸ್ ಹಾಕಿಸಿದ್ದಾರೆ ಎಂದು ಗುಡುಗಿದರು.

# 'ಭಾಗ್ಯಲಕ್ಷ್ಮಿ' ಯೋಜನೆಗೆ ಹಣ ಕೊಡಲಾರದಷ್ಟು ಸರ್ಕಾರ ದಿವಾಳಿ

**ಕೊಪ್ಪಳ/ಬಳ್ಳಾರಿ:** ನಾನು ಮುಖ್ಯಮಂತ್ರಿಯಾಗಿದ್ದಾಗ ಹೆಣ್ಣು ಮಗುವಿನ ಭವಿಷ್ಯಕ್ಕಾಗಿ ರೂಪಿಸಿದ್ದ ಭಾಗ್ಯಲಕ್ಷ್ಮಿ ಬಾಂಡ್ ಯೋಜನೆಯನ್ನೇ ಸರ್ಕಾರ ನಿಲ್ಲಿಸಿದೆ. ಈಗ ಅದರ ಮೆಚ್ಯೂರಿಟಿ ಹಣ ಕೊಡಲು ದುಡ್ಡು ಇಲ್ಲದಷ್ಟು ಸರ್ಕಾರ ದಿವಾಳಿಯಾಗಿದೆ. ಆದರೂ ನಾನು ಬಿಡುವುದಿಲ್ಲ, ಹೋರಾಟ ಮಾಡಿಯಾದರೂ ಭಾಗ್ಯಲಕ್ಷ್ಮಿ ಬಾಂಡ್ ಹಣವನ್ನು ಕೊಡಿಸುತ್ತೇನೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದರು.



ಬಳ್ಳಾರಿಯ ಸಂಡೂರು ವಿಧಾನಸಭೆ ಕ್ಷೇತ್ರದಲ್ಲಿ ಎರಡನೇ ದಿನವೂ ಅಬ್ಬರದ ಪ್ರಚಾರ ನಡೆಸಿದ ಅವರು ತಾರಾನಗರ, ಬನ್ನಿಹಟ್ಟಿ, ತಾಳೂರು ಗ್ರಾಮಗಳ ಬಹಿರಂಗ ಸಮಾವೇಶದಲ್ಲಿ ಮಾತನಾಡಿದರು. ಭಾಗ್ಯಲಕ್ಷ್ಮಿ ಬಾಂಡ್ ಯೋಜನೆ ಪ್ರತಿ ಕುಟುಂಬಕ್ಕೆ ಆಧಾರವಾದ ಯೋಜನೆ. ಹೆಣ್ಣು ಮಗು ಜನನದ ವೇಳೆ ಮೂಗು ಮುರಿಯುತ್ತಿದ್ದವರು ಈ ಯೋಜನೆ ಜಾರಿಯಿಂದ ನಿಶ್ಚಿಂತರಾಗಿದ್ದರು. ಸಾವಿರಾರು ಕುಟುಂಬಗಳು ಈಗ ಮೆಚ್ಯೂರಿಟಿ ಹಣಕ್ಕಾಗಿ ಕಾಯುತ್ತಿವೆ. ಈ ಸರ್ಕಾರ ದುಡ್ಡು ಕೊಡುತ್ತಿಲ್ಲ. ದುಡ್ಡು ಕೊಡುವವರೆಗೂ ನಾನು ಬಿಡುವುದಿಲ್ಲ ಎಂದರು. ಕಿಸಾನ್ ಸಮ್ಮಾನ್ ಯೋಜನೆ ರಾಜ್ಯದ ರೈತರಿಗೆ ವರವಾಗಿತ್ತು. ಮೋದಿ ಸರ್ಕಾರ 6 ಸಾವಿರ ರೂ., ರಾಜ್ಯ ಸರ್ಕಾರ 4 ಸಾವಿರ ರೂ. ಸೇರಿ 10 ಸಾವಿರ ರೂ. ಹಣವನ್ನು ರೈತರಿಗೆ ನೀಡುತ್ತಿತ್ತು. ಇದು ರೈತರ ಬಿತ್ತನೆ, ರಸಗೊಬ್ಬರ ಸೇರಿ ಕೃಷಿ ಚಟುವಟಿಕೆಗೆ ಅನುಕೂಲವಾಗಿತ್ತು. ಆದರೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಈ ಯೋಜನೆ ನಿಲ್ಲಿಸಿದೆ. ಇದು ಸಿದ್ದರಾಮಯ್ಯ ರೈತರಿಗೆ ಮಾಡಿದ ಅನ್ಯಾಯವಾಗಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮುಡಾ, ವಾಲ್ಮೀಕಿ ಹಗರಣದಲ್ಲಿ ಸಿಲುಕಿ ನರಳಾಡುತ್ತಿದ್ದಾರೆ. ದ್ವೇಷದ ರಾಜಕಾರಣ ಮಾಡಲು ಹೊರಟಿದ್ದಾರೆ. ನಿಮ್ಮ ಯಾವ ಗೊಡ್ಡು ಬೆದರಿಕೆಗೆ ನಾವು ಹೆದರುವುದಿಲ್ಲ. ಸಿಎಂಗೆ ಉಪಚುನಾವಣೆಯಲ್ಲಿ ಸೋಲುವ ಭೀತಿ ಉಂಟಾಗಿದೆ. ಹಣ, ಅಧಿಕಾರ, ಹೆಂಡವನ್ನು ಕೊಟ್ಟು ಚುನಾವಣೆಯಲ್ಲಿ ಗೆಲ್ಲಬೇಕು ಎಂದು ಹೊರಟಿದ್ದಾರೆ. ಆದರೆ ರಾಜ್ಯದ ಜನರು ಪ್ರಜ್ಞಾವಂತರಾಗಿದ್ದಾರೆ. ನಿಮ್ಮ ತೋಳ್ಬಲ, ಹಣದ ಬಲ ನಡೆಯುವುದಿಲ್ಲ. ಸಂಡೂರು ಸೇರಿ ರಾಜ್ಯದ ಮೂರು ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿಗಳು ಅಭೂತಪೂರ್ವ ಜಯ ಸಾಧಿಸಲಿದ್ದಾರೆ ಎಂದು ಹೇಳಿದರು.

ಮಾಜಿ ಸಚಿವ ಜನಾರ್ದನರೆಡ್ಡಿ ಮಾತನಾಡಿ, ಸಿಎಂ ಸಿದ್ದರಾಮಯ್ಯಗೆ ನಾನು ಕನಸಿನಲ್ಲೂ ಕಾಡುತ್ತಿದ್ದೇನೆ. ಅದಕ್ಕಾಗಿ ಹೋದಲ್ಲೆಲ್ಲ ನನ್ನ ನಿಂದನೆ ಮಾಡುತ್ತಾರೆ. ನನ್ನ ನಿಂದನೆಯಿಂದಲೇ ಅವರು ತಮ್ಮ ದಿನಚರಿಯನ್ನು ಆರಂಭಿಸುತ್ತಿದ್ದಾರೆ. ತಾವು ಮಾಡಿದ ಹಗರಣಗಳಿಂದ ಜೈಲಿಗೆ ಹೋಗುವ ಭೀತಿಯಿಂದ ಹೀಗೆ ನನ್ನನ್ನು ನಿಂಧಿಸುತ್ತಿದ್ದಾರೆ. ಶೀಘ್ರವೇ ಅವರಿಗೆ ಆ ಚಾಮುಂಡಿಯೇ ಶಿಕ್ಷೆ ನೀಡಲಿದ್ದಾರೆ. ಸಂಡೂರಿಗೆ ತುಕಾರಂ ಕೊಡುಗೆ ಏನಿಲ್ಲ. ಇಲ್ಲಿನ ಜನರು ಹೋದೆಲ್ಲೆಲ್ಲ ಅವರನ್ನು ತಿರಸ್ಕಾರ ಮಾಡುತ್ತಿದ್ದಾರೆ. ಉಪಚುನಾವಣೆಯಲ್ಲಿ ಅವರಿಗೆ ಸೋಲು ಕಟ್ಟಿಟ್ಟ ಬುತ್ತಿ. ಬಂಗಾರು ಹನುಮಂತು ಹೆಚ್ಚು ಬಹುಮತದಿಂದ ಜಯಗಳಿಸಲಿದ್ದಾರೆ. ಬಿಜೆಪಿ ಅಭ್ಯರ್ಥಿ ಗೆಲ್ಲುವುದರಿಂದ ಸಂಡೂರಿನ ಭಾಗ್ಯದ ಬಾಗಿಲು ತೆಗೆಯಲಿದೆ ಎಂದರು.

# ಪತ್ನಿ, ಮಗುವನ್ನು ಕೊಂದು ತಾನೂ ಆತ್ಮಹತ್ಯೆಗೆ ಶರಣಾದ ಪತಿ

ಶುಕ್ರವಾರ ಮಧ್ಯಾಹ್ನ ಕಾರ್ತಿಕ್ ಮೃತದೇಹ ಪತ್ತೆಯಾಗಿತ್ತು. ಇಂದು ಮಧ್ಯಾಹ್ನದ ವೇಳೆಗೆ ಕಾರ್ತಿಕ್ ಮನೆಗೆ ಬಂದು ನೋಡಿದಾಗ ಘಟನೆ ಬೆಳಕಿಗೆ ಬಂದಿದೆ. ಕಾರ್ತಿಕ್ ಕುಟುಂಬಕ್ಕೆ ಮೂರು ವರ್ಷದಿಂದ ತಂದೆ-ತಾಯಿ ಜೊತೆ ಮಾತುಕತೆ ಇರಲಿಲ್ಲ. ಶುಕ್ರವಾರ ರಾತ್ರಿ ಕಾರ್ತಿಕ್ ಕುಟುಂಬ ಹೊರಗೆ ಹೋಗಿರಬಹುದು ಎಂದು ಕಾರ್ತಿಕ್ ತಂದೆ ಭಾವಿಸಿದ್ದರು. ಇಂದು ಮಧ್ಯಾಹ್ನವೇ ಅವರಿಗೆ ವಿಷಯ ಗೊತ್ತಾಗಿದೆ ಎಂದರು.

ಕಾರ್ತಿಕ್ ಇತ್ತೀಚೆಗೆ ಆರ್ಥಿಕ ಸಮಸ್ಯೆಯಿಂದ ಇರೋದು ಕೂಡಾ ಗೊತ್ತಾಗಿದೆ. ವಾಷ್‌ರೂಂನ ಕಿಟಕಿ ಗ್ಲಾಸ್ ಒಡೆದು ಪತ್ನಿ, ಮಗುವಿನ ಹತ್ಯೆ ಮಾಡಿದ್ದಾನೆ. ಇಬ್ಬರ ದೇಹದ ಬೇರೆ ಬೇರೆ ಭಾಗದಲ್ಲಿ ಗಾಯಗಳಾಗಿವೆ. ಕೋಣೆಯಲ್ಲೇ ಫ್ಯಾನ್‌ಗೆ ನೇಣುಹಾಕಲು ಯತ್ನಿಸಿದ್ದಾನೆ. ಬಳಿಕ ರೈಲಿಗೆ ತಲೆ ಕೊಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಕಾರ್ತಿಕ್ ಕೃತ್ಯ ಎಸಗುವ ಮುನ್ನ ಸುಧೀರ್ಘ ಡೆತ್‌ನೋಟ್ ಬರೆದಿದ್ದಾನೆ. ತನ್ನ ಅಂತ್ಯಸಂಸ್ಕಾರ, ಆಸ್ತಿ ಯಾರ ಪಾಲಾಗಬೇಕೆಂದು ಡೆತ್ ನೋಟ್‌ನಲ್ಲಿದೆ. ತನ್ನ ತಂದೆ ತಾಯಿ ಅಂತ್ಯಸಂಸ್ಕಾರ ಮಾಡಬಾರದು ಎಂಬುವುದು ಉಲ್ಲೇಖಿಸಿದ್ದಾನೆ. ತಮ್ಮ ಸಾವಿಗೆ ಯಾರೂ ಕಾರಣ ಅಲ್ಲ ಎಂದು ಡೆತ್‌ನೋಟ್ ನಲ್ಲಿ ಬರೆದಿದ್ದಾನೆ. ಕಾರ್ತಿಕ್ ಪತ್ನಿ ಪ್ರಿಯಾಂಕ ಶಿವಮೊಗ್ಗ ಮೂಲದವರು. ಆಕೆಯ ಹೆತ್ತವರು ಬಂದ ಬಳಿಕ ಶವ ಪೋಸ್ಟ್ಮಾರ್ಟಂಗೆ ಕಳುಹಿಸಲು ವ್ಯವಸ್ಥೆ ಮಾಡಲಾಗುತ್ತದೆ ಎಂದು ಕಮೀಷನರ್ ಮಾಹಿತಿ ನೀಡಿದ್ದಾರೆ.

## ವಕ್ಫ್ ನೋಟಿಸ್ ವಾಪಸ್

ಮ್ಯುಟೇಷನ್ ಪ್ರಕ್ರಿಯೆ ಸ್ಥಗಿತಗೊಳಿಸಬೇಕು. ಈ ಕುರಿತು ನೀಡಲಾದ ನೋಟೀಸ್‌ಗಳನ್ನ ಹಿಂಪಡೆಯುವುದು, ಸದರಿ ಜಮೀನುಗಳಲ್ಲಿ ವ್ಯವಸಾಯ ಮಾಡುವ ರೈತರ ವಿರುದ್ಧ ಯಾವುದೇ ಕ್ರಮ ಜರುಗಿಸುವಂತಿಲ್ಲ ಎಂದು ಅದೇಶ ಹೊರಡಿಸಿದೆ.

**ಆರಂಭವಾಗಿದ್ದೆಲ್ಲಿಂದ?:** ವಿಜಯಪುರ ಜಿಲ್ಲೆಯ ರೈತರಿಗೆ ವಕ್ಫ್ ಬೋರ್ಡ್‌ನಿಂದ ಬಂದ ನೋಟಿಸ್ ಶಾಕ್ ನೀಡಿತ್ತು. ತಲೆತಲಾಂತರಗಳಿಂದ ಉಳುಮೆ ಮಾಡಿಕೊಂಡು ಬಂದದ್ದ ರೈತರು ಜಮೀನು ಕಳೆದುಕೊಳ್ಳುವ ಆತಂಕ ಎದುರಿಸಿದ್ದರು. ನೋಟಿಸ್‌ನಲ್ಲಿ ಅವರು ಉಳುಮೆ ಮಾಡುತ್ತಿದ್ದ ಜಮೀನು ವಕ್ಫ್ ಸ್ವತ್ತು ಎಂದು ಹೇಳಲಾಗಿತ್ತು. ಅಷ್ಟೇ ಅಲ್ಲದೆ ರೈತರ ಪಹಣಿಯಲ್ಲೂ ವಕ್ಫ್ ಜಮೀನು ಎಂದು ಬದಲಾವಣೆ ಮಾಡಲಾಗಿತ್ತು. ಇದು ರೈತರ ಆತಂಕಕ್ಕೆ ಕಾರಣವಾಗಿತ್ತು.

## ಮುಸ್ಲಿಮರಿಗೆ ಮೀಸಲಾತಿ ಕೊಟ್ಟಿದ್ದು ಹೆಚ್.ಡಿ.ದೇವೇಗೌಡರಲ್ಲ: ಜಮೀರ್

ಯಾವ ಮುಖ ಇಟ್ಕೊಂಡು ಮುಸಲ್ಮಾನರ ವೋಟ್ ಕೇಳ್ತಾರೆ? ಯತ್ನಾಳ್ ಹೇಳ್ತಾರೆ ಮುಸಲ್ಮಾನರು, ಗಡ್ಡ ಬಿಟ್ಟವರು, ಟೋಪಿ ಹಾಕಿದವ್ರು ನಮ್ಮ ಹತ್ತಿರ ಬರೋದು ಬೇಡ ಅಂತಾ. ಅವರನ್ನ ಒಪ್ಪಿಸೋಕೆ ಹೇಳಿ ಬಿಜೆಪಿ ಅವ್ರು, ಮುಸಲ್ಮಾನರ ಪರವಾಗಿದ್ದೆವು ಅಂತಾ ಒಪ್ಪಿಸಲು ಹೇಳಿ. ಆಗ ಮುಸಲ್ಮಾನರು ಅವರ ಪಕ್ಷಕ್ಕೆ ವೋಟ್ ಹಾಕಲು ಚಿಂತನೆ ಮಾಡ್ತಾರೆ ಎಂದು ಟಾಂಗ್ ಕೊಟ್ಟಿದ್ದಾರೆ.

ಯೋಗೇಶ್ವರ್ ಈ ತಾಲೂಕಿನಲ್ಲಿ ಕೆಲಸ ಮಾಡಿದ್ದಾರೆ. ಕೆರೆ ತುಂಬಿಸಿ ಬಹಳಷ್ಟು ಅಭಿವೃದ್ಧಿ ಕೆಲಸ ಮಾಡ್ತಾ ಇದ್ರು ಅಂತಾ ಜನ ಹೇಳ್ತಾ ಇದ್ದಾರೆ. ಭಾವನಾತ್ಮಕವಾಗಿ ಮತ ಕೇಳೋದು ಅವರಿಗೆ ಮೊದಲಿನಿಂದಲೂ ಬಂದಿರುವುದು ಎಂದು ವ್ಯಂಗ್ಯವಾಡಿದ್ದಾರೆ. ಪ್ರಚಾರದ ವೇಳೆ ಸಚಿವ ಜಮೀರ್‌ಗೆ ಸಚಿವ ರಹೀಂ ಖಾನ್, ಮಾಜಿ ಸಂಸದ ಡಿ.ಕೆ.ಸುರೇಶ್, ಕಾಂಗ್ರೆಸ್ ನಾಯಕ ಮೊಹಮ್ಮದ್ ನಲಪಾಡ್ ಸಾಥ್ ನೀಡಿದ್ದಾರೆ.

## ಚುನಾವಣೆ ವೇಳೆ ಕಾಂಗ್ರೆಸ್‌ಗೆ ಸಿಕ್ತು ಬ್ರಹ್ಮಾಸ್ತ್ರ

ಕೇವಲ ಕರ್ನಾಟಕದಲ್ಲಿ ಮಾತ್ರವಲ್ಲ ದೇಶದ ವಿವಿಧ ರಾಜ್ಯಗಳಲ್ಲಿ ನಡೆಯುತ್ತಿರುವ ಚುನಾವಣೆ ಪ್ರಚಾರದಲ್ಲೂ ಈ ಬ್ರಹ್ಮಾಸ್ತ್ರದ ಪ್ರಯೋಗಕ್ಕೆ ಕಾಂಗ್ರೆಸ್ ನಿರ್ಧರಿಸಿದೆ ಎಂಬ ಮಾತು ಕೇಳಿಬಂದಿದೆ. ರಾಜ್ಯದಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರ ಪ್ರಕರಣವನ್ನು ರಾಷ್ಟ್ರಮಟ್ಟದಲ್ಲಿ ಪ್ರಸ್ತಾಪಿಸಿ ಬಿಜೆಪಿ ನಾಯಕರಿಗೆ ಮುಜುಗರ ಉಂಟುಮಾಡುವ ಪ್ಲಾನ್ ಅನ್ನು ಕಾಂಗ್ರೆಸ್ ಹೈಕಮಾಂಡ್ ಮಾಡಿದೆ ಎಂದು ಹೇಳಲಾಗಿದೆ.

**ಏನದು ಕಾಂಗ್ರೆಸ್‌ಗೆ ಸಿಕ್ಕ ಬ್ರಹ್ಮಾಸ್ತ್ರ?:** ರಾಜ್ಯ ರಾಜಕಾರಣದಲ್ಲಿ ಕೊರೋನ ಹಗರಣ ಮತ್ತೆ ಸದ್ದು ಮಾಡುತ್ತಿದೆ. 2020ರಲ್ಲಿ ಕೊರೋನ ದೇಶವನ್ನು ವ್ಯಾಪಿಸಿಕೊಂಡು, ಮಾರಣಹೋಮ ನಡೆಸುತ್ತಿದ್ದಾಗಲೂ ಕರ್ನಾಟಕದಲ್ಲಿ ಅಂದಿನ ರಾಜ್ಯ ಬಿಜೆಪಿ ಸರ್ಕಾರ ಕೊರೋನ ನಿರ್ವಹಣೆಯಲ್ಲೂ ಭ್ರಷ್ಟಾಚಾರ ನಡೆಸಿತ್ತು ಎನ್ನುವ ಆರೋಪವನ್ನು ಕಾಂಗ್ರೆಸ್ ಮಾಡಿತ್ತು. ಕೋವಿಡ್ ನಿರ್ವಹಣೆಯಲ್ಲಿ ಬರೋಬ್ಬರಿ 40,000 ಕೋಟಿ ರೂ. ಹಗರಣ ನಡೆದಿದೆ ಎಂದು ಸ್ವತಃ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆರೋಪಿಸಿದ್ದರು. ಅವರ ಆರೋಪದ ಬಳಿಕ ರಾಜ್ಯ ಕಾಂಗ್ರೆಸ್ ಸರ್ಕಾರ ಕೋವಿಡ್ ಹಗರಣದ ಬಗ್ಗೆ ತನಿಖೆಗಾಗಿ ಹೈಕೋರ್ಟ್ ನಿವೃತ್ತ ನ್ಯಾಯಾಧೀಶ ಜಾನ್ ಮೈಕಲ್ ಕುನ್ಹಾ ನೇತೃತ್ವದಲ್ಲಿ ವಿಚಾರಣಾ ಆಯೋಗವನ್ನು ರಚಿಸಿತ್ತು. ಇದೀಗ ಕೋವಿಡ್ ಅಕ್ರಮಗಳ ಬಗ್ಗೆ ಜಸ್ಟಿಸ್ ಮೈಕೆಲ್ ಡಿ ಕುನ್ಹಾ ಅವರು ದಾಖಲೆ ಸಮೇತ ಸರ್ಕಾರಕ್ಕೆ ವರದಿ ನೀಡಿದ್ದಾರೆ. ಪಿಪಿಇ ಕಿಟ್ ಖರೀದಿಯಲ್ಲಿ ಅಕ್ರಮವೆಸಗಿದ ಅಂದಿನ ಸಿಎಂ ಯಡಿಯೂರಪ್ಪ ಮತ್ತು ಅಂದಿನ ಆರೋಗ್ಯ ಸಚಿವ ಶ್ರೀರಾಮುಲು ವಿರುದ್ಧ ಪ್ರಾಸಿಕ್ಯೂಷನ್ ನಡೆಸಲು ಶಿಫಾರಸು ಮಾಡಿದೆ. ತಪ್ಪಿತಸ್ಥ ಅಧಿಕಾರಿಗಳ ಮೇಲೆ ಕ್ರಮಕ್ಕೂ ಶಿಫಾರಸು ಮಾಡಲಾಗಿದೆ.

## ಮೊದಲನೇ ಪುಟದಿಂದ...

**ರಾಷ್ಟ್ರಮಟ್ಟದಲ್ಲಿ ಪ್ರಸ್ತಾಪಿಸಲು ಹೈಕಮಾಂಡ್ ನಿರ್ಧಾರ?:** ಚೀನಾ ಜೊತೆ ವಹಿವಾಟು ನಿರ್ಬಂಧ ಸಂದರ್ಭದಲ್ಲೇ ದೇಶೀಯ ಸಂಸ್ಥೆಗಳು ಸರಬರಾಜು ಅವಕಾಶ ಇದ್ದರೂ ಹೆಚ್ಚು ಹಣ ನೀಡಿ ಚೀನಾದಿಂದ ಪಿಪಿಇ ಕಿಟ್ ಖರೀದಿ ಮಾಡಲಾಗಿತ್ತು. 3 ಲಕ್ಷ ಪಿಪಿಇ ಕಿಟ್ ಖರೀದಿಯಲ್ಲಿ 14 ಕೋಟಿ ಭ್ರಷ್ಟಾಚಾರ ಮಾಡಲಾಗಿದೆ ಎನ್ನುವ ಆರೋಪ ಕೇಳಿಬಂದಿದೆ. ಅಂದು ಮುಖ್ಯಮಂತ್ರಿ ಆಗಿದ್ದ ಬಿ ಎಸ್ ಯಡಿಯೂರಪ್ಪ ಮತ್ತು ಆರೋಗ್ಯ ಸಚಿವರಾಗಿದ್ದ ಬಿ.ಶ್ರೀರಾಮುಲು ಮೇಲೆ ಭ್ರಷ್ಟಾಚಾರದ ಆರೋಪ ಇದ್ದು, ಇಬ್ಬರ ವಿರುದ್ಧ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೆ ಶಿಫಾರಸು ಮಾಡಿರುವ ಹಿನ್ನೆಲೆ ಈ ವಿಚಾರವನ್ನು ರಾಷ್ಟ್ರಮಟ್ಟದಲ್ಲಿ ಪ್ರಸ್ತಾಪಿಸಲು ಕಾಂಗ್ರೆಸ್ ಹೈಕಮಾಂಡ್ ನಿರ್ಧಾರ ಮಾಡಿದೆ ಎನ್ನಲಾಗಿದೆ.

**ಮೋದಿ ವಿರುದ್ಧ ಕೋವಿಡ್ ಅಸ್ತ್ರ!:** ಮಹಾರಾಷ್ಟ್ರ ಹಾಗೂ ಜಾರ್ಖಂಡ್ ಚುನಾವಣೆಯಲ್ಲಿ ಪ್ರಧಾನಿ ಮೋದಿ ಅವರು ಕಾಂಗ್ರೆಸ್ ವಿರುದ್ಧ ಭ್ರಷ್ಟಚಾರದ ಆರೋಪಗಳನ್ನು ಮಾಡಿದ್ದರು. ಈ ಬೆನ್ನಲ್ಲೇ ಕಾಂಗ್ರೆಸ್ ಪಕ್ಷಕ್ಕೆ ಹೊಸ ಅಸ್ತ್ರ ಸಿಕ್ಕಿದ್ದು, ಇದನ್ನ ಸಂಪೂರ್ಣವಾಗಿ ಬಳಸಲಿದೆ ಎಂಬ ಮಾತು ಕೇಳಿಬಂದಿದೆ. ಮಹಾರಾಷ್ಟ್ರ ಚುನಾವಣೆಯಲ್ಲಿ ಕರ್ನಾಟಕ ಕೋವಿಡ್ ಭ್ರಷ್ಟಚಾರ ಆರೋಪವನ್ನು ಅಸ್ತ್ರವಾಗಿಸಲು ಕಾಂಗ್ರೆಸ್ ಉದ್ದೇಶಿಸಿದ್ದು, ಕೋವಿಡ್ ಸಂದರ್ಭದಲ್ಲೂ ಬಿಜೆಪಿ ಸರ್ಕಾರ ಕಿಟ್ ಹೆಸರಿನಲ್ಲಿ ಹಣ ಲೂಟಿ ಮಾಡಿದೆ ಎಂದು ಚುನಾವಣಾ ಪ್ರಚಾರದಲ್ಲಿ ಪ್ರಸ್ತಾಪಿಸಲು ಸೂಚನೆ ನೀಡಿದೆ ಎಂಬ ಮಾತ ಕೇಳಿಬಂದಿದೆ. ಕಾಂಗ್ರೆಸ್ ವಿರುದ್ಧ ಪ್ರಧಾನಿ ಮೋದಿ ಮಾಡಿದ್ದ ಭ್ರಷ್ಟಾಚಾರ ಆರೋಪಕ್ಕೆ ಕೋವಿಡ್ ಆರೋಪದ ಮೂಲಕ ತಿರುಗೇಟು ನೀಡಲು ಕಾಂಗ್ರೆಸ್ ಪ್ಲಾನ್ ಮಾಡಿದೆ ಎಂದು ಹೇಳಲಾಗಿದೆ. ಕರ್ನಾಟಕದ ಬೈ ಎಲೆಕ್ಷನ್‌ನಲ್ಲೂ ಕೋವಿಡ್ ಭ್ರಷ್ಟಚಾರ ಪ್ರಸ್ತಾಪಿಸಲು ಹೈಕಮಾಂಡ್ ಸೂಚನೆ ನೀಡಿದೆ ಎನ್ನಲಾಗಿದೆ. ಸಚಿವರು ಹಾಗೂ ಕಾಂಗ್ರೆಸ್ ನಾಯಕರು ಈ ವಿಚಾರವನ್ನು ಪ್ರಸ್ತಾಪಿಸಿ ಬಿಜೆಪಿಗೆ ಮುಜುಗರ ಉಂಟು ಮಾಡಲು ಸೂಚನೆ ನೀಡಲಾಗಿದ್ದು, ಕಾಂಗ್ರೆಸ್ ಕೋವಿಡ್ ಭ್ರಷ್ಟಚಾರವನ್ನ ಚುನಾವಣಾ ಪ್ರತ್ಯಸ್ತ್ರ ಮಾಡಿಕೊಂಡಿದೆ ಎಂದು ಹೇಳಲಾಗುತ್ತಿದೆ.

## ಗಡ್ಡ ತೆಗೆಯುವಂತೆ ಸೂಚನೆ

ಅಲ್ಲದೇ, ವಿದ್ಯಾರ್ಥಿಗಳು ಜಮ್ಮು-ಕಾಶ್ಮೀರ ಸ್ಟುಡೆಂಟ್ಸ್ ಅಸೋಸಿಯೇಷನ್ ಮುಂದೆಯೂ ಮೊರೆ ಇಟ್ಟಿದ್ದಾರೆ. ಗಡ್ಡ ತೆಗೆಯುವಂತೆ ಎಲ್ಲ ವಿದ್ಯಾರ್ಥಿಗಳಿಗೆ ಹೇಳಿದ್ದೇವೆ: ಪ್ರಾಂಶುಪಾಲ ಈ ವಿಚಾರವಾಗಿ ಕಾಲೇಜು ಪ್ರಾಂಶುಪಾಲರು ಮಾತನಾಡಿ, ನರ್ಸಿಂಗ್ ಕೋರ್ಸ್ ಆಗಿರುವುದರಿಂದ ಕ್ಲಿನಕಲ್ ಲ್ಯಾಬ್‌ನಲ್ಲಿ ಗಡ್ಡ ಬಿಟ್ಟುಕೊಂಡು ಭಾಗವಹಿಸಿದರೆ ಸಮಸ್ಯೆಯಾಗುತ್ತದೆ. ಆದ್ದರಿಂದ ಎಲ್ಲ ವಿದ್ಯಾರ್ಥಿಗಳಿಗೆ ಗಡ್ಡ ತೆಗೆಯುವಂತೆ ಹೇಳಿದ್ದೇವೆ. ಕೇವಲ ಮುಸ್ಲಿಂ ಯುವಕರಿಗೆ ಮಾತ್ರ, ಗಡ್ಡ ತೆಗೆಯುವಂತೆ ಹೇಳಿಲ್ಲ. ಮೇಲಾಧಿಕಾರಿಗಳು ಯಾವ ರೀತಿ ಆದೇಶಿಸುತ್ತಾರೆ ಅದನ್ನು ಪಾಲಿಸುತ್ತೇವೆ ಎಂದು ತಿಳಿಸಿದರು.

**ಹಿಜಾಬ್ ವಿವಾದ:** 2022ರಲ್ಲಿ ಕರ್ನಾಟಕದಲ್ಲಿ ಹಿಜಾಬ್ ವಿವಾದ ಭುಗಿಲೆದ್ದಿತ್ತು. ಉಡುಪಿಯಲ್ಲಿ ಆರಂಭವಾದ ಸಮವಸ್ತ್ರ ಸಮರ ಚರ್ಚೆ ಇಡೀ ದೇಶದಾದ್ಯಂತ ವ್ಯಾಪಿಸಿತ್ತು. ಹಿಜಾಬ್ ನಮ್ಮ ಹಕ್ಕು ಅಂತ ಮುಸ್ಲಿಂ ಸಮುದಾಯದ ವಿದ್ಯಾರ್ಥಿನಿಯರು ಹೇಳುತ್ತಿದ್ದರು. ಹಿಜಾಬ್ ಧರಿಸುವವರೆಗೂ ಕೇಸರಿ ಶಾಲು ಧರಿಸುತ್ತೇವೆ ಅಂತ ಹಿಂದೂ ವಿದ್ಯಾರ್ಥಿಗಳು ಪಟ್ಟು ಹಿಡಿದಿದ್ದರು. ಈ ವಿಚಾರ ಹೈಕೋರ್ಟ್ ಮೆಟ್ಟಿಲು ಏರಿತ್ತು.

## ಕಾಡಾನೆಗಳ ಉಪಟಳ

ಕಾರ್ಮಿಕರು ಮನೆಯಿಂದ ಹೊರಬರುವಂತಿಲ್ಲ, ಪಟಾಕಿ ಸಿಡಿಸುವಂತಿಲ್ಲ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ. 17 ಆನೆಗಳ ತಂಡದ ಬೀಟಮ್ಮ ಗ್ಯಾಂಗಿನಲ್ಲಿ 1 ಸಲಗ ವಿದ್ಯುತ್ ಸ್ಪರ್ಶದಿಂದ ಸಾವನ್ನಪ್ಪಿದೆ. ಸಲಗ ಸಾವನ್ನಪ್ಪಿದ ಜಾಗದ ಸುತ್ತಮುತ್ತಲಿನ ಹಳ್ಳಿಗಳಲ್ಲೇ ಕಾಡಾನೆ ಹಿಂಡು ಬೀಡುಬಿಟ್ಟಿದೆ.

ಬೀಟಮ್ಮ ಗ್ಯಾಂಗ್ ಹಾವಳಿ ಹೆಚ್ಚಾಗಿದ್ದು, ಗ್ರಾಮಸ್ಥರು ಎಚ್ಚರಿಕೆಯಿಂದ ಇರುವಂತೆ ಅಧಿಕಾರಿಗಳು ಎಚ್ಚರಿಸಿದ್ದಾರೆ.

## ಪಕ್ಷದ ಕಚೇರಿಯಲ್ಲಿ ಬಿಜೆಪಿ ನಾಯಕನ ಶವ ಪತ್ತೆ

ಪ್ರಾಥಮಿಕ ತನಿಖೆ ಬಳಿಕ ಮಹಿಳೆಯನ್ನು ವಿಚಾರಿಸಿದಾಗ ತಾನೇ ತಪ್ಪು ಮಾಡಿರುವುದಾಗಿ ಒಪ್ಪಿಕೊಂಡಿದ್ದಾಳೆ. ಕೃತ್ಯಕ್ಕೆ ಯಾರಾದರೂ ನೆರವು ನೀಡಿದ್ದಾರೆಯೇ ಎಂಬ ಬಗ್ಗೆ ತನಿಖೆ ನಡೆಸಲಾಗುತ್ತಿದೆ ಎಂದು ಅವರು ಹೇಳಿದರು. ಹತ್ಯೆಯ ನಂತರ ಬಿಜೆಪಿ ಮತ್ತು ಟಿಎಂಸಿ ನಡುವೆ ಮಾತಿನ ಚಕಮಕಿ ನಡೆದಿದೆ. ಪಕ್ಷದ ಜಿಲ್ಲಾ ಸಾಮಾಜಿಕ ಮಾಧ್ಯಮ ಸಂಚಾಲಕರನ್ನು ಟಿಎಂಸಿ ಗೂಂಡಾಗಳು ಅಪಹರಿಸಿ, ಚಿತ್ರಹಿಂಸೆ ನೀಡಿ ಹತ್ಯೆ ಮಾಡಿದ್ದಾರೆ ಎಂದು ಬಿಜೆಪಿ ರಾಜ್ಯ ಘಟಕ ಹೇಳಿದೆ. ಸಹಾಯಕ್ಕಾಗಿ ಅವರ ಕುಟುಂಬದ ಹತಾಶ ಮನವಿಯನ್ನು ಪೊಲೀಸರು ನಿರ್ಲಕ್ಷಿಸಿದ್ದಾರೆ ಎಂದು ಹೇಳಿದ್ದಾರೆ. ಟಿಎಂಸಿಯ ಹಿರಿಯ ನಾಯಕ ಮತ್ತು ಮಾಜಿ ರಾಜ್ಯಸಭಾ ಸಂಸದ ಕುನಾಲ್ ಘೋಷ್ ಅವರು ನಸ್ಕರ್ ಅವರ ಸಾವಿನ ಹಿಂದಿನ ನಿಖರವಾದ ಕಾರಣ ಬಿಜೆಪಿಗೆ ತಿಳಿದಿದೆ ಆದರೆ ಟಿಎಂಸಿ ಬಗ್ಗೆ ಸುಳ್ಳು ಸುದ್ದಿ ಹರಡುತ್ತಿದ್ದಾರೆ ಎಂದರು. ದೇಹದ ಕೆಲವು ಭಾಗಗಳಲ್ಲಿನ ಗಾಯವು ವ್ಯಕ್ತಿಯ ಕಡೆಗೆ ಆಕ್ರಮಣಕಾರನ ದ್ವೇಷ ಮತ್ತು ತಿರಸ್ಕಾರವನ್ನು ತೋರಿಸಿದೆ ಎಂದು ಟಿಎಂಸಿ ನಾಯಕ ಹೇಳಿಕೊಂಡಿದ್ದಾರೆ. ಜಾಮೀನಿನ ಮೇಲೆ ಬಿಡುಗಡೆಗೊಂಡಿದ್ದ ಗ್ಯಾಂಗ್‌ಸ್ಟರ್ ಅಮಿತ್ ಹತ್ಯೆ ಜಾಮೀನಿನ ಮೇಲೆ ಬಿಡುಗಡೆಗೊಂಡಿದ್ದ ಗ್ಯಾಂಗ್‌ಸ್ಟರ್ ಅಮಿತ್ ಲಾಕ್ರಾನನ್ನು ವಿರೋಧಿಗಳ ಗುಂಪು ಗುಂಡಿಕ್ಕಿ ಹತ್ಯೆ ಮಾಡಿರುವ ಘಟನೆ ದೆಹಲಿಯಲ್ಲಿ ನಡೆದಿದೆ. ಮುಂಡ್ಕಾ ಪ್ರದೇಶದ ಅವರ ಮನೆಯ ಸಮೀಪ ಶನಿವಾರ ಗುಂಡಿಕ್ಕಿ ಹತ್ಯೆ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಗೋಗಿ ಗ್ಯಾಂಗ್‌ನ ಸದಸ್ಯ ಅಮಿತ್ ಲಾಕ್ರಾ, ಪ್ರತಿಸ್ಪರ್ಧಿ ಟಿಲ್ಲು ತಾಜ್‌ಪುರಿಯಾ ಗ್ಯಾಂಗ್‌ನಿಂದ ಮೋಟಾರ್‌ಸೈಕಲ್‌ನಲ್ಲಿ ಬಂದ ದುಷ್ಕರ್ಮಿಗಳು ಕೊಲೆ ಮಾಡಿದ್ದಾರೆ. ಸುಮಾರು ಆರು ಗುಂಡುಗಳನ್ನು ಹಾರಿಸಿದ್ದಾರೆ ಮತ್ತು ಲಾಕ್ರಾ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ.

# ಕೋವಿಡ್ ಹಗರಣ: ಬಿಎಸ್‌ವೈ, ರಾಮುಲು ವಿರುದ್ಧ ಸರ್ಕಾರದ ಪ್ರಾಸಿಕ್ಯೂಷನ್ ಅಸ್ತ್ರ

**ಬೆಂಗಳೂರು:** ಕೋವಿಡ್ ಸಮಯದಲ್ಲಿ ನಡೆದಿದೆ ಎನ್ನಲಾದ ಅಕ್ರಮದ ವಿಚಾರವಾಗಿ ಮಾಜಿ ಸಿಎಂ ಯಡಿಯೂರಪ್ಪ ಹಾಗೂ ಮಾಜಿ ಸಚಿವ ಶ್ರೀರಾಮುಲು ವಿರುದ್ಧ ಪ್ರಾಸಿಕ್ಯೂಷನ್ ಅಸ್ತ್ರ ಪ್ರಯೋಗಿಸಲು ರಾಜ್ಯ ಸರ್ಕಾರ ತಯಾರಿ ನಡೆಸಿದೆ. ನ್ಯಾ. ಮೈಕಲ್ ಡಿ ಕುನ್ಹಾ ವರದಿ ಆಧಾರದ ಮೇಲೆ ಸರ್ಕಾರ ಈ ನಿರ್ಧಾರಕ್ಕೆ ಬಂದಿದೆ.



ಚೀನಾದಿಂದ ಪಿಪಿಇ ಕಿಟ್ ಖರೀದಿಸಿದ ವಿಚಾರವೇ ಈಗ ಕಾಂಗ್ರೆಸ್ ಸರ್ಕಾರದ ಪಾಲಿಗೆ ಬ್ರಹ್ಮಾಸ್ತ್ರವಾಗಿದೆ. ಇನ್ನೂ ನ್ಯಾ. ಮೈಕಲ್ ಡಿ ಕುನ್ಹಾ ವರದಿಯಲ್ಲಿ ಯಡಿಯೂರಪ್ಪ ಹಾಗೂ ಶ್ರೀರಾಮುಲು ವಿರುದ್ಧ ಪ್ರಾಸಿಕ್ಯೂಷನ್‌ಗೆ ಶಿಫಾರಸು ಮಾಡಿರುವ ಅಂಶ ಬೆಳಕಿಗೆ ಬಂದಿದೆ. ಭ್ರಷ್ಟಾಚಾರ ನಿಯಂತ್ರಣ ಕಾಯ್ದೆ ಅಡಿ ಕೇಸ್ ದಾಖಲಿಸಿ ತನಿಖೆಗೆ ವರದಿಯಲ್ಲಿ ಶಿಫಾರಸು ಮಾಡಲಾಗಿದೆ.

2020 ಏಪ್ರಿಲ್‌ನಲ್ಲಿ ಚೀನಾದ ಎರಡು ಕಂಪನಿಗಳಿಂದ ಪಿಪಿಇ ಕಿಟ್ ಖರೀದಿಸುವಲ್ಲಿ ಅಕ್ರಮ ಎಸಗಲಾಗಿದೆ ಎಂಬುದು ವರದಿಯಲ್ಲಿ ಉಲ್ಲೇಖವಾಗಿದೆ. ಅಂದಿನ ಸಿಎಂ, ಅಂದಿನ ಆರೋಗ್ಯ ಸಚಿವರ ವಿರುದ್ಧ ತನಿಖೆಗೆ ಶಿಫಾರಸು ಮಾಡಲಾಗಿದೆ. ಉಪಚುನಾವಣೆ ಮುಗಿದ ಬಳಿಕ ರಾಜ್ಯ ಸರ್ಕಾರದಿಂದ ಮುಂದಿನ ಪ್ರಕ್ರಿಯೆಯ ಬಗ್ಗೆ ತೀರ್ಮಾನಿಸುವ ಸಾಧ್ಯತೆ ಇದೆ. ಡಿ.ಕೆ.ಶಿವಕುಮಾರ್ ನೇತೃತ್ವದ ಸಂಪುಟ ರಚನೆಯಾಗಿದ್ದು, ಮೊದಲ ಸಭೆಯಲ್ಲಿ ಪ್ರಾಥಮಿಕ ಅಂಶಗಳ ಬಗ್ಗೆ ಚರ್ಚೆ ನಡೆದಿದೆ. ಉಪಚುನಾವಣೆ ಬಳಿಕ ಸಂಪುಟ ಉಪಸಮಿತಿಯ ಎರಡನೇ ಸಭೆ ನಡೆಯಲಿದ್ದು, ಆ ಸಭೆಯಲ್ಲಿ ಯಡಿಯೂರಪ್ಪ, ರಾಮುಲು ವಿರುದ್ಧ ಪ್ರಾಸಿಕ್ಯೂಷನ್ ಪ್ರಕ್ರಿಯೆ ಬಗ್ಗೆ ತೀರ್ಮಾನ ಮಾಡಿ ಸಂಪುಟ ಸಭೆ ಶಿಫಾರಸು ಮಾಡಲಿದೆ. ಬಳಿಕ ಸಂಪುಟ ಸಭೆಯಲ್ಲಿ ಒಪ್ಪಿಗೆ ಸೂಚಿಸುವ ಸಾಧ್ಯತೆ ಇದೆ ಎಂಬ ಮಾಹಿತಿ ಲಭ್ಯವಾಗಿದೆ.

# ಕಾಂಗ್ರೆಸ್ ಎಷ್ಟೇ ಟೋಕನ್ ಕೊಟ್ರೂ ಗೆಲ್ಲೋದು ಎನ್‌ಡಿಎ

**ಹುಬ್ಬಳ್ಳಿ:** ರಾಜ್ಯದಲ್ಲಿ ನಡೆಯಲಿರುವ ವಿಧಾನಸಭಾ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಟೋಕನ್ ಮೊರೆ ಹೋಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದ್ದಾರೆ.



ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಈ ವೇಳೆ ಶತಾಯ ಗತಾಯ ಉಪ ಚುನಾವಣೆ ಗೆಲ್ಲಬೇಕೆಂಬ ಭರದಲ್ಲಿ ಕಾಂಗ್ರೆಸ್ ಪಕ್ಷ ಟೋಕನ್ ಮೂಲಕ ಹಣ ಹಂಚಿಕೆ ಶುರು ಮಾಡಿದೆ. ಟೋಕನ್ ಹಂಚಿದ ಕಾಂಗ್ರೆಸ್ ಅದನ್ನು ತೋರಿಸಿದವರಿಗೆ ಹಣ ಕೊಟ್ಟು ಕಳಿಸುವ ವ್ಯವಸ್ಥೆ ಮಾಡಿದೆ ಎಂಬುದು ಮಾಧ್ಯಮಗಳಲ್ಲಿ ವರದಿಯಾಗಿದೆ. ಕಾಂಗ್ರೆಸ್ ಲೂಟಿ ಮಾಡಿದ್ದನ್ನು ಹೀಗೆ ಹಂಚುತ್ತಿದೆ ಎಂದು ದೂರಿದ್ದಾರೆ.

ರಾಜ್ಯದಲ್ಲಿ ನಡೆಯುತ್ತಿರುವ ಮೂರೂ ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅದೆಷ್ಟೇ ಟೋಕನ್, ಹಣ ಹಂಚಿದರೂ ಗೆಲ್ಲೋದು ನಾವೇ ಎಂದು ಅವರು ಭವಿಷ್ಯ ನುಡಿದಿದ್ದಾರೆ.

ಮೂರೂ ಕ್ಷೇತ್ರಗಳಲ್ಲಿ ಬಿಜೆಪಿ ಪರ ಒಲವಿದೆ. ಪ್ರಚಾರದ ವೇಳೆ ಜನರಿಂದ ಉತ್ತಮ ಸ್ಪಂದನೆ ಸಿಕ್ಕಿದೆ. ಹಾಗಾಗಿ ಎನ್‌ಡಿಎ ಅಭೂತಪೂರ್ವ ಗೆಲುವು ಸಾಧಿಸಲಿದೆ. ಸಂಡೂರು, ಶಿಗ್ಗಾವಿಯಲ್ಲಿ ಬಿಜೆಪಿ ಮತ್ತು ಚನ್ನಪಟ್ಟಣದಲ್ಲಿ ಜೆಡಿಎಸ್ ಗೆಲುವು ನಿಶ್ಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಈ ವೇಳೆ ಮಾಜಿ ಡಿಸಿಎಂ ಗೋವಿಂದ ಕಾರಜೋಳ, ಎಂಎಲ್‌ಸಿ ರವಿಕುಮಾರ್, ಸೀಮಾ ಮಸೂತಿ ಉಪಸ್ಥಿತರಿದ್ದರು.

# ಮುಡಾದಲ್ಲಿ ಫೈಲ್ ಸುಟ್ಟು ಹಾಕಿದ್ದಾರೆ!: 50:50 ಅನುಪಾತದಲ್ಲಿ ಮನೆ ಕಟ್ಟುವುದಕ್ಕೆ ಅನುಮತಿ ಕೊಡಬೇಡಿ: ಶ್ರೀವತ್ಸ

**ಮೈಸೂರು:** ಮುಡಾದಲ್ಲಿ ಕೆಲವು ಸೈಟ್‌ಗಳ ದಾಖಲಾತಿಗಳನ್ನು ಸುಟ್ಟು ಹಾಕಿದ್ದಾರೆ. 50:50 ಅನುಪಾತದಲ್ಲಿ ಮನೆ ಕಟ್ಟುವುದಕ್ಕೆ ಅನುಮತಿ ಕೊಡಬೇಡಿ ಎಂದು ಶಾಸಕ ಶ್ರೀವತ್ಸ ಒತ್ತಾಯಿಸಿದ್ದಾರೆ.

ಮಾಧ್ಯಮದ ಜೊತೆ ಮಾತನಾಡಿದ ಶ್ರೀವತ್ಸ ಅವರು, ಕೆಲವು ಸೈಟ್‌ಗಳ ದಾಖಲೆಗಳ ತೆಗೆದುಕೊಂಡು ಹೋಗಿದ್ದಾರೆ ಎಂದು ಅಧಿಕಾರಿಗಳೇ ಒಪ್ಪಿಕೊಂಡಿದ್ದಾರೆ. ಮುಡಾ ಸಭೆಯಲ್ಲೇ ಅಧಿಕಾರಿಗಳು ಇದನ್ನು ಒಪ್ಪಿಕೊಂಡಿದ್ದಾರೆ ಎಂದು ತಿಳಿಸಿದ್ದಾರೆ.

ಈ ನಡುವೆ 50:50 ಅನುಪಾತದಲ್ಲಿ ಮನೆ ನಿರ್ಮಿಸಲು ನಕ್ಷೆಗೆ ಅನುಮತಿ ಕೊಡುವುದನ್ನು ನಿಲ್ಲಿಸಬೇಕು. ಈಗಾಗಲೇ ನಕ್ಷೆಗೆ ಅನುಮತಿ ಪಡೆದು ಕಾಮಗಾರಿ ಮಾಡುತ್ತಿರುವವರಿಗೆ ತಡೆಯಾಜ್ಞೆ ನೀಡಿ ಎಂದು ಮನವಿ ಮಾಡಿ ಪತ್ರ ಕೊಟ್ಟಿದ್ದಾರೆ.

ನನಗಿರುವ ಮಾಹಿತಿ ಪ್ರಕಾರ 250 ರಿಂದ 300 ಮಂದಿ ಮನೆ ಕಟ್ಟುವುದಕ್ಕೆ ಪ್ಲ್ಯಾನ್ ಮಾಡಿದ್ದಾರೆ. ಖಾಲಿ ಸೈಟ್ ಇದ್ದರೆ ಮುಡಾ ಜಪ್ತಿ ಮಾಡಿಕೊಳ್ಳುವುದು ಸುಲಭ ಆಗುತ್ತದೆ. ಒಂದು ವೇಳೆ ನಿರ್ಮಾಣ ಕಾಮಗಾರಿ ಆಗುತ್ತಿದ್ದರೆ ಅದನ್ನು ಕಟ್ಟದಂತೆ ತಡೆಯಬೇಕಾಗುತ್ತದೆ. ಈ ಎರಡೂ ವಿಚಾರವನ್ನು ಗಮನದಲ್ಲಿಟ್ಟುಕೊಂಡು ನಾನು ಮನವಿ ಪತ್ರ ಕೊಟ್ಟಿದ್ದೇನೆ ಎಂದು ಹೇಳಿದರು.



ಮಂಡ್ಯ ನಗರದ ಬುದ್ಧ ಭಾರತ ಫೌಂಡೇಷನ್‌ಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಆರ್.ಲತಾ ಅವರು 50 ಸಾವಿರ ಬೆಲೆ ಬಾಳುವ ಪುಸ್ತಕಗಳನ್ನು ನೀಡಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಫೌಂಡೇಷನ್ ಅಧ್ಯಕ್ಷ ಜೆ.ರಾಮಯ್ಯ ಅವರು, ಗ್ರಾಮೀಣ ಭಾಗದ ಯುವ ಸಮೂಹಕ್ಕೆ ಒಳಿತಾಗಲಿ ಎಂಬುವ ನಿಟ್ಟಿನಲ್ಲಿ ಪುಸ್ತಕಗಳನ್ನು ನೀಡಿರುವ ಆರ್.ಲತಾ ಅವರ ಕೆಲಸ ಶ್ಲಾಘನೀಯವಾಗಿದೆ. ದುಶ್ಚಟಗಳಿಗೆ ಬಲಿಯಾಗುತ್ತಿರುವ ಕೆಲವು ಯುವ ಸಮೂಹವು ಇನ್ನಾದರೂ ಕೃತಿ ಓದುವ ಮೂಲಕ ಬದಲಾಗಬೇಕು ಎಂದು ಮನವಿ ಮಾಡಿದರು. ಫೌಂಡೇಷನ್ನ ಲೋಕೇಶ್, ಬೆಂಜಮಿನ್ ಥಾಮಸ್, ಸುರೇಶ್, ಅಮೀರ್, ಜವರಪ್ಪ ಭಾಗವಹಿಸಿದ್ದರು.

# ಯುವಕರು ಮಾದಕ ಚಟದಿಂದ ದೂರ ಇರಲಿ

**ಮಂಡ್ಯ:** ಯುವಕರು ಕುತೂಹಲಕ್ಕಾಗಿ ಮಾದಕ ವ್ಯಸನಕ್ಕೆ ಒಳಗಾಗುತ್ತಾ ಮುಂದೆ ಅದೇ ಚಟದಿಂದ ತಮ್ಮ ಬದುಕನ್ನೇ ಹಾಳು ಮಾಡಿಕೊಳ್ಳುವ ಸ್ಥಿತಿಗೆ ತಲುಪುತ್ತಾರೆ ಎಂದು ಅಬಕಾರಿ ಇಲಾಖೆ ಉಪ ಆಯುಕ್ತ ಎ.ರವಿಶಂಕರ್ ಹೇಳಿದರು.



ತಾಲೂಕಿನ ಹೊಸೂರು ಕಾಲೋನಿಯ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ಸ್ನಾತಕೋತ್ತರ ಕೇಂದ್ರ ಆವರಣದಲ್ಲಿ ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ನೆಹರು ಯುವ ಕೇಂದ್ರ ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಅಬಕಾರಿ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಮಂಡ್ಯ ಎನ್ಎಸ್ಎಸ್ ಘಟಕ, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಕೇಂದ್ರದ ವತಿಯಿಂದ ಮಾದಕ ವ್ಯಸನದ ಬಗ್ಗೆ ಅರಿವು ಮತ್ತು ಶಿಕ್ಷಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಕೆಟ್ಟ ಸ್ನೇಹಿತರ ಸಹವಾಸದಿಂದ ದುಶ್ಚಟಕ್ಕೆ ಬಿದ್ದು ಇನ್ನಿತರ ದುರಭ್ಯಾಸಕ್ಕೆ ಒಳಗಾಗಿ ತಮ್ಮ ಬದುಕನ್ನೇ ನಾಶಪಡಿಸಿಕೊಳ್ಳುತ್ತಾರೆ ಆದ್ದರಿಂದ ಒಳ್ಳೆಯ ಗುಣಗಳನ್ನು ಬೆಳೆಸಿಕೊಳ್ಳುವ ಮೂಲಕ ಉತ್ತಮ ನಾಗರಿಕರಾಗಿ ಎಂದು ಸಲಹೆ ನೀಡಿದರು.

ಕೆರಗೋಡು ಆರಕ್ಷಕ ವೃತ್ತ ನಿರೀಕ್ಷಕ ಎಸ್.ವಿ.ಮಹೇಶ್ ಮಾತನಾಡಿ ಹೊರ ರಾಜ್ಯಗಳಿಂದ ಬಂದು ನಮ್ಮ ಊರುಗಳಲ್ಲಿ ಮನೆ ಮಾಡಿ ಇಲ್ಲೇ ಡ್ರಗ್ಸ್ ಉತ್ಪಾದನೆ ಮಾಡಿ ಚಟುವಟಿಕೆಗಳಲ್ಲಿ ಮಾರಾಟ ಮಾಡಿ ಹಣ ಗಳಿಸುತ್ತಿದ್ದಾರೆ, ಯುವಕರು ಜಾಗೃತರಾಗಿ ಬಿಡಿ ಸಿಗರೇಟು ಇನ್ನಿತರ ಅಂತ ಕೆಟ್ಟ ಚಟಗಳಿಗೆ ಬಲಿಯಾಗದೆ ಒಳ್ಳೆಯ ಅಭ್ಯಾಸಗಳನ್ನು ಬೆಳೆಸಿಕೊಳ್ಳಿ ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ತಂಬಾಕು ಮುಕ್ತ ಅಭಿಯಾನ ಪೋಸ್ಟರ್ ಗಳನ್ನು ವೇದಿಕೆಯಲ್ಲಿದ್ದ ಗಣ್ಯರು ಬಿಡುಗಡೆಗೊಳಿಸಿದರು.

ಕಾರ್ಯಕ್ರಮದಲ್ಲಿ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರದ ಜಿ.ಎಸ್.ಕಿರಣ್ ಕೆರಗೋಡು ಪಿಎಸ್ಐ ದೀಕ್ಷಿತ್ ಜಿಲ್ಲಾ ತಂಬಾಕು ನಿಯಂತ್ರಣ ಸಲಹೆಗಾರ ತಿಮ್ಮರಾಜು ರೋಟರಿ ಸಂಸ್ಥೆ ನಿಕಟ ಪೂರ್ವ ಅಧ್ಯಕ್ಷ ಅನುಪಮಾ ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿ ಪಾರ್ವತಿ, ನೆಹರು ಯುವ ಕೇಂದ್ರದ ಹರ್ಷ ಭಾಗವಹಿಸಿದ್ದರು.

# ಕೆಪಿಎಸ್‌ಸಿ: ವಯೋಮಿತಿ ಸಡಿಲಿಕೆ, ಅರ್ಜಿ ಸಲ್ಲಿಸಲು ಅವಕಾಶ

**ಬೆಂಗಳೂರು:** ಕರ್ನಾಟಕ ಲೋಕಸೇವಾ ಆಯೋಗವು 2023-24ನೇ ಸಾಲಿನಲ್ಲಿ ಸಾರಿಗೆ ಇಲಾಖೆಯಲ್ಲಿನ ಗ್ರೂಪ್ ಸಿ ವೃಂದದ ಮೋಟಾರು ವಾಹನ ನಿರೀಕ್ಷಕರು – 70 (ಉ.ಮೂ.) ಮತ್ತು 06 (ಹೈ.ಕ) ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ 2024 ನೇ ಮಾರ್ಚ್ 14 ರಂದು ಅಧಿಸೂಚನೆಗಳನ್ನು ಹೊರಡಿಸಿರುತ್ತದೆ. ಈ ಅಧಿಸೂಚನೆಗೆ ಸಂಬಂಧಿಸಿದಂತೆ ಗರಿಷ್ಠ ವಯೋಮಿತಿಯಲ್ಲಿ 03 ವರ್ಷಗಳ ಸಡಿಲಿಕೆಯನ್ನು ನೀಡಿರುವ ಹಿನ್ನೆಲೆಯಲ್ಲಿ ಅಧಿಸೂಚನೆಗಳಲ್ಲಿನ ಮೋಟಾರು ವಾಹನ ನಿರೀಕ್ಷಕರು -70 (ಉ.ಮೂ.ವೃ.) ಮತ್ತು 06 (ಹೈ.ಕ) ಹುದ್ದೆಗಳಿಗೆ ಸಾಮಾನ್ಯ ಅರ್ಹತೆ- 38 ವರ್ಷಗಳು, ಪ್ರವರ್ಗ 2ಎ, 2ಬಿ, 3ಎ ಮತ್ತು 3ಬಿ- 41 ವರ್ಷಗಳು ಮತ್ತು ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಪ್ರವರ್ಗ- 1- 43 ವರ್ಷಗಳು ಎಂಬುದಾಗಿ ಒಂದು ಬಾರಿಗೆ ಅನ್ವಯವಾಗುವಂತೆ ಗರಿಷ್ಠ ವಯೋಮಿತಿಯನ್ನು ನಿಗದಿಪಡಿಸಿ, ತಿದ್ದುಪಡಿ ಅಧಿಸೂಚನೆಯನ್ನು ಅಕ್ಟೋಬರ್ 30 ರಂದು ಹೊರಡಿಸಲಾಗಿರುತ್ತದೆ. ಅರ್ಹ ಅಭ್ಯರ್ಥಿಗಳಿಗೆ ನವೆಂಬರ್ 5 ರಿಂದ 20 ರವರೆಗೆ ಅರ್ಜಿ ಸಲ್ಲಿಸಲು ಕಾಲಾವಕಾಶವನ್ನು ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಅಕ್ಟೋಬರ್ 30 ರ ತಿದ್ದುಪಡಿ ಅಧಿಸೂಚನೆ ಹಾಗೂ 2024 ನೇ ಮಾರ್ಚ್ 14 ರ ಮೂಲ ಅಧಿಸೂಚನೆಗಳನ್ನು ಆಯೋಗದ ವೆಬ್‌ಸೈಟ್ http://kpsc.kar.nic.in/Lists ನಲ್ಲಿ ಪರಿಶೀಲಿಸಿಕೊಳ್ಳಬಹುದು ಎಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತೋಟಗಾರಿಕೆ ಇಲಾಖೆಯಿಂದ ‘ಝೇಂಕಾರ’ ಬ್ರ್ಯಾಂಡ್ ಹೆಸರಿನಲ್ಲಿ ಜೇನುತುಪ್ಪ ಮಾರಾಟ

**ಬೆಂಗಳೂರು:** ಗ್ರಾಹಕರಿಗೆ ಗುಣಮಟ್ಟದ ಜೇನುತುಪ್ಪ ದೊರಕುವಂತೆ ಮಾಡಲು ಹಾಗೂ ಜೇನು ಕೃಷಿಕರ ಆರ್ಥಿಕ ಮಟ್ಟ ಹೆಚ್ಚಿಸಲು ರಾಜ್ಯದಲ್ಲಿ ಉತ್ಪಾದನೆಯಾಗುತ್ತಿರುವ ಜೇನುತುಪ್ಪಕ್ಕೆ ತೋಟಗಾರಿಕೆ ಇಲಾಖೆಯು ''ಝೇಂಕಾರ'' ಬ್ರ್ಯಾಂಡ್ ಹೆಸರಿನಲ್ಲಿ ಮತ್ತು ‘ಜೀವನೋಲ್ಲಾಸಕ್ಕೆ ಜೇನು ಟ್ಯಾಗ್‌ಲೈನ್‌ನಲ್ಲಿ’ ಎಂಬ ಲೋಗೋ ಮತ್ತು ಪ್ಯಾಕೇಜಿಂಗ್ ವಿನ್ಯಾಸಗಳನ್ನು ಅಭಿವೃದ್ಧಿ ಪಡಿಸಿ Trade Mark Registry ಯಿಂದ ಅಧಿಕೃತವಾಗಿ ಅನುಮೋದನೆ ಪಡೆಯಲಾಗಿರುತ್ತದೆ. ತೋಟಗಾರಿಕೆ ಇಲಾಖೆಯು ಸದರಿ ಬ್ರ್ಯಾಂಡ್‌ನ ಮಾಲೀಕತ್ವವನ್ನು ಹೊಂದಿರುತ್ತದೆ. ಪ್ರಸ್ತುತ ಜೇನುತುಪ್ಪ ಉತ್ಪಾದಕರು ಮತ್ತು ಸಂಗ್ರಾಹಕರು ಷರತ್ತು ಮತ್ತು ನಿಬಂಧನೆಗಳೊಂದಿಗೆ ಸದರಿ ಬ್ರ್ಯಾಂಡ್ ಹೆಸರು ಮತ್ತು ಲೋಗೋವನ್ನು ಬಳಸಿಕೊಂಡು ಜೇನುತುಪ್ಪ ಮತ್ತು ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶ ಕಲ್ಪಿಸಲಾಗಿದೆ. ಈ ಅವಕಾಶವನ್ನು ಸದುಪಯೋಗ ಪಡೆಸಿಕೊಳ್ಳಲು ಕೋರಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿ ಪಡೆಯಲು ತೋಟಗಾರಿಕೆ ಇಲಾಖೆಯ ವೆಬ್‌ಸೈಟ್ https://horticulturedir.karnataka.gov.in ಅಥವಾ ಇ-ಮೇಲ್ additionaldirectoropdp@gmail.com, ಅಪರ ನಿರ್ದೇಶಕರು, ತಾಳೆಬೆಳೆ ವಿಭಾಗ, ತೋಟಗಾರಿಕೆ ನಿರ್ದೇಶನಾಲಯ, ಲಾಲ್ ಬಾಗ್, ಬೆಂಗಳೂರು ಹಾಗೂ ಜಿಲ್ಲಾ ತೋಟಗಾರಿಕೆ ಉಪ ನಿರ್ದೇಶಕರ ಕಛೇರಿಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ವಿದ್ಯಾರ್ಥಿಗಳ ಪ್ರೋತ್ಸಾಹಧನ ಹೆಚ್ಚಳ

**ಬೆಂಗಳೂರು:** ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಾದ ಐಐಟಿ/ಐಐಎಂ/ಐಐಎಸ್‌ಸಿ/ ಎನ್‌ಐಟಿ ಮುಂತಾದ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಒಂದು ಬಾರಿ ನೀಡುವ ಪ್ರೋತ್ಸಾಹಧನವನ್ನು ರೂ.1.00 ಲಕ್ಷಗಳಿಂದ ರೂ. 2.00 ಲಕ್ಷಗಳಿಗೆ ಹೆಚ್ಚಿಸಿ ಸರ್ಕಾರ ಆದೇಶಿಸಿದೆ. ಮುಂದುವರೆದಂತೆ, ಪಿ.ಯು.ಸಿ.ಯಲ್ಲಿ ಶೇಕಡ 95 ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದು ಎನ್ ಇಇಟಿ ಮೂಲಕ ಸರ್ಕಾರಿ ಕೋಟಾದಡಿ ಪ್ರವೇಶ ದೊರಕದೆ ಆಡಳಿತ ಮಂಡಳಿಯ ಕೋಟಾದಡಿ ಎಂಬಿಬಿಎಸ್ ಪಡೆದಿರುವ ಪ್ರತಿಭಾನ್ವಿತ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮೊದಲನೆ ವರ್ಷದಲ್ಲಿ ರೂ.25.00 ಲಕ್ಷಗಳನ್ನು ಕಾಲೇಜು ಶುಲ್ಕವಾಗಿ ಪಾವತಿಸಲು ಮತ್ತು ಸದರಿ ವಿದ್ಯಾರ್ಥಿಯು ಎಂಬಿಬಿಎಸ್ ಮೊದಲನೇ ವರ್ಷದ ಪರೀಕ್ಷೆಯಲ್ಲಿ ಕನಿಷ್ಠ ಶೇಕಡ 60 ಅಂಕಗಳನ್ನು ಪಡೆದು ತೇರ್ಗಡೆಯಾದಲ್ಲಿ ಪುನ: ರೂ.25.00 ಲಕ್ಷಗಳ ಪ್ರೋತ್ಸಾಹಧನವನ್ನು ಮಂಜೂರು ಮಾಡುವ ಅಂಶವನ್ನು ಸೇರ್ಪಡೆ ಮಾಡಿ ಆದೇಶಿಸಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ವ್ಯತ್ಯಯ

**ಕೋಲಾರ:** ಶ್ರೀನಿವಾಸಪುರ 66/11 ಕೆ.ವಿ ಉಪ ಕೇಂದ್ರದ ಎಫ್-05 ಶ್ರೀನಿವಾಸಪುರ ಪಟ್ಟಣದ ಮಾರ್ಗದ ವಿಭಜನೆ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಆದ್ದರಿಂದ ಈ ಮಾರ್ಗಕ್ಕೆ ಅಡ್ಡವಾಗಿ ಚಲಿಸಿರುವ ಎಫ್16-ಎ.ಪಿ.ಎಂ.ಸಿ ಮಾರ್ಗದ ಅಡಿ ಬರುವ ಕೈಗಾರಿಕೆಗಳಾದ ಸನ್ನಿಪ್, ಆಸ್ಪೆಟ್ ಕ್ವಾಲಿಟಿ ಫೂಡ್ಸ್, ರಾಜದಾನಿ ಪ್ಲಾಸ್ಟಿಕ್ ಕಾರ್ಖಾನೆಗಳಿಗೆ ಮತ್ತು ಎಫ್-05 ಶ್ರೀನಿವಾಸಪುರ ಪಟ್ಟಣದ ಮಾರ್ಗದ ವೆಂಕಟೇಶ್ವರ ಬಡಾವಣೆ, ಹೈದರಾಲಿ ಮೊಹಲ್ಲಾ, ಗಫಾರ್‌ಖಾನ್ ಮೊಹಲ್ಲಾ, ಮತ್ತು ಪವನ್ ಆಸ್ಪತ್ರೆ ರಸ್ತೆ, ಜಾಕೀರ್ ಹುಸೇನ್ ಮೊಹಲ್ಲಾ ವ್ಯಾಪ್ತಿಯಲ್ಲಿ ನವೆಂಬರ್ 09 ಮತ್ತು 10 ರಂದು ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 5:00 ಗಂಟೆವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುತ್ತದೆ. ಆದ್ದರಿಂದ ಗ್ರಾಹಕರು ಸಹಕರಿಸಬೇಕೆಂದು ಶ್ರೀನಿವಾಸಪುರ ಬೆ.ವಿ.ಕಂ ಉಪ-ವಿಭಾಗದ ವಾಣಿಜ್ಯ, ಕಾರ್ಯ ಮತ್ತು ಪಾಲನ ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಮಾಜಕ್ಕೆ ಸೇವೆ ಸಲ್ಲಿಸುವುದು ಪುಣ್ಯದ ಕೆಲಸ: ಸುರೇಶ್ ಋಗ್ವೇದಿ

**ಚಾಮರಾಜನಗರ:** ಜೈ ಹಿಂದ್ ಪ್ರತಿಷ್ಠಾನದ ಅಧ್ಯಕ್ಷರು ಹಾಗೂ ಸಂಸ್ಕೃತಿ ಚಿಂತಕರಾದ ಸುರೇಶ್ ಎನ್ ಋಗ್ವೇದಿ ರವರನ್ನು ಕನ್ನಡ ರಾಜ್ಯೋತ್ಸವದ ಅಂಗವಾಗಿ ಸಂಜೀವಿನಿ ಟ್ರಸ್ಟ್ ವತಿಯಿಂದ ಋಗ್ವೇದಿ ಕುಟೀರದಲ್ಲಿ ಗೌರವಿಸಿ ಸನ್ಮಾನಿಸಲಾಯಿತು.

ಸಂಜೀವಿನಿ ಟ್ರಸ್ಟಿನ ಮುಖ್ಯಸ್ಥರಾದ ಸತೀಶ್ ಕುಮಾರ್ ಮಾತನಾಡಿ ಕಳೆದ 35 ವರ್ಷಗಳಿಂದ ನಿರಂತರವಾಗಿ ಕನ್ನಡ ನಾಡು ,ನುಡಿ ಜಲ ,ಭಾಷೆ ,ಸಂಸ್ಕೃತಿ ,ಪರಂಪರೆ ಯುವ, ಶಿಕ್ಷಣ , ಸಾಹಿತ್ಯ ರಾಷ್ಟ್ರೀಯ , ಆಧ್ಯಾತ್ಮಿಕ ಹಾಗೂ ಸಮಗ್ರ ಕ್ಷೇತ್ರಗಳಲ್ಲಿ ನಿರಂತರವಾಗಿ ಸಾವಿರಾರು ಕಾರ್ಯಕ್ರಮ, ಉಪನ್ಯಾಸಗಳನ್ನು ನಿರ್ವಹಿಸಿ, ಹಲವಾರು ಸಂಘಟನೆಗಳ ಅಧ್ಯಕ್ಷರಾಗಿ, ಕಾರ್ಯಕರ್ತರಾಗಿ ಸೇವೆ ಸಲ್ಲಿಸುತ್ತಿರುವ ಋಗ್ವೇದಿ ಯವರನ್ನು ಕನ್ನಡ ರಾಜ್ಯೋತ್ಸವದ ಸಂಭ್ರಮದಲ್ಲಿ ಗೌರವಿಸುತ್ತಿರುವುದು ಹೆಮ್ಮೆಯಾಗಿದೆ ಎಂದರು.

ಕಲಾಸಿರಿ ಸಾಂಸ್ಕೃತಿಕ ವೇದಿಕೆಯ ಅಧ್ಯಕ್ಷರಾದ ಶ್ರೀಮತಿ ಗೌರಿ ರಾಮಕೃಷ್ಣ ಮಾತನಾಡಿ ಸಂಜೀವಿನಿ ಟ್ರಸ್ಟ್ ನಿಂದ ಸಮಾಜಕ್ಕಾಗಿ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಗೌರವಿಸುವ ಮೂಲಕ ಸಮಾಜಕ್ಕೆ ಸಾಧಕರನ್ನು ಮತ್ತಷ್ಟು ಪರಿಚಯಿಸುವ ಹಾಗೂ ಅವರಿಗೆ ಸಮಾಜದ ಸೇವೆಯನ್ನು ಗುರುತಿಸುವ ಮೂಲಕ ಗೌರವವನ್ನು ಸಲ್ಲಿಸುವ ಕಾರ್ಯವನ್ನು ಮಾಡುತ್ತಿರುವುದು ಸಮಯೋಚಿತ ಎಂದರು.ಗೌರವ ಸ್ವೀಕರಿಸಿ ಮಾತನಾಡಿದ ಸುರೇಶ್ ಋಗ್ವೇದಿ ಸಮಾಜಕ್ಕೆ ಸೇವೆ ಸಲ್ಲಿಸುವುದು ಪುಣ್ಯದ ಕೆಲಸ. ನಮ್ಮ ಸಮಯವನ್ನು ವ್ಯರ್ಥ ಮಾಡದೆ ಸಮಾಜದ ಕಾರ್ಯವನ್ನು ಸರಳ ಸಂಭ್ರಮದಿಂದ ಪ್ರೀತಿಯಿಂದ ಮಾಡೋಣ . ಶ್ರೇಷ್ಠ ಕೆಲಸಗಳು ಸದಾ ಕಾಲ ಉಳಿಯುತ್ತದೆ. ಪ್ರತಿ ಕ್ಷಣವನ್ನು ವ್ಯರ್ಥ ಮಾಡದೇ ಸಮಾಜದ ಚಿಂತನೆ ಹಾಗೂ ಶಕ್ತಿಮೀರಿ ಮಾಡೋಣ. ಸಮಾಜವನ್ನು ಪ್ರೀತಿಸುವುದರಿಂದ ಆಯಸ್ಸು, ವೃದ್ಧಿಯಾಗುತ್ತದೆ. ಸಂತೋಷ ,ಸಂಭ್ರಮ, ಆನಂದ ಸ್ನೇಹ, ಸಹಕಾರ, ಪ್ರೀತಿ , ವಿಶ್ವಾಸದ ಆಶೀರ್ವಾದಗಳು ನಮ್ಮಲ್ಲಿ ಮತ್ತಷ್ಟು ಬಲವನ್ನು ನೀಡುತ್ತದೆ ಎಂದರು.

ಝಾನ್ಸಿ ಮಕ್ಕಳ ಪರಿಷತ್ತಿನ ಗೌರವಾಧ್ಯಕ್ಷರಾದ ಕುಸುಮ ಋಗ್ವೇದಿಯವರು ಮಾತನಾಡಿ ಪ್ರತಿ ಒಬ್ಬರು ತಮ್ಮ ಕುಟುಂಬ ನಿರ್ವಹಣೆಯ ಜೊತೆಗೆ ಸಮಾಜದ ಕಾರ್ಯಗಳಲ್ಲಿ ಪಾಲ್ಗೊಳ್ಳೋಣ. ಕೈಲಾದಷ್ಟು ಸಹಾಯವನ್ನು ನೀಡೋಣ .ಯಾರನ್ನು ದೂಷಿಸದೆ ನಿರ್ಮಲ ಮನಸ್ಸಿನಿಂದ ಸೇವೆ ಸಲ್ಲಿಸೋಣ ಎಂದು ತಿಳಿಸಿದರು.

ಸಾಂಸ್ಕೃತಿಕ ಸಿರಿ ವೇದಿಕೆಯ ಡಾ. ಅಕ್ಷತಾ ಜೈನ್, ನಂದಿನಿ ರವಿಕುಮಾರ್ , ನಿವೃತ ಮುಖ್ಯ ಶಿಕ್ಷಕಿ ಕೆ ವಿ ಶ್ರೀಮತಿ , ಶಿಕ್ಷಕಿಅನಿತಾ, ಗುಂಡ್ಲುಪೇಟೆ ರಮೇಶ್, ವಿಜಯ್ ಕುಮಾರ್, ರವಿ , ಋಗ್ವೇದಿ ಯೂತ್ ಕ್ಲಬ್ ಅಧ್ಯಕ್ಷರಾದ ಶರಣ್ಯ ಋಗ್ವೇದಿ,ಝಾನ್ಸಿ ಮಕ್ಕಳ ಪರಿಷತ್ತಿನ ಅಧ್ಯಕ್ಷರಾದ ಶ್ರಾವ್ಯ ಋಗ್ವೇದಿ ಇದ್ದರು



## ರಾಜ್ಯ ಪಾತ್ರಗಾರ ಇಲಾಖೆಯ ನಿರ್ದೇಶಕ ಡಾ. ಗವಿಸಿದ್ದಯ್ಯ ಅಭಿಮತ

# ದಾಖಲೆಗಳು ಇತಿಹಾಸದ ಭಾಗ

**ಮೈಸೂರು:** ಇತಿಹಾಸದ ಪರಂಪರೆಯೆಂದರೆ ಕಟ್ಟಡಗಳು, ಉಡುಗೆತೊಡುಗೆಗಳು, ಸ್ಮಾರಕಗಳು ಹಾಗೂ ನಾಣ್ಯಗಳು ಅಷ್ಟೇ ಅಲ್ಲ, ದಾಖಲೆಗಳ ಪರಂಪರೆಯು ಇತಿಹಾಸದ ಭಾಗವೇ ಆಗಿವೆ ಎಂದು ಬೆಂಗಳೂರಿನ ಕರ್ನಾಟಕ ರಾಜ್ಯ ಪಾತ್ರಗಾರ ಇಲಾಖೆಯ ನಿರ್ದೇಶಕರಾದ ಡಾ. ಗವಿಸಿದ್ದಯ್ಯ ಅವರು ಹೇಳಿದರು.



ಎಂ.ಎಂ.ಕೆ ಮತ್ತು ಎಸ್.ಡಿ.ಎಂ ಮಹಿಳಾ ಮಹಾ ವಿದ್ಯಾಲಯ ಕಾಲೇಜು ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಪತ್ರಗಾರ ಇಲಾಖೆ, ವಿಭಾಗೀಯ ಪತ್ರಗಾರ ಕಛೇರಿ ಹಾಗೂ ಎಂ.ಎಂ.ಕೆ ಮತ್ತು ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಮಹಿಳಾ ಮಹಾವಿದ್ಯಾಲಯ ಕನ್ನಡ ವಿಭಾಗ ಮತ್ತು ಐಕ್ಯೂಎಸಿ ಘಟಕ ಇವರ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ, ಸುವರ್ಣ ಕರ್ನಾಟಕ50: ಸಂಭ್ರಮಾಚರಣೆ ಐತಿಹಾಸಿಕ ದಾಖಲೆಗಳ ಛಾಯಾಚಿತ್ರಗಳ ಪ್ರದರ್ಶನ ಕಾರ್ಯಕ್ರಮದ ಉದ್ಘಾಟನೆ ಮಾಡಿ ಮಾತನಾಡಿದ ಅವರು, ದಾಖಲೆಗಳು ಇತಿಹಾಸದ ಮೂಲಾಧಾರಗಳಾಗಿವೆ. ದಾಖಲೆಗಳು ನಾಡಿನ ಅಭಿವೃದ್ಧಿಗೆ ಪೂರಕವಾಗಿದ್ದು, ದಾಖಲೆಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ ಎಂದರು.

1973 ರಲ್ಲಿ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ಸ್ಥಾಪನೆಯಾಗಿದ್ದು, 200 ವರ್ಷಗಳಿಗೂ ಹಳೆಯ ಐತಿಹಾಸಿಕ ನಾಡಿನ ದಾಖಲೆಗಳನ್ನು ಸಂರಕ್ಷಿಸಿ, ದಾಖಲೆಗಳ ಸೇವಾ ಕಾರ್ಯವನ್ನು ಒದಗಿಸುತ್ತಿದೆ. ಸಾರ್ವಜನಿಕರಿಗೆ, ಸಂಶೋಧಕರಿಗೆ, ಸರ್ಕಾರಿ ಇಲಾಖೆಗಳಿಗೆ ಉಪಯೋಗಕ್ಕಾಗಿ ಪ್ರಕಟಿತ, ಅಪ್ರಕಟಿತ, ಕಡತಗಳು, ಖಾಸಗಿ ದಾಖಲೆಗಳು ಮತ್ತು ಧ್ವನಿ ಇತಿಹಾಸ ದಾಖಲೆಗಳನ್ನು ಸಂಗ್ರಹಿಸಿ ಮಾಹಿತಿ ಒದಗಿಸುವ ಕೆಲಸ ಮಾಡುತ್ತಿದೆ. ಈ ದಾಖಲೆಗಳು ಕರ್ನಾಟಕದ ಇತಿಹಾಸ, ಮೈಸೂರು ಸಂಸ್ಥಾನದ ಇತಿಹಾಸ, ಕರ್ನಾಟಕ ಏಕೀಕರಣ ಚಳುವಳಿ, ಸ್ವಾತಂತ್ರ್ಯ ಹೋರಾಟದ ಮಾಹಿತಿ, ಮೈಸೂರು, ಕರ್ನಾಟಕ ಆಡಳಿತಾತ್ಮಕ ಮಾಹಿತಿಗಳು, ಸೆನ್ಸಸ್ ವರದಿಗಳು, ಪ್ರಜಾಪ್ರತಿನಿದಿ ಸಭೆಯ ನಡವಳಿಗಳು, ಮೈಸೂರು ಅರಮನೆ ಆಡಳಿತಕ್ಕೆ ಸಂಬಂಧಿಸಿದಂತೆ ಕಡತಗಳು, ಮೈಸೂರು ಸರ್ಕಾರದ ನಡವಳಿಗಳು, ನೇಮಕಾತಿಗಳು, ಅರಣ್ಯ ಇಲಾಖೆಯ ಅಧಿಸೂಚನೆಗಳು, ಭೂಸ್ವಾದೀನ, ಜಮೀನು ಮುಂತಾದ ಕಂದಾಯ ವಿಷಯಗಳು, ಸ್ಥಳೀಯ ಆದೇಶಗಳು, ಅಂದಿನ ಮದ್ರಾಸ್ ಪ್ರಾಂತ್ಯದ ನಡವಳಿಗಳು ಹಾಗೂ ನಾಡು ನುಡಿ ಶ್ರಮಿಸಿದ ಗಣ್ಯ ವ್ಯಕ್ತಿಗಳ ನೆನಪಿನ ಅನುಭವದ ಧ್ವನಿ ಸಂಗ್ರಹ ದಾಖಲೆಗಳಂತಹ ಸುಮಾರು 1780 ರಿಂದ 2019 ರವರೆಗೆ ವಿವಿಧ ದಾಖಲೆಗಳನ್ನು ಸಂರಕ್ಷಿಸಲಾಗಿದೆ. ಪ್ರಸ್ತುತ ಇಲಾಖೆಯು ಸುಮಾರು 1.30 ಕೋಟಿ ದಾಖಲೆಗಳನ್ನು ಡಿಜಟಲೀಕರಣ ಮಾಡಿ ಇಲಾಖೆಯ ವೆಬ್‌ನಲ್ಲಿ ಅಳವಡಿಸಲಾಗಿದೆ. ಇದರ ಕುರಿತು www.kannadasiri.kar.nic.inವೀಕ್ಷಣೆ ಮಾಡಬಹುದಾಗಿದೆ ಎಂದು ಮಾಹಿತಿ ನೀಡಿದರು.

ಪಾತ್ರಗಾರ ಇಲಾಖೆಯು, ಸರ್ಕಾರ ಅಧಿಕೃತವಾಗಿ ರಾಜ್ಯಪಾಲರ ಅನುಮತಿಯ ಸಹಿಯೊಂದಿಗೆ ಹೊರಡಿಸುವ ಗೆಜೆಟ್‌ಗಳನ್ನು ಸಂಕ್ಷಿಸುವ, ಮಾಹಿತಿಯನ್ನು ಒದಗಿಸುವ ಕೆಲಸವನ್ನು ಮಾಡುತ್ತಿದೆ. 1399 ರಲ್ಲಿ ಪ್ರಾರಂಭವಾದ ಮೈಸೂರು ಸಂಸ್ಥಾನ, 25 ಮಹಾರಾಜರು ಆಳ್ವಿಕೆ ಮಾಡಿದ ರಾಜರ ದಾಖಲೆಗಳಿವೆ. ಮೈಸೂರು ಮಹಾರಾಜರ ವಂಶಾವಳಿಯ ಭಾಗ-1, ಭಾಗ-2 ರಾಜರ ಆಡಳಿತದ ಕಾರ್ಯ ವೈಖರಿಯ ಬಗ್ಗೆ ಮಾಹಿತಿ ಒದಗಿಸುತ್ತವೆ. ಹೀಗೆ ಐತಿಹಾಸಿಕ ದಾಖಲೆಗಳನ್ನು ಇಡಲಾಗಿದೆ ಎಂದರು.

ಗಾಂಧೀಜಿಯವರು ಮಹಾರಾಜರ ಆಡಳಿತ ಅವಧಿಯಲ್ಲಿ ಮೈಸೂರಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಮೈಸೂರಿನ ಸರ್ವಾಂಗೀಣ ಬೆಳವಣಿಗೆಯ ಮಹಾಪೂರವೇ ಆಗುತ್ತಿದೆ ಎಂಬುದನ್ನ ಮನಗಂಡ ಗಾಂಧೀಜಿಯವರು ಮೈಸೂರನ್ನು ರಾಮರಾಜ್ಯ ಎಂದು ಕರೆದರು. ಇದರ ಬಗ್ಗೆ ಮಾಹಿತಿಯೂ ಸಹ ನಮ್ಮ ಇಲಾಖೆಯಲ್ಲಿ ಒದಗಿಸುವ ಕೆಲಸ ಮಾಡುತ್ತಿದೆ ಎಂದರು.

ಮುಖ್ಯ ಅತಿಥಿಗಳಾದ ಮೈಸೂರು ವಿಶ್ವವಿದ್ಯಾನಿಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ವಿಶ್ರಾಂತ ಕನ್ನಡ ಪ್ರಾಧ್ಯಾಪಕರಾದ ಡಾ. ಪ್ರೀತಿ ಶುಭಚಂದ್ರ ಅವರು ಮಾತನಾಡಿ, ಅಲ್ಲಮ ಪ್ರಭುಗಳ ವಚನದ ಸಾರಾಂಶವಾದ ಹಿಂದಿನ ಹೆಜ್ಜೆ ಅರಿಯಾಲಾಗದೆ, ಮುಂದಿನ ಹೆಜ್ಜೆ ಇಡಲಾಗದು ಎಂಬಂತೆ, ಭೂತಕಾಲದ ಆಗು-ಹೋಗುಗಳನ್ನು ತಿಳಿದುಕೊಳ್ಳದೇ, ವರ್ತಮಾನದ ಸಮಸ್ಯೆಗಳನ್ನು ನಿವಾರಣೆ ಮಾಡಲು ಸಾಧ್ಯವಾಗುವುದಿಲ್ಲ ಆದ್ದರಿಂದ ಪ್ರತಿಯೊಬ್ಬರಿಗೂ ಚರಿತ್ರೆಯ ಅರಿವು ಬಹಳ ಮುಖ್ಯ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಎಂ.ಎಂ.ಕೆ ಮತ್ತು ಶ್ರೀಧರ್ಮಸ್ಥಳ ಮಂಜುನಾಥೇಶ್ವರ ಮಹಿಳಾ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಪ್ರೊ. ಭಾರತಿ ಎನ್. ಅವರು ಮಾತನಾಡಿ, ಪತ್ರಾಗಾರ ಇಲಾಖೆಯಲ್ಲಿ ಐತಿಹಾಸಿಕ ದಾಖಲೆಗಳು ಪ್ರಾಥಮಿಕ ಆಕರಗಳಾಗಿವೆ. ಸಂಶೋಧಕರು ಇವುಗಳನ್ನು ಬಳಸಿಕೊಳ್ಳಬಹುದಾಗಿದ್ದು, ಇತಿಹಾಸದ ನೈಜ್ಯತೆ ಪರಿಶೀಲನೆಗೆ ಈ ದಾಖಲೆಗಳು ಸಹಕಾರಿವಾಗಿವೆ. ದಾಖಲೆಗಳ ಸಂರಕ್ಷಣೆ ಮತ್ತು ನಿರ್ವಹಣೆ ಬಹಳ ಅತ್ಯಮೂಲ್ಯವಾಗಿದೆ ಎಂದರು.

ಮೈಸೂರಿನ ವಿಭಾಗೀಯ ಪತ್ರಾಗಾರ ಕಛೇರಿಯ ಹಿರಿಯ ಸಹಾಯಕ ನಿರ್ದೇಶಕರಾದ ಮಂಜುನಾಥ್ ಹೆಚ್.ಎಲ್., ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಬಾಲಕಿಯರ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ನಯನ ಕುಮಾರಿ, ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ವಿನೋದ ಹಾಗೂ ಕಾಲೇಜಿನ ವಿದ್ಯಾರ್ಥಿಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಕರ್ನಾಟಕ ಲೋಕಾಯುಕ್ತ: ದೂರು ಸ್ವೀಕರಿಸುವ ಕಾರ್ಯಕ್ರಮ

**ಮೈಸೂರು:** ಮೈಸೂರು ವಿಭಾಗದ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಬಗ್ಗೆ ಸಂಬಂಧಪಟ್ಟ ಸಾರ್ವಜನಿಕ/ಸರ್ಕಾರಿ ಅಧಿಕಾರಿ/ ನೌಕರರ ವಿರುದ್ಧ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ನವೆಂಬರ್ 13 ರಂದು ಬೆಳಿಗ್ಗೆ 11 ಗಂಟೆಯಿಂದ ಮದ್ಯಾಹ್ನ 1 ಗಂಟೆಯವರೆಗೆ ಹುಣಸೂರು ತಾಲ್ಲೂಕಿನ ನಗರಸಭೆಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರು, ಕರ್ತವ್ಯ ಲೋಪವೆಸಗುವ ಭ್ರಷ್ಟ ಸರ್ಕಾರಿ ಅಧಿಕಾರಿ/ನೌಕರರರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬಹುದು ಎಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಉದೇಶ ಟಿ.ಜೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶ್ರೀಪಟ್ಟಲದಮ್ಮ ದೇವಸ್ಥಾನದ ಲೋಕಾರ್ಪಣೆ ಕಾರ್ಯಕ್ರಮ

**ಮಂಡ್ಯ:** ಹೊಳಲು ಗ್ರಾಮದಲ್ಲಿ ಶ್ರೀಚಿತ್ತಾನಹಳ್ಳಿ ಶ್ರೀಪಟ್ಟಲದಮ್ಮ ದೇವಸ್ಥಾನದ ಲೋಕಾರ್ಪಣೆ ಕಾರ್ಯಕ್ರಮವನ್ನು ದೇವಿಗೆ ಪೂಜೆ ಮಾಡುವ ಮುಖಾಂತರ ಡಾ ನಿರ್ಮಲಾನಂದ ನಾಥ ಸ್ವಾಮೀಜಿ ಪುರುಷೋತ್ತಮಾನಂದನಾಥ ಸ್ವಾಮೀಜಿ ಅವರು ದೇವತಾ ಕಾರ್ಯವನ್ನು ನೆರವೇರಿಸಿದರು.ಈ ಸಂದರ್ಭದಲ್ಲಿ ಉಸ್ತುವಾರಿ ಸಚಿವರಾದ ಎನ್. ಚೆಲುವರಾಯಸ್ವಾಮಿ, ಶಾಸಕ ರವಿಕುಮಾರ್ ಪಿ ಗೌಡ ಮಾಜಿ ಸಂಸದೆ ಸುಮಲತಾ ಅಂಬರೀಶ್, ಶಾಸಕ ದರ್ಶನ್ ಪುಟ್ಟಣ್ಣಯ್ಯ ಮಾಜಿ ಸಚಿವ ಸಿ ಎಸ್ ಪುಟ್ಟರಾಜು ವಿಧಾನ ಪರಿಷತ್ ಮಾಜಿ ಸದಸ್ಯ ಕೆ ಟಿ ಶ್ರೀಕಂಠೇಗೌಡ, ಎಂ ಎಲ್ ಸಿ ವಿಶ್ವನಾಥ್ ಮುಖಂಡರಾದ ಸ್ಟಾರ್ ಚಂದ್ರು,, ಹಾಗೂ ಶ್ರೀಚಿತ್ತಾನಹಳ್ಳಿ ದೇವಸ್ಥಾನದ ಗೌರವ ಅಧ್ಯಕ್ಷರಾದ ಎಚ್.ಎಲ್. ಶಿವಣ್ಣ , ಅಧ್ಯಕ್ಷರಾದ ಎಚ್ .ಬಿ. ರಾಮು, ಹಾಗೂ ಟ್ರಸ್ಟ್ ನ ಪದಾಧಿಕಾರಿಗಳು ಹೊಳಲು ಗ್ರಾಮಸ್ಥರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ದೇವಸ್ಥಾನಕ್ಕೆ ದೇಣಿಗೆ ನೀಡಿದ ದಾನಿಗಳಿಗೆ ಸನ್ಮಾನ ಮಾಡಲಾಯಿತು ಹಾಗೂ ದೇವಸ್ಥಾನದ ಶಿಲ್ಪಿಯಾದ ತಮಿಳುನಾಡಿನ ಸರಾವಣನ್ ಮೋಹನ್, ರವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಶಿವರ ಉಮೇಶ್ ರವರಿಂದ ಗೀತ ಗಾಯನ ಕಾರ್ಯಕ್ರಮ ಏರ್ಪಡಿಸಲಾಗಿತ್ತು.



# ನಾಗಮಂಗಲದಲ್ಲಿ ಬೃಹತ್ ಸಸ್ಯಾಹಾರ, ಧ್ಯಾನ ಪ್ರಚಾರ ಜನಜಾಗೃತಿ ಜಾಥಾ

**ನಾಗಮಂಗಲ:** ಪತ್ರೀಜಿ ವೆಜಿಟೇರಿಯನ್ ಮೂವ್ಮೆಂಟ್ ಕರ್ನಾಟಕ ಹಾಗೂ ಮಂಡ್ಯ ಪಿರಮಿಡ್ ಸೊಸೈಟಿ ಇವರ ವತಿಯಿಂದ ಮಂಡ್ಯ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗಿರುವ 11 ದಿನಗಳ ಬೃಹತ್ ಸಸ್ಯಾಹಾರ ಮತ್ತು ಧ್ಯಾನ ಪ್ರಚಾರ ಜನಜಾಗೃತಿ ಜಾಥಾ ನವೆಂಬರ್ 10 ಭಾನುವಾರ ನಾಗಮಂಗಲ ಪಟ್ಟಣದಲ್ಲಿ ನಡೆಯಲಿದೆ. ಪಟ್ಟಣದ ಶ್ರೀ ಸೌಮ್ಯಕೇಶವಸ್ವಾಮಿ ದೇವಾಲಯದ ಮುಂಭಾಗದಿಂದ ಬೆಳಗ್ಗೆ 9.30 ಕ್ಕೆ ಜಾಥಾ ಪ್ರಾರಂಭವಾಗಲಿದ್ದು ಸಸ್ಯಹಾರ ಜನಜಾಗೃತಿ ಜಾಥಾಕ್ಕೆ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಶ್ರೀ ಪ್ರಸನ್ನ ನಾಥ ಸ್ವಾಮೀಜಿಯವರು ಚಾಲನೆ ನೀಡಲಿದ್ದಾರೆ. ಜಾಥಾದಲ್ಲಿ ಸಸ್ಯಾಹಾರದ ಮಹತ್ವದ ಬಗ್ಗೆ ಘೋಷಣೆಗಳನ್ನು ಕೂಗುತ್ತಾ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಾಗಿ ಟಿ.ಬಿ. ಬಡಾವಣೆಯ ಶ್ರೀ ಗಣೇಶ ದೇವಸ್ಥಾನವನ್ನು ತಲುಪಲಿದೆ. ತದನಂತರ ಮಧ್ಯಾಹ್ನ 1 ಗಂಟೆಗೆ ಶಿಕ್ಷಕರ ಭವನದಲ್ಲಿ ಧ್ಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಜಾಥಾದಲ್ಲಿ ಭಾಗವಹಿಸಲು ರಾಜ್ಯದ ನಾನಾ ಭಾಗಗಳಿಂದ ನೂರಾರು ಜನ ಧ್ಯಾನ ಬಂಧುಗಳು ಆಗಮಿಸುತ್ತಿದ್ದು ಅವರೊಟ್ಟಿಗೆ ಪಟ್ಟಣದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಜಾಥಾದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕಾಗಿ ಸಸ್ಯಾಹಾರ ಜಾಥಾದ ತಾಲ್ಲೂಕು ಸಂಚಾಲಕರೂ ಇತಿಹಾಸ ನಿವೃತ್ತ ಪ್ರಾಧ್ಯಾಪಕರಾದ ಶ್ರೀಯುತ ಬೈರೇಗೌಡರು ತಿಳಿಸಿದರು. ಶ್ರೀಯುತ ಭಾಸ್ಕರ್ ಭಟ್ರು, ಶ್ರೀ ಲಕ್ಷ್ಮಣ್ ಜೀ, ನಿವೃತ್ತ ಪ್ರಾಂಶುಪಾಲರಾದ ನಾಗರಾಜು.ಬಿ, ನಿವೃತ್ತ ಶಿಕ್ಷಕರಾದ ತಿರುಮಲೇಗೌಡರು, ಶಿಕ್ಷಕರಾದ ಶಿವನಂಜಪ್ಪ ಇ. ಶ್ರೀಮತಿ ಜಯಂತಿ ಉಪಸ್ಥಿತರಿದ್ದರು.

» **11 ದಿನಗಳ ಬೃಹತ್ ಸಸ್ಯಾಹಾರ ಮತ್ತು ಧ್ಯಾನ ಪ್ರಚಾರ ಜನಜಾಗೃತಿ ಜಾಥಾ**

# ಕೃಷ್ಣಪ್ಪ ಅವರಿಗೆ ಮನೆಯಂಗಳದ ಗೌರವ

**ಬೆಂಗಳೂರು:** ಅಂತೆ ಕಂತೆಗಳ ಪತ್ರಿಕೋದ್ಯಮಕ್ಕೆ ನಾವಾಗಿಯೇ ಕಡಿವಾಣ ಹಾಕಿಕೊಳ್ಳದಿದ್ದರೆ, ಮಾಧ್ಯಮಗಳ ಮೇಲಿನ ವಿಶ್ವಾಸರ್ಹತೆ ಇನ್ನೂ ಕಡಿಮೆಯಾಗಲಿದೆ ಎಂದು ಹಿರಿಯ ಪತ್ರಕರ್ತ ಆರ್.ಕೃಷ್ಣಪ್ಪ ಆತಂಕ ವ್ಯಕ್ತಪಡಿಸಿದಾರೆ.

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದಿಂದ ಮನೆಯಂಗಳದಲ್ಲಿ ಮನದುದುಂಬಿ ಕಾರ್ಯಕ್ರಮದಲ್ಲಿ ಕೆಯುಡಬ್ಲ್ಯೂಜೆ ಗೌರವ ಸ್ವೀಕರಿಸಿ ಮಾತನಾಡಿದರು.

ಯಾವುದೇ ಸುದ್ದಿಯಾಗಿರಲಿ ಅದರ ವಿಶ್ವಾಸರ್ಹತೆ ಬಹಳ ಮುಖ್ಯ. ಸುದ್ದಿ ಸಿಕ್ಕ ತಕ್ಷಣವೇ ಅದರ ಪೂರ್ವಾಪರತೆಯನ್ನು ನೋಡಬೇಕು. ಸುದ್ದಿ ನಿಖರತೆಯನ್ನು ಮೊದಲು ಸ್ಪಷ್ಟಪಡಿಸಿಕೊಳ್ಳಬೇಕು. ಬಳಿಕ ಅದನ್ನು ಸುದ್ದಿರೂಪಕ್ಕೆ ತರಬೇಕು. ಆದರೆ, ಈಗಿನ ಪತ್ರಿಕೋದ್ಯಮದಲ್ಲಿ ನಾನೇ ಮೊದಲು ಸುದ್ದಿಕೊಡಬೇಕು ಎನ್ನುವ ಒತ್ತಡ ಮತ್ತು ಧಾವಂತದಲ್ಲಿ ಸುದ್ದಿ ಮಾಡುತ್ತಿರುವುದು ಸರಿಯಾದ ಕ್ರಮ ಅಲ್ಲವೇ ಅಲ್ಲ ಎಂದು ಹೇಳಿದರು. ಓದು ಮುಗಿಸಿದ ಕೂಡಲೇ ಪ್ರಜಾವಾಣಿ ಪತ್ರಿಕೆಯ ನೆಟ್ಟಕಲ್ಲಪ್ಪ ಅವರು ಉದ್ಯೋಗ ಕರುಣಿಸಿದ್ದರಿಂದ ಸುಧಾ ವಾರ ಪತ್ರಿಕೆಯ ಪ್ರ? ರೀಡರ್ ಆಗಿ ಸೇರಿಕೊಂಡೆ. ಅಲ್ಲಿಂದ ಪ್ರಾರಂಭವಾದ ವೃತ್ತಿ ಜೀವನ ಕೋಲಾರ ಜಿಲ್ಲಾ ವರದಿಗಾರ, ಮೈಸೂರು ಜಿಲ್ಲಾ ವರದಿಗಾರನಾಗಿ ಮತ್ತು ಬೆಂಗಳೂರು ಕೇಂದ್ರ ಕಚೇರಿಯಲ್ಲಿ ವಿವಿಧ ಹಂತದಲ್ಲಿ ಕೆಲಸ ಮಾಡಿದೆ ಎಂದರು. ಕೋಲಾರ ಜಿಲ್ಲೆಯ ಕಂಬಾಳಪಲ್ಲಿಯಲ್ಲಿ 7 ಜನ ದಲಿತರನ್ನು ಜೀವಂತ ದಹಿಸಿದ ಘಟನೆಯನ್ನು ನಾನೇ ಖುದ್ದು ವರದಿ ಮಾಡಿದ್ದೇನೆ. ಒಂದೇ ಕೋಮಿನ ಎರಡು ಗುಂಪುಗಳ ನಡುವೆ ಘರ್ಷಣೆಯಾಗಿ ?ರಿಂಗ್ ನಡೆದಾಗ ನಾನು ಸಾಕ್ಷಿಯಾಗಿದ್ದು ವರದಿ ಮಾಡಿದ್ದೆ ಎಂದು ವೃತ್ತಿ ಬದುಕನ್ನು ನೆನಪಿಸಿಕೊಂಡರು. ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ, ಒಂದೇ ಪತ್ರಿಕೆಯಲ್ಲಿ 40 ವರ್ಷಗಳ ಕಾಲ ಕೆಲಸ ಮಾಡಿ ನಿವೃತ್ತರಾಗುವುದು ಅಪರೂಪ. ಆರ್.ಕೃಷ್ಣಪ್ಪ ಅವರು ಪ್ರಜಾವಾಣಿಯಲ್ಲಿಯೇ ಸುದೀರ್ಘ ಅವಧಿಯ ವೃತ್ತಿ ಜೀವನ ಸಾಗಿಸುವ ಮೂಲಕ ಅಪರೂಪದ ಪತ್ರಕರ್ತರಾಗಿ ಸುದ್ದಿಮನೆಯಲ್ಲಿ ಗುರುತಿಸಿಕೊಂಡಿರುವುದು ಅಭಿನಂದನೀಯ ಎಂದು ಹೇಳಿದರು. ಕೋಲಾರವಾಣಿ ಪತ್ರಿಕೆ ಸಂಪಾದಕ ಬಿ.ಎನ್.ಮುರುಳಿ ಪ್ರಸಾದ್ ಮಾತನಾಡಿ, ಕೆಯುಡಬ್ಲ್ಯೂ?ಜೆ ವತಿಯಿಂದ ಮನೆಯಂಗಳದಲ್ಲಿಯೇ ಹಿರಿಯ ಪತ್ರಕರ್ತರನ್ನು ಗೌರವಿಸುತ್ತಿರುವುದು ಅಭಿನಂದನೀಯ ಕೆಲಸ. ಪತ್ರಕರ್ತರಾದ ಆರ್.ಕೃಷ್ಣಪ್ಪ ಅವರು ಕೋಲಾರದಲ್ಲಿ ಸಲ್ಲಿಸಿದ ಸೇವೆ ಅನನ್ಯವಾದದ್ದು ಎಂದು ಹೇಳಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಖಜಾಂಚಿ ವಾಸುದೇವ ಹೊಳ್ಳ, ಬೆಂಗಳೂರು ನಗರ ಘಟಕದ ಶರಣ ಬಸಪ್ಪ ಈ ಸಂದರ್ಭದಲ್ಲಿ ಹಾಜರಿದ್ದರು.

# ಶವ ಸಂಸ್ಕಾರದ ದೃಢೀಕರಣಕ್ಕೆ ಅರ್ಜಿ: ಎಡವಟ್ಟು

**ಚಾಮರಾಜನಗರ:** ತಾಯಿ ಮೃತಪಟ್ಟಿರುವ ಬಗ್ಗೆ ದೃಡೀಕರಣ ಕೊಡಿ ಎಂದು ಅರ್ಜಿ ಸಲ್ಲಿಸಿದ ಮಗನಿಗೆ ಸ್ಥಳೀಯ ಸಂಸ್ಥೆ ನೀಡಿದ್ದು, ಅರ್ಜಿ ಸಲ್ಲಿಸಿದ್ದ ವ್ಯಕ್ತಿಯೇ ಮೃತಪಟ್ಟಿದ್ದಾರೆಂದು ಇದು ನಡೆದಿರುವುದು ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲದಲ್ಲಿ. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಪಟ್ಟಣದ ಹಳೇ ಕುರುಬರ ಬೀದಿಯ ನಿವಾಸಿ ಶಂಕರ್ ರವರು ನಗರಸಭೆಗೆ ಅರ್ಜಿ ಸಲ್ಲಿಸಿ ತಮ್ಮ ತಾಯಿ ಪುಟ್ಟಮ್ಮ ರವರು ಬೆಂಗಳೂರಿನ ಆಸ್ಪತ್ರೆಯಲ್ಲಿ ಮೃತರಾಗಿದ್ದರು. ಅವರ ಶವ ಸಂಸ್ಕಾರವನ್ನು ಕೊಳ್ಳೇಗಾಲದಲ್ಲಿ ನೆರವೇರಿಸಿದ್ದರು. ಮೃತರ ಅಂತ್ಯಕ್ರಿಯೆಗೆ ಸಂಬಂಧಿಸಿದಂತೆ ದೃಡೀಕರಣ ಪತ್ರ ನೀಡುವಂತೆ ನಗರಸಭೆಗೆ ಮೃತರ ಮಗ ಅರ್ಜಿ ಸಲ್ಲಿಸಿದ್ದರು. ಆದರೆ ನಗರಸಭೆಯ ಕಂಪ್ಯೂಟರ್ ಆಪರೇಟರ್ ಎಡವಟ್ಟಿನಿಂದ ತಾಯಿ ಸಾವಿನ ಬಗ್ಗೆ ದೃಡೀಕರಣ ಪತ್ರ ಕೇಳಿ ಮಗ ಅರ್ಜಿ ಸಲ್ಲಿಸಿದರೆ, ಮಗನ ಶವ ಸಂಸ್ಕಾರ ದೃಢೀಕರಿಸಿದ್ದು ಕರ್ತವ್ಯಲೋಪ ಎಸಗಿರುವ ಘಟನೆ ಬೆಳಕಿಗೆ ಬಂದಿದೆ. ತನ್ನ ತಾಯಿ ಸತ್ತಿದ್ದಾರೆಂದು ಶವಸಂಸ್ಕಾರದ ದೃಢೀ ಕರಣ ಪತ್ರ ಕೇಳಿದರೆ ಬದುಕಿರುವ ನನ್ನನ್ನೆ ಸಾಯಿಸಿದ್ದಾರೆ. ನನ್ನಿಂದ ಸೀಲ್ ಹಾಕಲು ನೂರು ರೂಪಾಯಿ ಹಣವನ್ನು ಪಡೆದು ಸಹ ಪಡೆದುಕೊಂಡಿದ್ದಾರೆ. ಎಂದು ಶಂಕರ್ ಹೇಳಿದ್ದಾರೆ.

# 23ನೇ ವಾರ್ಡ್‌ಗೆ ಶುದ್ಧ ನೀರು ಪೂರೈಸಿ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಪಟ್ಟಣ ವ್ಯಾಪ್ತಿಯ 23ನೇ ವಾರ್ಡ್ ಎಲ್ಲಾ ಬಡಾವಣೆಗಳಲ್ಲಿ ಶುದ್ಧ ಕುಡಿಯುವ ನೀರು ಒದಗಿಸುವುದರ ಜೊತೆಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ಎಸ್ಡಿಪಿಐ ಕಾರ್ಯಕರ್ತರು ಕೊಳ್ಳೇಗಾಲ ನಗರ ಸಭೆ ಪೌರಾಯುಕ್ತರಿಗೆ ಬುಧವಾರ ಮನವಿ ಸಲ್ಲಿಸಿದರು. ಕೊಳ್ಳೇಗಾಲ ನಗರಸಭೆ ಕಚೇರಿಯಲ್ಲಿ ಮನವಿಯನ್ನ ಸಲ್ಲಿಸಿ ಮಾತನಾಡಿದ ಎಸ್ಡಿಪಿಐ ಅಧ್ಯಕ್ಷ ಇಮ್ರಾನ್, ಈಗಾಗಲೇ ಅನಾರೋಗ್ಯಕ್ಕೆ ತುತ್ತಾಗಿ ಆಸ್ಪತ್ರೆಗಳಲ್ಲಿ ಇರುವ ಜನರು ಕೂಲಿ ಮಾಡಿ ಬದುಕುವವ ಬಡವರಾಗಿದ್ದು, ಅವರಿಗೆ ಸೂಕ್ತ ಪರಿಹಾರವನ್ನು ತುರ್ತಾಗಿ ವಿತರಣೆ ಮಾಡುವುದು, ಕುಡಿಯುವ ನೀರಿಗೆ 5 ರು. ಕಾಯಿನ್ ನೀರಿನ ಹೊಸ ಘಟಕಗಳನ್ನು ತುರ್ತಾಗಿ ತೆರೆಯುವುದು. ದಿನಂಪ್ರತಿ ಕಸದ ವಾಹನ ನೂರ್ಮೊಹಲ್ಲಾ, ಮಂಜುನಾಥ ನಗರ ಹಾಗೂ ಅಕ್ಕ ಪಕ್ಕದ ಸ್ಥಳಗಳಿಗೆ ತೆರಳಿ ಕಸವನ್ನು ವಿಲೇವಾರಿ ಮಾಡುಲು ಕ್ರಮವಹಿಸಬೇಕು, ಅಶುಚಿತ್ವ, ಕಲುಷಿತ ನೀರು ಪೂರೈಕೆ ಯಿಂದಾಗಿ ಈ ಘಟನೆ ನಡೆದಿದ್ದು ಪೌರ ಕಾರ್ಮಿಕರಿಗೆ ಚರಂಡಿಗಳಲ್ಲಿ ನೀರು ಸರಾಗವಾಗಿ ಹರಿಯುವಂತೆ ಕಸ ತೆಗೆಯಲು ನಿರ್ದೇಶಿಸಬೇಕು, ಚರಂಡಿಗಳ ಒಳಗೆ, ಮೇಲೆ ಹೋಗಿರುವ ನಲ್ಲಿ ನೀರಿನ ಪೈಪ್ ಲೈನ್ಗಳನ್ನು ಸುರಕ್ಷಿತ ಸ್ಥಳಗಳಿಗೆ ವರ್ಗಾ ಯಿಸಿ ನೀರು ಕಲುಷಿತಗೊಳ್ಳದಂತೆ ಕ್ರಮ ಕೈಗೊಳ್ಳುವುದು. ರಸ್ತೆಗಳ ಡಾಂಬರೀಕರಣ ಮಾಡುವುದು, ಬಡಾವಣೆಗಳಲ್ಲಿ ಜನರಿಗೆ ಆರೋಗ್ಯದ ಸ್ವಚ್ಛತೆಯ ಕುರಿತು ವೈದ್ಯಾಧಿ ಕಾರಿಗಳಿಂದ 2-3 ತಿಂಗಳಿಗೊಮ್ಮೆಯಾದರೂ ಅರಿವು ಮೂಡಿಸಲು ಮುಂದಾಗ ಬೇಕಿದೆ, ಮಾಂಸದ ತ್ಯಾಜ್ಯ ದಿನ ವಿಲೇವಾರಿಗೆ ಕ್ರಮ ವಹಿಸಬೇಕು ಎಂದರು. ಈ ಸಂದರ್ಭದಲ್ಲಿ ಎಸ್ಡಿಪಿಐ ಕಾರ್ಯದರ್ಶಿ ನದೀಮ್ ಪಾಷ, ಟಿಪ್ಪು ಪದಾಧಿಕಾರಿಗಳು ಕೈಫ್, ಸಿದ್ದಿಖ್ ಇದ್ದರು.



## ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ಅತಿಥಿ ಉಪನ್ಯಾಸಕ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಬೆಂಗಳೂರು:** ಬೆಂಗಳೂರಿನ ಕೆ.ಆರ್. ವೃತ್ತದಲ್ಲಿರುವ ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯದಲ್ಲಿ 2024-25ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಪರಿಸರ ವಿಜ್ಞಾನ ವಿಷಯವನ್ನು (ಐದನೇ ಸೆಮಿಸ್ಟರ್ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗೆ) ಬೋಧಿಸಲು ಅತಿಥಿ ಉಪನ್ಯಾಸಕರ ಹುದ್ದೆಗಳಿಗೆ ಸೂಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. M.Sc in Environmental Science / Life Scien ಹೊಂದಿರುವ ಆಸಕ್ತ ಅಭ್ಯರ್ಥಿಗಳು ಜಾಲತಾಣ ತಿತಿತಿ.www.uvee.karnataka.gov.inನಿಂದ ನಿಗಧಿತ ನಮೂನೆಯನ್ನು ಡೌನ್‌ಲೋಡ್ ಮಾಡಿಕೊಂಡು ಅರ್ಜಿಯನ್ನು ಸಂಬಂಧಿತ ದಾಖಲೆಗಳ ಪ್ರತಿಗಳೊಂದಿಗೆ ಕುಲಸಚಿವರ ಕಛೇರಿ, ಯುವಿಸಿಇ, ಕೆ.ಆರ್ ವೃತ್ತ ಇಲ್ಲಿಗೆ ನವೆಂಬರ್ 20 ರೊಳಗೆ ಕುಲಸಚಿವರ ಕಛೇರಿಗೆ ಸಲ್ಲಿಸಬಹುದು. ನಿಗಧಿತ ದಿನಾಂಕದ ನಂತರ ಸ್ವೀಕರಿಸಲಾದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಹೆಚ್ಚಿನ ವಿವರಗಳಿಗಾಗಿ ಕುಲಸಚಿವರ ಕಛೇರಿಯನ್ನು ಸಂಪರ್ಕಿಸಬಹುದು. ಸಂದರ್ಶನದ ದಿನಾಂಕವನ್ನು ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗುವುದು ಅಥವಾ ಅರ್ಹ ಅಭ್ಯರ್ಥಿಗಳಿಗೆ ನೇರವಾಗಿ ತಿಳಿಸಲಾಗುತ್ತದೆ ಎಂದು ಪ್ರಕಟಣೆ ತಿಳಿಸಿದೆ.

## 11ಕ್ಕೆ ಒನಕೆ ಓಬವ್ವ ಜಯಂತಿ

**ಬೆಂಗಳೂರು:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವೀರವನಿತೆ ''ಓಬವ್ವ ಜಯಂತಿ'' ನವೆಂಬರ್ 11 ರಂದು ಬೆಳಿಗ್ಗೆ 12.30 ಗಂಟೆಗೆ ಬೆಂಗಳೂರಿನ ಜೆ.ಸಿ. ರಸ್ತೆಯಲ್ಲಿರುವ ಕನ್ನಡ ಭವನದ ನಯನ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು, ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಜಯಂತಿ ಅಂಗವಾಗಿ ಬೆಳಿಗ್ಗೆ 11 ಗಂಟೆಗೆ ಗಾಯನ ಮತ್ತು ಜನಪದ ಕಲಾಪ್ರದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಕೇಂದ್ರ, ಹಣಕಾಸು ಕಾರ್ಪೊರೇಟರ್ ವ್ಯವಹಾರಗಳ ಸಚಿವರಾದ ಶ್ರೀಮತಿ ನಿರ್ಮಲಾ ಸೀತಾರಾಮನ್, ಸಣ್ಣ, ಅತಿಸಣ್ಣ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಕಾರ್ಮಿಕ ಉದ್ಯೋಗ ರಾಜ್ಯ ಸಚಿವರಾದ ಕುಮಾರಿ ಶೋಭಾ ಕರಂದ್ಲಾಜೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ಎಸ್. ತಂಗಡಗಿ ಘನ ಉಪಸ್ಥಿತಿ ಇರಲಿದ್ದಾರೆ. ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಉದಯ್ ಬಿ.ಗರುಡಾಚಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಸಚಿವರು, ಶಾಸಕರು, ವಿಧಾನಪರಿಷತ್ ಸದಸ್ಯರುಮತ್ತಿತರ ಗಣ್ಯರು ಉಪಸ್ಥಿತರಿರಲಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** ರಾಜ್ಯ ಬಾಲಕಾರ್ಮಿಕಕ್ರಿಯಾಯೋಜನೆಯಡಿ ಮಂಡ್ಯಜಿಲ್ಲಾ ಬಾಲಕಾರ್ಮಿಕಯೋಜನಾ ಸೊಸೈಟಿಗೆಗೌರವಧನದಆಧಾರದ ಮೇಲೆ ಪೂರ್ಣ ಪ್ರಮಾಣದಲ್ಲಿಕಾರ್ಯನಿರ್ವಹಿಸಲು ಗುಮಾಸ್ತರು ಕಂ ಲೆಕ್ಕಿಗರು ಹುದ್ದೆಗಳಿಗೆಅರ್ಹ ಅಭ್ಯರ್ಥಿಗಳಿಂದ ಅರ್ಜಿಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವವರು40 ವರ್ಷ ವಯೋಮಿತಿ ಮೀರಿರಬಾರದು.ಬಿ.ಕಾಂ.ಪದವಿ ಹೊಂದಿರಬೇಕು ಲೆಕ್ಕಪತ್ರಗಳನ್ನು ನಿರ್ವಹಿಸುವಲ್ಲಿ/ ಆಕೌಂಟೆಂಟ್ ಹುದ್ದೆಯಲ್ಲಿ ಕನಿಷ್ಠ ಪಕ್ಷ 05 ವರ್ಷಗಳ ಅನುಭವಇರಬೇಕುಲೆಕ್ಕಪತ್ರದಲ್ಲಿ ಬ್ಯಾಂಕ್ ವ್ಯವಹಾರಗಳನ್ನು ಸರ್ಕಾರದ ಲೆಕ್ಕ ಪತ್ರಗಳನ್ನು ತಯಾರಿಸುವ ಲೆಕ್ಕ ಪತ್ರಗಳಿಗೆ ಸಂಬಂಧಿಸಿದ ದಾಖಲೆ, ರಿಜಿಸ್ಟರ್‌ಗಳ ಕುರಿತು ಮಾಹಿತಿಯನ್ನು ಹೊಂದಿರಬೇಕು.ಕನ್ನಡ ಮತ್ತುಇಂಗ್ಲೀಷ್ ಮಾತನಾಡುವ ಹಾಗೂ ಬರೆಯುವಲ್ಲಿ ಉತ್ತಮ ಶೈಲಿಯನ್ನು ಹೊಂದಿರಬೇಕು.ಕಂಪ್ಯೂಟರ್‌ಜ್ಞಾನ ಹೊಂದಿರಬೇಕು. ಟ್ಯಾಲಿ ಸಾಫ್ಟ್‌ವೇರ್‌ಅನ್ನುಉಪಯೋಗಿಸುವಜ್ಞಾನ ಮತ್ತುಕೌಶಲ್ಯ ಇರಬೇಕು. ಕಛೇರಿಯ ಪತ್ರವ್ಯವಹಾರಗಳ, ಲೆಕ್ಕಪತ್ರಗಳ ವ್ಯವಹಾರವನ್ನುಗಣಕೀಕೃತದಲ್ಲಿ ನಮೂದಿಸಿ, ಕೇಂದ್ರಕಛೇರಿಗೆಗಣಕಯಂತ್ರದ ಮೂಲಕ ಕಳುಹಿಸುವ ಕುರಿತು ಪರಿಣಿತಿ ಹೊಂದಿರಬೇಕು. ಅಭ್ಯರ್ಥಿಗಳು ಅರ್ಜಿಯನ್ನುನವೆಂಬರ್ 15ರೊಳಗಾಗಿ ಎಲ್ಲಾ ವಿವರಗಳನ್ನುಇತ್ತೀಚಿನ ಭಾವಚಿತ್ರದೊಂದಿಗೆ ಸ್ವವಿವರವನ್ನು ಬರೆದು ಮಂಡ್ಯಕಾರ್ಮಿಕ ಅಧಿಕಾರಿಗಳಕಚೇರಿಗೆ ಸಲ್ಲಿಸತಕ್ಕದ್ದುಎಂದು ಮಂಡ್ಯಜಿಲ್ಲಾ ಬಾಲಕಾರ್ಮಿಕಯೋಜನಾ ಸೊಸೈಟಿಯಕಾರ್ಮಿಕಅಧಿಕಾರಿ ಹಾಗೂ ಸದಸ್ಯ ಕಾರ್ಯದರ್ಶಿಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲೆಯಲ್ಲಿ ದತ್ತು ಮಾಸಾಚರಣೆ

**ಮಂಡ್ಯ:** ದತ್ತು ಮಾಸಾಚರಣೆ ನವೆಂಬರ್-24ರ ಅಂಗವಾಗಿ ಕಾನೂನು ಬದ್ಧದತ್ತುವನ್ನು ಪ್ರೋತ್ಸಾಹಿಸುವ ಸಲುವಾಗಿ ಜಿಲ್ಲೆಯಲ್ಲಿದತ್ತು ಮಾಸಾಚರಣೆಆಚರಿಸಲಾಗುತ್ತಿದೆ. ಮಕ್ಕಳನ್ನು ಮಾರುವವರಿಗೂ ಹಾಗೂ ಕೊಳ್ಳುವವರಿಗೂ ಬಾಲನ್ಯಾಯಕಾಯ್ದೆಅನ್ವಯ 5 ವರ್ಷಗಳವರೆಗೂ ಸೆರಮನೆವಾಸದೊಂದಿಗೆರೂ.1 ಲಕ್ಷಗಳವರೆಗೆ ದಂಡ ವಿಧಿಸಬಹುದು. ಈ ಅಪರಾಧದಲ್ಲಿಆಸ್ಪತ್ರೆಯವರು ಶಾಮೀಲಾದರೆ 3 ವರ್ಷಗಳಿಗೆ ಕಡಿಮೆಇಲ್ಲದಂತೆ 7 ವರ್ಷಗಳವರೆಗೆ ಶಿಕ್ಷೆ ವಿಧಿಸಬಹುದು.ಅನಾಥ, ಪರಿತ್ಯಕ್ತ ಮತ್ತುಒಪ್ಪಿಸಲ್ಪಟ್ಟ ಮಕ್ಕಳ ಮಾಹಿತಿಕಂಡುಬಂದಲ್ಲಿಜಿಲ್ಲಾ ಮಕ್ಕಳ ರಕ್ಷಣಾಘಟಕದಕಛೇರಿಯದೂ.ಸಂ: 08232-223222, ಮಕ್ಕಳ ಸಹಾಯವಾಣಿ-1098 ಅಥವಾ 112ಗೆ ಸಂಪರ್ಕಿಸಬಹುದುಎಂದುಜಿಲ್ಲಾ ಮಕ್ಕಳ ರಕ್ಷಣಾಘಟಕ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿ. 19, 20, 21ರಂದು ಆಯೋಜನೆ | ಸಿದ್ಧತೆಗಳ ಬಗ್ಗೆ ಕುಲಪತಿ ಪ್ರೊ. ಎಂ.ಆರ್. ಗಂಗಾಧರ್ ಮಾಹಿತಿ

# ಚಾಮರಾಜನಗರ ವಿವಿ 18ನೇ ಕನ್ನಡ ವಿಜ್ಞಾನ ಸಮ್ಮೇಳನ

**ಚಾಮರಾಜನಗರ:** ಚಾಮರಾಜನಗರ ವಿಶ್ವವಿದ್ಯಾನಿಲಯ, ಸ್ವದೇಶಿ ವಿಜ್ಞಾನ ಆಂದೋಳನ-ಕರ್ನಾಟಕ ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಸಹಯೋಗದೊಂದಿಗೆ 18ನೇ ಕನ್ನಡ ವಿಜ್ಞಾನ ಸಮ್ಮೇಳವನ್ನು ಮುಂಬರುವ ಡಿಸೆಂಬರ್ 19, 20 ಹಾಗೂ 21ರಂದು ಚಾಮರಾಜನಗರ ವಿಶ್ವವಿದ್ಯಾಲಯದ ಸುವರ್ಣ ಗಂಗೋತ್ರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಚಾಮರಾಜನಗರ ವಿಶ್ವವಿದ್ಯಾನಿಲಯದ ಸುವರ್ಣ ಗಂಗೋತ್ರಿ ಆವರಣದಲ್ಲಿರುವ ಸಿಂಡಿಕೇಟ್ ಸಭಾಂಗಣದಲ್ಲಿಂದು ಚಾಮರಾಜನಗರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಂ.ಆರ್. ಗಂಗಾಧರ್ ಹಾಗೂ ಸ್ವದೇಶಿ ವಿಜ್ಞಾನ ಆಂದೋಳನ ಕರ್ನಾಟಕದ ಅಧ್ಯಕ್ಷರಾದ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ ಅವರು ಪತ್ರಿಕಾಗೋಷ್ಠಿ ನಡೆಸಿ ಈ ವಿಷಯ ತಿಳಿಸಿದರು.

ಸ್ವದೇಶಿ ವಿಜ್ಞಾನ ಆಂದೋಳನ ಕರ್ನಾಟಕವು ವಿಶಿಷ್ಟ ಶೈಕ್ಷಣಿಕ ವೈಜ್ಞಾನಿಕ ಸಂಸ್ಥೆಯಾಗಿದೆ. ಕರ್ನಾಟಕ ರಾಜ್ಯ ಮತ್ತು ದೇಶದಾದ್ಯಂತ ವಿಜ್ಞಾನ, ತಂತ್ರಜ್ಞಾನ ಮತ್ತು ಭಾರತೀಯ ಸಂಸ್ಕೃತಿಯನ್ನು ಜನಸಾಮಾನ್ಯರಿಗೆ ಮತ್ತು ವಿಶೇಷವಾಗಿ ವಿದ್ಯಾರ್ಥಿಗಳಿಗೆ ತಲುಪುವಂತೆ ಮಾಡುವುದು ಸಂಸ್ಥೆಯ ಧ್ಯೇಯವಾಗಿದೆ. ಕನ್ನಡ ವಿಜ್ಞಾನ ಸಮ್ಮೇಳನದ ವೈಶಿಷ್ಟ್ಯತೆ ಎಂದರೆ ಪಾರಂಪಾರಿಕ ಜ್ಞಾನ ಮತ್ತು ಆಧುನಿಕ ವಿಜ್ಞಾನ, ತಂತ್ರಜ್ಞಾನಗಳನ್ನು ಕೊಂಡೊಯ್ಯುವುದಲ್ಲದೇ ವಿಜ್ಞಾನ ಮತ್ತು ತಂತ್ರಜ್ಞಾನದ ಎಲ್ಲ ವಿಷಯದ ಪ್ರಬಂಧಗಳನ್ನು 12 ವಿಭಾಗಗಳ ಮೂಲಕ ಕೇವಲ ಕನ್ನಡ ಭಾಷೆಯಲ್ಲಿ ಮಾತ್ರ ಮಂಡಿಸಲಾಗುತ್ತದೆ ಎಂದರು.

ಕನ್ನಡ ವಿಜ್ಞಾನ ಸಮ್ಮೇಳನವನ್ನು ಕರ್ನಾಟಕದಲ್ಲಿರುವ ವಿಶ್ವವಿದ್ಯಾನಿಲಯಗಳು, ಸಂಶೋಧನಾ ಮತ್ತು ಅಭಿವೃದ್ಧಿ ಸಂಸ್ಥೆಗಳ ಸಹಯೋಗದೊಂದಿಗೆ 2005 ರಿಂದ ಆಯೋಜಿಸಲಾಗುತ್ತಿದ್ದು, ಇದುವರೆಗೆ 17 ಸಮ್ಮೇಳನವನ್ನು ನಡೆಸಲಾಗಿದೆ. 18ನೇ ಕನ್ನಡ ವಿಜ್ಞಾನ ಸಮ್ಮೇಳನವನ್ನು ಡಿಸೆಂಬರ್ 19, 20, 21ರವರೆಗೆ ಚಾಮರಾಜನಗರ ವಿಶ್ವವಿದ್ಯಾನಿಲಯದ ಸುವರ್ಣ ಗಂಗೋತ್ರಿ ಆವರಣದಲ್ಲಿ ಆಯೋಜಿಸಲು ತುಮಕೂರಿನಲ್ಲಿ ನಡೆದ 17ನೇ ಕನ್ನಡ ವಿಜ್ಞಾನ ಸಮ್ಮೇಳನದಲ್ಲಿ ತೀರ್ಮಾನ ಕೈಗೊಳ್ಳಲಾಯಿತೆಂದು ತಿಳಿಸಿದರು.

ಚಾಮರಾಜನಗರ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಂ.ಆರ್. ಗಂಗಾಧರ್ ಅವರು ಮಾತನಾಡಿ ಮೂರು ದಿನಗಳ ಕಾಲ ನಡೆಯುವ ಕನ್ನಡ ವಿಜ್ಞಾನ ಸಮ್ಮೇಳನದಲ್ಲಿ ಶಿಕ್ಷಕರು, ಬೋಧಕರು, ಸಂಶೋಧಕರು, ವಿದ್ಯಾರ್ಥಿಗಳು ಎಲ್ಲರೂ ಭಾಗವಹಿಸಿ ವಿಷಯ ಮಂಡನೆ ಮಾಡಬಹುದಾಗಿದೆ. ಚಾಮರಾಜನಗರ ಜಿಲ್ಲೆಯಲ್ಲಿ ಹೊಸದಾಗಿ ವಿಶ್ವವಿದ್ಯಾನಿಲಯ ಸ್ಥಾಪನೆಯಾಗಿದೆ. ಚಾಮರಾಜನಗರ ವಿಶ್ವವಿದ್ಯಾಲಯದಲ್ಲಿ 18ನೇ ಕನ್ನಡ ವಿಜ್ಞಾನ ಸಮ್ಮೇಳನ ಆಯೋಜನೆಗೆ ದೊಡ್ಡ ಅವಕಾಶ ಸಿಕ್ಕಿರುವುದು ಸಂತಸದ ಸಂಗಿತಿಯಾಗಿದೆ ಎಂದರು.



ಸಮ್ಮೇಳನದಲ್ಲಿ ರಾಷ್ಟ್ರೀಯ, ಅಂತರಾಷ್ಟ್ರೀಯ ಹೆಸರಾಂತ ವಿಜ್ಞಾನಿಗಳು ಭಾಗವಹಿಸಲಿದ್ದಾರೆ. ಅತ್ಯಂತ ಮಹತ್ವದ ಮಾಹಿತಿ ವಿವರಗಳನ್ನು ಒದಗಿಸುವ ವಸ್ತು ಪ್ರದರ್ಶನ ಸಹ ಏರ್ಪಾಡು ಮಾಡಲಾಗುತ್ತದೆ. ಗಣ್ಯಾತಿ ಗಣ್ಯರು, ವಿಜ್ಞಾನ ಕ್ಷೇತ್ರದ ಸಾಧಕರನ್ನು ಆಹ್ವಾನಿಸಲಾಗುತ್ತಿದ್ದು, ಈಗಾಗಲೇ ಒಂದು ಸುತ್ತಿನ ಮಾತುಕತೆ ನಡೆದಿದೆ. ಅಂತಿಮವಾಗಿ ಸಮ್ಮೇಳನಕ್ಕೆ ಭಾಗವಹಿಸುವವರು ವಿವರಗಳನ್ನು ಮುಂದೆ ಒದಗಿಸಲಿದ್ದೇವೆ. ಶಾಲಾ ಕಾಲೇಜು ವಿದ್ಯಾರ್ಥಿಗಳಿಂದ ಹಿಡಿದು ಎಲ್ಲರಿಗೂ ಸಮ್ಮೇಳನದಲ್ಲಿ ಭಾಗವಹಿಸಲು ಮುಕ್ತವಾಗಿ ಅವಕಾಶವಿದೆ. ಇಂತಹ ಮಹತ್ವದ ಸಮ್ಮೇಳನವನ್ನು ಜಿಲ್ಲೆಯ ಜನತೆ ಸದುಪಯೋಗ ಮಾಡಿಕೊಳ್ಳಬೇಕೆಂದು ಕುಲಪತಿಗಳು ತಿಳಿಸಿದರು.

ಸ್ವದೇಶಿ ವಿಜ್ಞಾನ ಆಂದೋಳನ ಕರ್ನಾಟಕದ ಅಧ್ಯಕ್ಷರಾದ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ ಅವರು ಮಾತನಾಡಿ ಸ್ವದೇಶಿ ಮನೋಭಾವದೊಂದಿಗೆ ಆಧುನಿಕ ವಿಜ್ಞಾನಗಳ ಜೊತೆಗೆ ಪಾರಂಪಾರಿಕ ವಿಜ್ಞಾನಗಳಾದ ಮನೋ ಆಧ್ಯಾತ್ಮಿಕ, ಸಾಮಾಜಿಕ, ಸಾಂಸ್ಕೃತಿಕ, ಯೋಗ, ವೈದ್ಯಕೀಯ ಪದ್ದತಿ, ಕಲೆ, ಸಾಹಿತ್ಯ ಮತ್ತು ವಿಜ್ಞಾನಗಳ ಸಮ್ಮಿಳಿತ ಪ್ರಸರಣವೇ ಸ್ವದೇಶಿ ವಿಜ್ಞಾನ ಆಂದೋಳನ ಕರ್ನಾಟಕದ ಆದ್ಯತೆಯಾಗಿದೆ. 12 ವೈಜ್ಞಾನಿಕ ವಿಭಾಗಗಳಲ್ಲಿ ಪ್ರಬಂಧ ಮಂಡನೆಗೆ ಅವಕಾಶವಿದೆ ಎಂದರು.

ಪಾಣಿನೀಯಂ ವಿಭಾಗದಲ್ಲಿ ಅಷ್ಟಾಧ್ಯಾಯಿ, ಭಾಷಾ ವಿಜ್ಞಾನಗಳು ಮತ್ತು ಮಾನವಿಕಶಾಸ್ತ್ರ ವಿಜ್ಞಾನಗಳು, ಪತಂಜಲೀಯಂ ವಿಭಾಗದಲ್ಲಿ ಅಷ್ಟಾಂಗಯೋಗ, ಮನೋಆಧ್ಯಾತ್ಮಿಕ, ತತ್ವಶಾಸ್ತ್ರ, ದೈಹಿಕ ಶಿಕ್ಷಣ ಮತ್ತು ಮನೋವಿಜ್ಞಾನಗಳು, ಭಾರತೀಯಂ ವಿಭಾಗದಲ್ಲಿ ನಾಟ್ಯಶಾಸ್ತ್ರ, ಮಾನವಶಾಸ್ತ್ರ, ಸಮಾಜ ಮತ್ತು ಸಾಂಸ್ಕೃತಿಕ ವಿಜ್ಞಾನವನ್ನೊಳಗೊಂಡ ಕಲೆ ಮತ್ತು ಸಂಗೀತ, ಕೌಟಿಲೀಯಂ ವಿಭಾಗದಲ್ಲಿ ಅರ್ಥಶಾಸ್ತ್ರ, ಸಮಾಜಶಾಸ್ತ್ರ, ರಾಜ್ಯಶಾಸ್ತ್ರ, ಸಮಾಜ ಕಾರ್ಯ ಮತ್ತು ಆಡಳಿತ ನಿರ್ವಹಣೆ ವಿಜ್ಞಾನಗಳು, ಧನ್ವಂತರೀಯಂ ವಿಭಾಗದಲ್ಲಿ ಆರೋಗ್ಯ, ಆಧುನಿಕ ವೈದ್ಯಕೀಯ ವಿಜ್ಞಾನ, ಆಯುರ್ವೇದ, ಸಿದ್ಧ, ಯುನಾನಿ ಮತ್ತು ಭಾರತೀಯ, ಪಾರಂಪರೀಯ ವೈದ್ಯಕೀಯ ಪದ್ಧತಿ, ಪರಾಶರೀಯಂ ವಿಭಾಗದಲ್ಲಿ ಕೃಷಿ, ರೇಷ್ಮೆ ಕೃಷಿ, ತೋಟಗಾರಿಕೆ ಮತ್ತು ಅರಣ್ಯ, ಪಶುವೈದ್ಯಕೀಯ ಮತ್ತು ಮೀನುಗಾರಿಕಾ ವಿಜ್ಞಾನಗಳು, ವಸುಂಧರೀಯಂ ವಿಭಾಗದಲ್ಲಿ ಭೂವಿಜ್ಞಾನ, ಪರಿಸರವಿಜ್ಞಾನ, ಜೀವಹಾಲವಿಜ್ಞಾನ ಮತ್ತು ವಿಶ್ವ ವಿಜ್ಞಾನ, ನಾಗರ್ಜುನಿಯಂ ವಿಭಾಗದಲ್ಲಿ ರಸಾಯನವಿಜ್ಞಾನ, ಜೀವವಿಜ್ಞಾನ ಮತ್ತು ಪದಾರ್ಥ ವಿಜ್ಞಾನಗಳು, ಭಾಸ್ಕರೀಯಂ ವಿಭಾಗದಲ್ಲಿ ಭೌತಿಕ, ಗಣಿತಶಾಸ್ತ ಮತ್ತು ಖಭೌತ ವಿಜ್ಞಾನಗಳು, ಭಾರದ್ವಾಜಿಯಂ ವಿಭಾಗದಲ್ಲಿ ವಾಸ್ತು ನಿರ್ಮಾಣ, ಯಂತ್ರ, ವೈಮಾಂತರಿಕ್ಷ, ಮತ್ತು ಸಾರಿಗೆವಿಜ್ಞಾನಗಳು, ಜೆ.ಸಿ. ಬೋಸೀಯಂ ವಿಭಾಗದಲ್ಲಿ ವಿದ್ಯುನ್ಯಾನ, ವಿದ್ಯುತ್, ಗ್ರೀನ್ ಎನರ್ಜಿ ಮತ್ತು ವಿದ್ಯುನ್ಮಾನ ಸಂವಹನ ವಿಜ್ಞಾನಗಳು, ವರಾಹಮಿಹಿರಂ ವಿಭಾಗದಲ್ಲಿ ಬೃಹತ್‌ಸಂಹಿತ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ಅಣುರೇಣುಮಾನ ತಂತ್ರಜ್ಞಾನ, ಆಹಾರ ತಂತ್ರಜ್ಞಾನ ಮತ್ತು ಅತೀತ ವಿಜ್ಞಾನಗಳು ಕುರಿತ ವಿಷಯಕ್ಕೆ ಸಂಬಂಧಿಸಿದಂತೆ ಪ್ರಬಂಧ ಮಂಡನೆಗೆ ಅವಕಾಶವಿದ್ದು, ಪ್ರಬಂಧಗಳನ್ನು ಆಹ್ವಾನಿಸಲಾಗಿದೆ.

ವಿಜ್ಞಾನಿಗಳು, ಶಿಕ್ಷಕರು, ಅಧ್ಯಾಪಕರು, ಸಂಶೋಧಕರು, ಪದವಿ, ಸ್ನಾತಕೋತ್ತರ ವಿದ್ಯಾರ್ಥಿಗಳು, ಅನಿವಾಸಿ ಕನ್ನಡಿಗರು ಮತ್ತು ಇತರರು ನೋಂದಾಯಿಸಿದ ಪ್ರತಿನಿಧಿಗಳಿಗೆ ಸಮ್ಮೇಳನದಲ್ಲಿ ಪ್ರಬಂಧ ಮಂಡಿಸುವ ಅವಕಾಶ ಇರುತ್ತದೆ. ಓರ್ವ ಮಹಿಳಾ ವಿಜ್ಞಾನಿ, ಓರ್ವ ಯುವ ವಿಜ್ಞಾನಿ (35 ವರ್ಷ ಮೀರದವರು) ಮತ್ತು ಓರ್ವ ಅತ್ಯುತ್ತಮ ಪ್ರಬಂಧಗಳನ್ನು ಶ್ಲಾಘನಾಪತ್ರ ಮತ್ತು ಬಹುಮಾನಗಳಿಗೆ ಪರಿಗಣಿಸಲಾಗುವುದು ಎಂದು ಅವರು ತಿಳಿಸಿದರು.

ಸಮ್ಮೇಳನದಲ್ಲಿ ಆಧುನಿಕ ವಿಜ್ಞಾನದ ಜೊತೆಗೆ ಪಾರಂಪಾರಿಕ ವಿಜ್ಞಾನಗಳಾದ ಮನೋ ಆಧ್ಯಾತ್ಮಿಕ ಮತ್ತು ಸಾಮಾಜಿಕ, ಸಾಂಸ್ಕೃತಿಕ, ವೈಜ್ಞಾನಿಕ ಕ್ಷೇತ್ರಕ್ಕೆ ಅಮೂಲ್ಯ ಕೊಡುಗೆ ನೀಡಿದಂತಹ ಮಹನೀಯರಿಗೆ ಭಾರತರತ್ನ ಡಾ. ಸರ್.ಎಂ. ವಿಶ್ವೇಶ್ವರಯ್ಯ ವಿಜ್ಞಾನ ಪುರಸ್ಕಾರ, ಕರ್ನಾಟಕದ ಲಲಿತ ಕಲೆ, ಗಂಧರ್ವ ಕಲೆ, ಸಾಹಿತ್ಯ ಕ್ಷೇತ್ರಗಳಲ್ಲಿ ಅಮೂಲ್ಯ ಕೊಡುಗೆ ನೀಡಿದ ಮಹನೀಯರಿಗೆ ಡಾ. ಭೀಮ್ ಸೇನ್ ಜೋಶಿ, ಸಾಂಸ್ಕೃತಿಕ ವಿಜ್ಞಾನ ಪುರಸ್ಕಾರ ಹಾಗೂ ರಸಾಯನ ವಿಜ್ಞಾನ ಮತ್ತು ವಸ್ತು ವಿಜ್ಞಾನ ಕ್ಷೇತ್ರದಲ್ಲಿ ಕೊಡುಗೆ ನೀಡುತ್ತಿರುವ ಮಹನೀಯರಿಗೆ ಡಾ. ಸಿ.ಎನ್.ಆರ್. ರಾವ್ ವಿಜ್ಞಾನ ಪುರಸ್ಕಾರ ನೀಡಿ ಗೌರವಿಸಲಾಗುತ್ತದೆ ಎಂದು ಗಣೇಶ್ ಕಾರ್ಣಿಕ್ ಅವರು ವಿವರಿಸಿದರು.

ಸಮ್ಮೇಳನದ ಬಿತ್ತಿಪತ್ರವನ್ನು ಬಿಡುಗಡೆ ಮಾಡಲಾಯಿತು. ಚಾಮರಾಜನಗರ ವಿಶ್ವ ವಿದ್ಯಾನಿಲಯದ ರಿಜಿಸ್ಟ್ರಾರ್ ಕುಲಸಚಿವರಾದ (ಮೌಲ್ಯಮಾಪನ) ಪ್ರೊ. ವೆಂಕಟರಮಣ. ಜಿ.ವಿ, ಪಿ.ಎಂ.ಇ.ಬಿ. ನಿರ್ದೇಶಕರಾದ ಡಾ. ಸಿದ್ದರಾಜು. ವಿ.ಜಿ, ಪ್ರೊ. ಮಹೇಶ್. ಆರ್, ಸ್ವದೇಶಿ ವಿಜ್ಞಾನ ಆಂದೋಳನ ಕರ್ನಾಟಕದ ಉಪಾಧ್ಯಕ್ಷರಾದ ಡಾ. ಎ.ಎಂ. ಸುಧಾಕರ, ಪ್ರಧಾನ ಕಾರ್ಯದರ್ಶಿ ರಮೇಶ್. ಹೆಚ್., ಚಂದ್ರಕುಮಾರಿ, -ಇತರರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಕನ್ನಡ ಬಾರದ ಸರ್ಕಾರಿ ನೌಕರರಿಗೆ ಮತ್ತು ಸಾರ್ವಜನಿಕರಿಗೆ ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆ

**ಮೈಸೂರು:** ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಮತ್ತು ಮೈಸೂರಿನ ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆ ಸಹಯೋಗದೊಂದಿಗೆ ಕರ್ನಾಟಕದಲ್ಲಿರುವ ಕನ್ನಡ ಬಾರದ ಎಲ್ಲಾ ಸರ್ಕಾರಿ ನೌಕರರಿಗಾಗಿ ಹನ್ನೆರಡು ತಿಂಗಳು ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆಯನ್ನು ನಡೆಸುತ್ತಿದ್ದು, ಕರ್ನಾಟಕದಲ್ಲಿರುವ ಎಲ್ಲಾ ನಗರಸಭೆ, ಕ.ವಿ.ಪ್ರ.ನಿ.ನಿ., ಕೆ.ಎಸ್. ಆರ್.ಟಿ.ಸಿ., ವಿಶ್ವವಿದ್ಯಾಲಯಗಳು, ಶಾಲಾ ಕಾಲೇಜುಗಳು ಮತ್ತಿತರ ಸರ್ಕಾರಿ ಅನುದಾನ ಪಡೆಯುವ ಸಂಸ್ಥೆಗಳ ನೌಕರರು ಮತ್ತು ಎಲ್ಲಾ ರಾಷ್ಟ್ರೀಕೃತ ಬ್ಯಾಂಕುಗಳ ನೌಕರರು ಶುಲ್ಕ ರಹಿತವಾಗಿ ನೋಂದಾಯಿಸಿಕೊಳ್ಳಬಹುದು.

ಕರ್ನಾಟಕದ ಸರ್ಕಾರಿ ನೌಕರರು ಸಂಪರ್ಕ ಶಿಬಿರ ಹಾಗೂ ಪರೀಕ್ಷೆಗಳಿಗೆ ಹಾಜರಾಗುವವರ ಕಚೇರಿ ಗೈರು ಹಾಜರಿಯನ್ನು ಅನ್ಯಕಾರ್ಯ ನಿಮಿತ್ತ ಎಂದು ಪರಿಗಣಿಸಲಾಗುವುದು. ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆಗೆ ನೋಂದಾಯಿಸಿಕೊಂಡು ಉತ್ತೀರ್ಣರಾದವರಿಗೆ ಕರ್ನಾಟಕ ಲೋಕಸೇವಾ ಆಯೋಗದ ಕನ್ನಡ ಪರೀಕ್ಷೆಯಿಂದ ವಿನಾಯಿತಿ ನೀಡಲಾಗುತ್ತದೆ. ಈ ಯೋಜನೆಯನ್ನು ಇದೀಗ ಸಾರ್ವಜನಿಕರಿಗೂ ವಿಸ್ತರಿಸಲಾಗಿದ್ದು, ಎಸ್.ಎಸ್. ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುವ ಹಾಗೂ 18 ರಿಂದ 50 ವಯಸ್ಸಿನ ಒಳಗಿರುವವರು ಸಾರ್ವಜನಿಕರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು ಅರ್ಜಿ ನಮೂನೆ ಮತ್ತು ತರಬೇತಿ ವಿವರಗಳನ್ನು ಮಾನಸಗಂಗೋತ್ರಿಯ ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆಯ ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆ, ಪ್ರಭಾರಿ ಅಧಿಕಾರಿ ಅವರ ದೂ.ಸಂ. 0821-2345128 ಅಥವಾ ಐದು ರೂಪಾಯಿಯ ಅಂಚೆ ಚೀಟಿಯನ್ನು ಸ್ವ-ವಿಳಾಸಿತ ಲಕೋಟೆಯನ್ನು ಕಳುಹಿಸಿ ಪಡೆದುಕೊಳ್ಳಬಹುದಾಗಿದ್ದು, ಭರ್ತಿ ಮಾಡಿದ ಅರ್ಜಿಗಳನ್ನು ನವೆಂಬರ್ 30 ರೊಳಗೆ ಅರ್ಜಿ ಜೊತೆಯಲ್ಲಿ ರೂ.250 ಡಿಮ್ಯಾಂಡ್ ಡ್ರಾಫ್ಟ್‌ನ್ನು ಕಳುಹಿಸಿ ಕೊಡಬೇಕು. ನೋಂದಣಿತರಿಗೆ ಇಪ್ಪತ್ತು ಪಾಠಾವಳಿಗಳನ್ನು ಕಳುಹಿಸಲಾಗುವುದು. ತರಬೇತಿ ಮತ್ತು ಸಂಪರ್ಕ ಶಿಬಿರದ ಅಂತ್ಯದಲ್ಲಿ ಪರೀಕ್ಷೆಗಳನ್ನು ಪರೀಕ್ಷೆಗಳನ್ನು ನಡೆಸಲಾಗುವುದು.

## 12ರಂದು ಮರಿಯಾಲದಲ್ಲಿ ರಾಷ್ಟ್ರೀಯ ದತ್ತು ಮಾಸಾಚರಣೆ ಕುರಿತು ಅರಿವು ಕಾರ್ಯಕ್ರಮ

**ಚಾಮರಾಜನಗರ:** ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಹಯೋಗದಲ್ಲಿ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ ರಾಷ್ಟ್ರೀಯ ದತ್ತು ಮಾಸಾಚರಣೆ ಕುರಿತು ಅರಿವು ಕಾರ್ಯಕ್ರಮವನ್ನು ನವೆಂಬರ್ 12ರಂದು ಬೆಳಿಗ್ಗೆ 10 ಗಂಟೆಗೆ ಚಾಮರಾಜನಗರ ತಾಲೂಕಿನ ಮರಿಯಾಲ ಗ್ರಾಮದಲ್ಲಿರುವ ಬಸವರಾಜೇಂದ್ರ ನರ್ಸಿಂಗ್ ಕಾಲೇಜಿನಲ್ಲಿ ಏರ್ಪಡಿಸಲಾಗಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಈಶ್ವರ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಮರಿಯಾಲ ಬಸವರಾಜೇಂದ್ರ, ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಜನರಲ್ ಫಿಸಿಶಿಯನ್ ಡಾ. ಎಂ. ಬಸವರಾಜೇಂದ್ರ ಅವರು ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಎನ್. ಚಲುವರಾಜ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಎ. ರಮೇಶ, ಬಸವರಾಜೇಂದ್ರ, ಆಸ್ಪತ್ರೆಯ ಪ್ರಸೂತಿ ಹಾಗೂ ಸ್ತ್ರೀರೋಗ ತಜ್ಞರಾದ ಡಾ. ಶ್ವೇತಾ ಶಶಿಧರ್, ಬಸವರಾಜೇಂದ್ರ ಶುಶ್ರೂಷ ಕಾಲೇಜಿನ ಪ್ರಭಾರ ಪ್ರಾಂಶುಪಾಲರಾದ ಟಿ. ನದೀಯಾ, ಶುಶ್ರೂಷ ಶಾಲೆಯ ಪ್ರಾಂಶುಪಾಲರಾದ ಎನ್. ಮಂಜುನಾಥ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಸಂಪನ್ಮೂಲ ವ್ಯಕ್ತಿಗಳಾಗಿ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಸರಸ್ವತಿ ಅವರು ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ

**ಮೈಸೂರು:** ಹೂಟಗಳ್ಳಿ ನಗರಸಭಾ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆಯನ್ನು ನಡೆಸುತ್ತಿದ್ದು, ಒಣ ಶೌಚಾಲಯಗಳನ್ನು ಸ್ವಚ್ಛಗೊಳಿಸುವುದು, ಅನೈರ್ಮಲ್ಯ ಶೌಚಾಲಯಗಳಿಂದ ಹೊರಹೋಗಿ ತೆರೆದ ಚರಂಡಿಯಲ್ಲಿ ಸಂಗ್ರಹವಾಗುವ



ಮಾನವ ಮಲವನ್ನು ಸ್ವಚ್ಛಗೊಳಿಸುವುದು ಅಥವಾ ಶೌಚಾಲಯದ ಮಲ ಗುಂಡಿಗಳನ್ನು ದೈಹಿಕವಾಗಿ ಸ್ವಚ್ಛಗೊಳಿಸುವ ವರ್ಗದಲ್ಲಿನ ಯಾವುದೇ ವ್ಯಕ್ತಿಗಳು ಇದ್ದಲ್ಲಿ ನವೆಂಬರ್ 4 ರಿಂದ 14 ರವರೆಗೆ ಹೂಟಗಳ್ಳಿ ನಗರಸಭಾ ಕಛೇರಿಯಲ್ಲಿ ಓಂಒಂಖಖಿಇ ಪೋರ್ಟ್ಲ್‌ನ ಒಖ ಖಣಡಿತಜಥಿ ೦ಠಠ ನಲ್ಲಿ ಕಾಲೋಚಿತಗೊಳಿಸಲಾಗುತ್ತಿದ್ದು, ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳು ಖುದ್ದಾಗಿ ನಗರಸಭಾ ಕಛೇರಿಗೆ ಭೇಟಿ ನೀಡಿ ಸೂಕ್ತ ದಾಖಲೆಗಳೊಂದಿಗೆ ಹೆಸರನ್ನು ನೋಂದಾಯಿಸಿಕೊಳ್ಳಬಹುದು ಎಂದು ಹೂಟಗಳ್ಳಿ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.



## ರಾಜ್ಯ ಮಟ್ಟಕ್ಕೆ ಆಯ್ಕೆ

**ವಿಜಯಪುರ ಪಟ್ಟಣದ ಎವರ್‌ಗ್ರೀನ್ ಶಾಲೆಯ ವಿದ್ಯಾರ್ಥಿಗಳು ದೇವನಹಳ್ಳಿಯಲ್ಲಿ ನಡೆದ ಜಿಲ್ಲಾ ಮಟ್ಟದ ಹಿರಿಯ ಪ್ರಾಥಮಿಕ ವಿಭಾಗದ ಹೆಣ್ಣುಮಕ್ಕಳ ಉದ್ದ ಜಿಗಿತ ಸ್ಪರ್ಧೆಯಲ್ಲಿ ಭಾಗವಹಿಸಿದಂತಹ ಗಂಗೋತ್ರಿ, ಎಂ ಪ್ರಥಮ ಸ್ಥಾನಗಳಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ ಹಾಗೂ ಪ್ರೌಢಶಾಲಾ ವಿಭಾಗದ ಉದ್ದ ಜಿಗಿತ ಸ್ಪರ್ಧೆಯಲ್ಲಿ ಭಾಗವಹಿಸಿದಂತಹ ಪಾವನ ಎಂ ತೃತೀಯ ಸ್ಥಾನಗಳಿಸಿ ಶಾಲೆಯ ಕೀರ್ತಿಯನ್ನು ಹೆಚ್ಚಿಸಿರುತ್ತಾರೆ. ಈ ಸುಸಂದರ್ಭದಲ್ಲಿ ಮಕ್ಕಳನ್ನು ಸಜ್ಜುಗೊಳಿಸಿದ ದೈಹಿಕ ಶಿಕ್ಷರಾದಂತಹ ಆವುಲಕೊಂಡರಾಯಪ್ಪ ರವರನ್ನು ಹಾಗೂ ವಿಜೇತರಾದ ಎಲ್ಲಾ ವಿದ್ಯಾರ್ಥಿಗಳಿಗೆ ವೇದಗಾನ ಎಜುಕೇಷನ್ ಅಂಡ್ ಡೆವಲಪ್ ಮೆಂಟ್ ಟ್ರಸ್ಟ್‌ನ ಅಧ್ಯಕ್ಷರಾದ ಅನಿಲ್ ಕುಮರ್ ವಿ, ನಿಕಟಪೂರ್ವ ಅಧ್ಯಕ್ಷರಾದ ಎಸ್ ರುದ್ರಮೂರ್ತಿ, ಸಿ. ಎನ್. ರಾಮಯ್ಯ ರವರು ಹಾಗೂ ಇತರೆ ಸದಸ್ಯರು, ಮುಖ್ಯ ಶಿಕ್ಷಕಿಯವರಾದ ಸವಿತ ಆರ್ ಶುಭ ಹಾರೈಸಿದರು.**

## ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳ ಆಯೋಜನೆ

**ಮೈಸೂರು:** ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ವತಿಯಿಂದ 2024ರ ದಸರಾ ವಸ್ತು ಪ್ರದರ್ಶನದಲ್ಲಿ ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳನ್ನು ನವೆಂಬರ್ 9 ರಿಂದ ಡಿಸೆಂಬರ್ 28 ರವರೆಗೆ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಪಿ.ಕಾಳಿಂಗರಾವ್ ಗಾನಮಂಟಪದಲ್ಲಿ ಏರ್ಪಡಿಸಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರದ ಕಚೇರಿ ಅಥವಾ https://forms.gle/qB9Wbj8D4KLFbod6A ಆನ್‌ಲೈನ್ ಮೂಲಕ ಅರ್ಜಿ ಪಡೆಯಬಹುದಾಗಿದ್ದು, ಭರ್ತಿ ಮಾಡಿದ ಅರ್ಜಿಗಳನ್ನು ನವೆಂಬರ್ 7 ರೊಳಗೆ ಕಚೇರಿಗೆ ಸಲ್ಲಿಸಬಹುದು. ಪ್ರತಿ ತಂಡಕ್ಕೆ ಪ್ರವೇಶ ಶುಲ್ಕ 1000 ರೂ. ಗಳಿದ್ದು, ಪ್ರಾಧಿಕಾರದ ವತಿಯಿಂದ ಉಪಹಾರದ ವ್ಯವಸ್ಥೆ ಇರುತ್ತದೆ. ಸ್ಪರ್ಧೆಯಲ್ಲಿ ಪ್ರಥಮ ಬಹುಮಾನವಾಗಿ ರೂ. 30,000, ದ್ವಿತೀಯ ಬಹುಮಾನ ರೂ.20.000, ತೃತೀಯ ಬಹುಮಾನ 15000 ರೂ ಮತ್ತು ಎರಡು ತಂಡಗಳಿಗೆ ರೂ 5000 ಗಳ ಸಮಾಧಾನಕರ ಬಹುಮಾನ ಹಾಗೂ ಸ್ಪರ್ಧೆಯಲ್ಲಿ ಭಾಗವಹಿಸುವ ಎಲ್ಲಾ ಸ್ಪರ್ಧಾರ್ಥಿಗಳಿಗೆ ಪ್ರಮಾಣ ಪತ್ರ ಮತ್ತು ಪದಕಗಳನ್ನು ನೀಡಲಾಗುವುದು. ನವೆಂಬರ್ 9 ರಂದು 14 ವರ್ಷ ಮೇಲ್ಪಟ್ಟವರಿಂದ ಸಮೂಹ ನೃತ್ಯ, ನವೆಂಬರ್ 16 ರಂದು 14 ವರ್ಷ ಒಳಪಟ್ಟವರು ಸಮೂಹ ನೃತ್ಯ, ನವೆಂಬರ್ 23 ರಂದು ಎಲ್ಲಾ ವಯೋಮಾನದವರ ಜಾನಪದ ಸಮೂಹ ನೃತ್ಯ, ನವೆಂಬರ್ 30 ರಂದು 8 ವರ್ಷಕ್ಕೆ ಒಳಪಟ್ಟವರ ಸಮೂಹ ನೃತ್ಯ, ಡಿಸೆಂಬರ್ 7 ರಂದು 16 ವರ್ಷ ಮೇಲ್ಪಟ್ಟವರ ಶಾಸ್ತ್ರೀಯ ಸಮೂಹ ನೃತ್ಯ, ಡಿಸೆಂಬರ್ 14 ರಂದು 16 ವರ್ಷಗಳ ಪಟ್ಟವರ ಶಾಸ್ತ್ರೀಯ ಸಮೂಹ ನೃತ್ಯ, ಡಿಸೆಂಬರ್ 21 ರಂದು ಎಲ್ಲಾ ವಯೋಮಾನದ ಸಮೂಹ ಗಾಯನ ಸ್ಪರ್ಧೆ, ಡಿಸೆಂಬರ್ 28 ರಂದು ಎಲ್ಲಾ ವಯೋಮಾನದವರ ಅಂತರ ವಿಶ್ವವಿದ್ಯಾನಿಲಯ ಸಮೂಹ ನೃತ್ಯ ಸ್ಪರ್ಧೆಗಳು ಸದರಿ ದಿನಗಳಂದು ಸಂಜೆ 6 ಗಂಟೆಯಿಂದ ನಡೆಯಲಿವೆ. ಹೆಚ್ಚಿನ ಮಾಹಿತಿಗಾಗಿ ಸಾಂಸ್ಕೃತಿಕ ಉಪಸಮಿತಿಯ ಅಧ್ಯಕ್ಷರಾದ ರಘುರಾಜೇ ಅರಸ್ ಅವರ ದೂ.ಸಂ: 9880358761 ಹಾಗೂ ಕಾರ್ಯದಕ್ಷರಾದ ಕೆ.ವಿ ಮಲ್ಲೇಶ್ ಅವರ ದೂ.ಸಂ: 9845218453 ಅಥವಾ ಕಾರ್ಯಕ್ರಮದ ಸಂಚಾಲಕರಾದ ನಿಂಗರಾಜು ಅವರ ದೂ. ಸಂ: 9964374746 ಹಾಗೂ ಮಂಜು ಸುಬೇದಾರ್ ಅವರ ದೂ.ಸಂ: 9620316818, ಆನ್‌ಲೈನ್ ಅರ್ಜಿಗಾಗಿ ಶ್ರೀನಿಧಿ ಅವರ ದೂ.ಸಂ: 8431517909 ಅನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷರಾದ ಆಯುಬ್ ಖಾನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ದುಷ್ಪರಿಣಾಮಗಳ ಬಗ್ಗೆ ಜನಜಾಗೃತಿ ಮೂಡಿಸಿ: ಡಾಕುಮಾರ

# ಮಂಡ್ಯ ಜಿಲ್ಲೆಯಲ್ಲಿ ಲಾಟರಿ ಹಾವಳಿ

**ಮಂಡ್ಯ:** ಜಿಲ್ಲೆಯಲ್ಲಿ ಲಾಟರಿ ಟಿಕೆಟ್ ಮಾರಾಟದಿಂದ ಜನಸಾಮಾನ್ಯರಲ್ಲಿ ಕೌಟುಂಬಿಕ ಕಲಹಗಳು ಉಂಟಾಗುವುದರ ಜೊತೆಗೆ ಆರ್ಥಿಕ ನಷ್ಟಗಳು ಸಂಭವಿಸುತ್ತಿದೆ. ಲಾಟರಿ ಹಾವಳಿ ತಪ್ಪಿಸಲು ಲಾಟರಿಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಜನಜಾಗೃತಿ ಮೂಡಿಸ ಬೇಕುಎಂದುಜಿಲ್ಲಾಧಿಕಾರಿಡಾಕುಮಾರಅವರು ತಿಳಿಸಿದರು.

ಅವರುಇಂದು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿಜಿಲ್ಲೆಯಲ್ಲಿಅನಧಿಕೃತ ಲಾಟರಿ ಮಾರಾಟ ಮತ್ತು ಮಟ್ಕಾ ಹಾವಳಿಯನ್ನು ನಿಯಂತ್ರಿಸುವ ಫ್ಲೈಯಿಂಗ್ ಸ್ಕ್ವಾಡ್ ಸಭೆ ನಡೆಸಿ ಮಾತನಾಡಿದರು.

ಬೇರೆ ರಾಜ್ಯಗಳಿಂದ ಅನಧಿಕೃತವಾಗಿ ಲಾಟರಿಟಿಕೆಟ್ ತಂದುಜಿಲ್ಲೆಯಲ್ಲಿ ಮಾರಾಟ ಮಾಡಲಾಗುತ್ತಿದೆ.ಅನಧಿಕೃತ ಲಾಟರಿಟಿಕೆಟ್ ಗೆ ಸಂಬಂಧಿಸಿದಂತೆ ಪ್ರಸ್ತುತ ವರ್ಷದಲ್ಲಿ 4 ಪ್ರಕರಣಗಳು ದಾಖಲಾಗಿವೆ. ಕಿರುಗಾವಲು ವ್ಯಾಪ್ತಿಯಲ್ಲಿ ಹೆಚ್ಚು ದೂರುಗಳು ಕೇಳಿ ಬರುತ್ತಿದೆಎಂದರು. ಲಾಟರಿ ಹಾವಳಿ ಹಾಗೂ ನಕಲಿ ಲಾಟರಿ ಮಾರಾಟತಡೆಗಟ್ಟಲು ಲಾಟರಿ ಮಾರಾಟ ಮಾಡುವ ಸ್ಥಳಗಳಲ್ಲಿ ಹೆಚ್ಚೆಚ್ಚು ಅರಿವು ಮೂಡಿಸಬೇಕು.ಗ್ರಾಮ ಪಂಚಾಯಿತಿ, ಸ್ತ್ರೀ ಶಕ್ತಿ ಸಂಘ ಹಾಗೂ ಸ್ವಸಹಾಯ ಸಂಘಗಳ ಮೂಲಕ ಜನಜಾಗೃತಿ ಮೂಡಿಸಬೇಕು.ಜೊತೆಗೆ ಶಾಲಾ ಮಕ್ಕಳಿಂದ ಜಾಥಾ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಾರ್ವಜನಿಕರಲ್ಲಿಜಾಗೃತಿ ಮೂಡಿಸಬೇಕುಎಂದರು.

ಅನಧಿಕೃತವಾಗಿ ಲಾಟರಿಟಿಕೆಟ್ ಮಾರಾಟಗಾರರು ಹಾಗೂ ಲಾಟರಿ ಕೊಳ್ಳುವವರ ಮೇಲೆ ಕಾನೂನು ಕ್ರಮಜರುಗಿಸಲಾಗುವುದುಎಂದು ತಿಳಿಸಿದರು.

ಸಭೆಯಲ್ಲಿಅಪರಜಿಲ್ಲಾಧಿಕಾರಿಡಾ ಹೆಚ್‌ಎಲ್ ನಾಗರಾಜು, ಹೆಚ್ಚುವರಿ ಪೊಲೀಸ್‌ಅಧೀಕ್ಷಕತಿಮ್ಮಯ್ಯ, ಸಣ್ಣ ಉಳಿತಾಯ ಮತ್ತುರಾಜ್ಯ ಲಾಟರಿ ಸಹಾಯಕ ನಿರ್ದೇಶಕಗಿರೀಶ್, ಅಭಿವೃದ್ಧಿಅಧಿಕಾರಿ ಶಿವಕುಮಾರ್, ವಾಣಿಜ್ಯತೆರಿಗೆಇಲಾಖೆಯ ಬಿ ಎಸ್ ಲೋಕೇಶ್ ಸೇರಿದಂತೆಇನ್ನಿತರರು ಉಪಸ್ಥಿತರಿದ್ದರು.



## ನಾಳೆ ಓಬವ್ವಜಯಂತಿ

**ಮಂಡ್ಯ ಜಿಲ್ಲಾಡಳಿತದ ವತಿಯಿಂದ ನವೆಂಬರ್ 11 ರಂದು ವೀರವನಿತೆ ಒನಕೆ ಓಬವ್ವಜಯಂತಿಯನ್ನುಅರ್ಥಪೂರ್ಣವಾಗಿಆಚರಿಸಲು, ಪೂರ್ವ ಸಿದ್ಧತೆಗೆ ರೂಪುರೇಷೆ ಹಾಕಿಕೊಳ್ಳಲು ಅಧಿಕಾರಿಗಳಿಗೆ, ಸಂಘ ಸಂಸ್ಥೆ ಮುಖಂಡರಿಗೆಜಿಲ್ಲಾಧಿಕಾರಿಡಾ.ಕುಮಾರಅವರು ತಿಳಿಸಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ವೀರವನಿತೆ ಒನಕೆ ಓಬವ್ವ ಹಾಗೂ ಕನಕದಾಸಜಯಂತಿಆಚರಣೆಯ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿಅವರು ಮಾತನಾಡಿದರು. ಇಂದಿನ ಮಹಿಳೆಯರು ವೀರವನಿತೆ ಓಬವ್ವನ ತತ್ವಾದರ್ಶಗಳನ್ನು ಅಳವಡಿಸಿಕೊಳ್ಳಲು ಅವರಜಯಂತಿ ಪ್ರಯುಕ್ತ ವಿಶೇಷ‌ಉಪನ್ಯಾಸ ಆಯೋಜಿಸಲಾಗಿದೆ ಎಂದು ತಿಳಿಸಿದರು. ನವೆಂಬರ್ 11 ರಂದು ಓಬವ್ವಜಯಂತಿಯನ್ನು ಬೆಳಿಗ್ಗೆ 10 ಗಂಟೆಗೆ ನಗರದಯಾವುದಾದರು ಮಹಿಳಾ ಕಾಲೇಜಿನಲ್ಲಿ ಹಮ್ಮಿಕೊಳ್ಳಲು ಸೂಚಿಸಿದರು. 18 ರಂದು ಕನಕದಾಸ ಜಯಂತಿ: ನವೆಂಬರ್ 18 ರಂದು ಕನಕದಾಸ ಜಯಂತಿ ಪ್ರಯುಕ್ತ 11 ಗಂಟೆಗೆಅಂಬೇಡ್ಕರ್ ಭವನದಲ್ಲಿ ವೇದಿಕೆ ಕಾರ್ಯಕ್ರಮಆಯೋಜಿಸಲಾಗಿದೆ. ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿ ಕಛೇರಿಯಿಂದ ನಗರದ ಅಂಬೇಡ್ಕರ್ ಭವನದವರೆಗೆ ಕನಕದಾಸರ ಭಾವಚಿತ್ರ, ಮೆರವಣಿಗೆ ನಡೆಯಲಿದೆ. ಸದರಿ ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳು ಭಾಗವಹಿಸಲಿವೆ. ಈ ಸಂದರ್ಭದಲ್ಲಿ ಅಪರಜಿಲ್ಲಾಧಿಕಾರಿ ಡಾ. ಹೆಚ್.ಎಲ್ ನಾಗರಾಜ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಡಾ.ಬಿ.ವಿ ನಂದೀಶ, ಹಿರಿಯ ಸಾಹಿತಿಗಳಾದ ತೈಲೂರು ವೆಂಕಟಕೃಷ್ಣ, ಪ್ರೊ.ಬಿ. ಜಯಪ್ರಕಾಶಗೌಡ, ಗ್ರಂಥಾಲಯಾಧಿಕಾರಿಕೃಷ್ಣಮೂರ್ತಿ ಇದ್ದರು.**

# ಸಂತ ಕವಿ ಶ್ರೀ ಕನಕದಾಸ ಜಯಂತಿ

**ಮೈಸೂರು:** ನವೆಂಬರ್ 18 ರಂದು ಮದ್ಯಾಹ್ನ 12.30 ಗಂಟೆಗೆ ಕರ್ನಾಟಕದ ಕಲಾಮಂದಿರದಲ್ಲಿ ಇಡೀ ಪ್ರಪಂಚಕ್ಕೆ ಮಾದರಿಯಾಗಿರುವ ''ಸಂತ ಕವಿ ಶ್ರೀ ಕನಕದಾಸ ಜಯಂತಿ'' ಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿಗಳಾದ ಡಾ.ಪಿ ಶಿವರಾಜು ಅವರು ತಿಳಿಸಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ''ಸಂತ ಕವಿ ಶ್ರೀ ಕನಕದಾಸ'' ಜಯಂತಿಯ ಆಚರಣೆಯ ಸಂಬಂಧ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಡೀ ಜಗತ್ತಿಗೆ ಅವರ ಆದರ್ಶಗಳಿಂದ ಮಾದರಿಯಾಗಿರುವ ಮಹಾನ್ ಚೇತನರಾದ ಕನಕದಾಸರ ಜಯಂತಿಯನ್ನು ರಾಜ್ಯದ ಇತರ ಜಿಲ್ಲೆಗಳಿಗಿಂತ ವಿಜೃಂಭಣೆಯಾಗಿ ಆಚರಿಸುವುದು ನಮ್ಮ ಕರ್ತವ್ಯ ಹಾಗೂ ಪುಣ್ಯದ ಕೆಲಸವಾಗಿದೆ ಎಂದರು.

ಸರ್ಕಾರದ ಶಿಷ್ಟಾಚಾರದಂತೆ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು. ಈ ಸಂಬಂಧ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಮಾಡಲು ಅಗತ್ಯ ಕ್ರಮ ವಹಿಸಿ, ಜಯಂತಿ ನಡೆಯುವ ಸ್ಥಳದ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ, ಶಾಮಿಯಾನ ವ್ಯವಸ್ಥೆ ಮಾಡಲು ಮಹಾನಗರ ಪಾಲಿಕೆಯ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಿದರು.

ಸಂತ ಕವಿ ಶ್ರೀ ಕನಕದಾಸ ಜಯಂತಿ ಆಚರಣಾ ಸಮಿತಿಯ ಅಧ್ಯಕ್ಷರು ಹಾಗೂ ಮಾಜಿ ಶಾಸಕರಾದ ಎಂ. ಕೆ. ಸೋಮಶೇಖರ್ ಅವರು ಮಾತನಾಡಿ, ಹಲವಾರು ವರ್ಷಗಳಿಂದ ಕನಕದಾಸ ಜಯಂತಿಯನ್ನು ಆಚರಿಸಲಾಗುತ್ತಿದೆ. ಅದರಲ್ಲಿಯೂ ಕಳೆದ 10 ವರ್ಷಗಳಿಂದ ಬಹಳ ವಿಜೃಂಭಣೆಯಿಂದ ನಮ್ಮ ಮೈಸೂರು ಜಿಲ್ಲೆಯಲ್ಲಿ ಆಚರಿಸಲಾಗುತ್ತಿದ್ದು, ಮೆರವಣಿಗೆಯಲ್ಲಿ ಸಾಂಸ್ಕೃತಿಕ ಕಲಾ ತಂಡಗಳಿಂದ ಪ್ರದರ್ಶನ ಹಾಗೂ ಟ್ಯಾಬ್ಲೋ ಗಳ ಮೆರವಣಿಗೆ ಮಾಡುವ ಮೂಲಕ ಜಯಂತಿಯ ಮೆರಗನ್ನು ಹೆಚ್ಚಿಸಲಾಗಿದೆ ಎಂದರು.



ಸಂತ ಕವಿ ಶ್ರೀ ಕನಕದಾಸ ಜಯಂತಿಯು ನವೆಂಬರ್ 18 ಮತ್ತು 19 ರಂದು ಕಲಾಮಂದಿರದಲ್ಲಿ ನಡೆಯಲಿದ್ದು, ನವೆಂಬರ್ 18 ರಂದು ಬೆಳಗ್ಗೆ 9:30 ಗಂಟೆಗೆ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದಿಂದ ಮೆರವಣಿಗೆ ಪ್ರಾರಂಭಗೊಳ್ಳಲಿದೆ. ಮೆರವಣಿಗೆಯಲ್ಲಿ 5 ಟ್ಯಾಬ್ಲೋ ಗಳ ಪ್ರದರ್ಶನ ಸೇರಿದಂತೆ 20 ಕಲಾ ತಂಡಗಳಿಂದ ವಿವಿಧ ಕಲೆಗಳ ಪ್ರದರ್ಶನ ನಡೆಯಲಿದೆ. ನವೆಂಬರ್ 19 ರಂದು ಸಂಜೆ ಕಲಾಮಂದಿರದಲ್ಲಿ ಸಮಾಜದಲ್ಲಿ ಉನ್ನತ ಸ್ಥಾನದಲ್ಲಿರುವ ವ್ಯಕ್ತಿಗಳಿಗೆ ಸನ್ಮಾನ ಸೇರಿದಂತೆ ಇನ್ನಿತರ ಕಾರ್ಯಕ್ರಮಗಳನ್ನು ಮಾಡಲಾಗುತ್ತದೆ ಎಂದು ಮಾಹಿತಿ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಎಂ. ಡಿ ಸುದರ್ಶನ್ ಅವರು ಮಾತನಾಡಿ, ಕಾರ್ಯಕ್ರಮದಲ್ಲಿ ಕಲಾತಂಡಗಳಿಂದ ಗೀತ ಗಾಯನವನ್ನು ಏರ್ಪಡಿಸಲಾಗುವುದು. ಆಹ್ವಾನ ಪತ್ರಿಕೆಯ ಮುದ್ರಣ ಮಾಡಿ ಸರ್ಕಾರದ ಶಿಷ್ಟಾಚಾರದಂತೆ ಜನ ಪ್ರತಿನಿಧಿಗಳನ್ನು ಆಹ್ವಾನಿಸಲಾಗುವುದು. ಈ ಸಂಬಂಧ ಸಮಿತಿಯವರು ಸಹಕರಿಸಬೇಕು ಎಂದು ತಿಳಿಸಿದರು. ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಸಂತ ಕವಿ ಶ್ರೀ ಕನಕದಾಸರ ಸಮುದಾಯದವರು ಉಪಸ್ಥಿತರಿದ್ದರು.

### ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಸೂಚನೆ

# ನ.18ಕ್ಕೆ ಕನಕದಾಸ ಜಯಂತಿ ಅದ್ದೂರಿ ಆಚರಣೆ ಮಾಡಿ

**ಚಿಕ್ಕಬಳ್ಳಾಪುರ:** ಶ್ರೀ ಕನಕ ದಾಸರ ಜಯಂತಿಯ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ನವೆಂಬರ್ 18 ರಂದು ನಗರದ ಗುರುರಾಜ ಕಲ್ಯಾಣ ಮಂಟಪ ಮುಂಭಾಗದಲ್ಲಿ ಸಂಭ್ರಮ ,ಸಡಗರದಿಂದ ಮತ್ತು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಅವರು ತಿಳಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕನಕ ದಾಸ ಜಯಂತಿ ಅಂಗವಾಗಿ ಗುರುವಾರ ನಡೆದ ಪೂರ್ವಭಾವಿ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಸಮುದಾಯದ ಮುಖಂಡರಿಂದ ಸಲಹೆಗಳನ್ನು ಸ್ವೀಕರಿಸಿದ ನಂತರ ಅವರು ಮಾತನಾಡಿದರು.

ಶ್ರೀ ಕನಕ ದಾಸರ ಜಯಂತಿಯ ಅಂಗವಾಗಿ ನವೆಂಬರ್ 18 ರಂದು ಬೆಳಿಗ್ಗೆ 11 ಗಂಟೆಗೆ ಚಿಕ್ಕಬಳ್ಳಾಪುರ ನಗರದ ಮರುಳು ಸಿದ್ದೇಶ್ವರ ದೇವಾಲಯದಿಂದ ಅದ್ದೂರಿ ಮೆರವಣಿಗೆ ಆಯೋಜಿಸಿ ಜಾನಪದ ಕಲಾತಂಡಗಳು ಹಾಗೂ ಪಲ್ಲಕ್ಕಿಗಳೊಂದಿಗೆ ನಡೆಸಲಾಗುವುದು. ಮೆರವಣಿಗೆಯು ಎಂ. ಜಿ ರಸ್ತೆ,ಬಿ.ಬಿ ರಸ್ತೆ ಮೂಲಕ ಗುರುರಾಜ ಕಲ್ಯಾಣ ಮಂಟಪದವರೆಗೆ ಸಾಗಲಿದೆ, ಸ್ತಬ್ದ ಚಿತ್ರಗಳೊಂದಿಗೆ ಬೃಹತ್ ಮೆರವಣಿಗೆ ನಡೆಯಲಿದೆ.ನಂತರ ವೇದಿಕೆ ಕಾರ್ಯಕ್ರಮ



ಜರುಗಲಿದೆ ಎಂದು ಅವರು ತಿಳಿಸಿದರು. ವೇದಿಕೆ ಕಾರ್ಯಕ್ರಮದಲ್ಲಿ ಶ್ರೀ ಕನಕ ದಾಸರ ವಿಚಾರದಾರೆಗಳ ಕುರಿತು ಭಾಷಣ, ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿರುವ ಸಮುದಾಯದ ಪ್ರತಿಭಾನ್ವಿತ 32 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಗುವುದು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದಿರುವ ಸಮುದಾಯದ 8 ಜನ ಸಾಧಕರಿಗೆ ಸನ್ಮಾನ ಮಾಡಲು ತೀರ್ಮಾನಿಸಲಾಗಿದೆ ಎಂದರು.

ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಶ್ರೀ ಕನಕ ದಾಸ ಜಯಂತಿಯನ್ನು ಬೆಳಿಗ್ಗೆ 9 ಗಂಟೆಗೆ ಆಚರಿಸಲು ಸೂಚನೆ ನೀಡಲಾಗಿದೆ. ಜಿಲ್ಲಾ ಮಟ್ಟದ ವೇದಿಕೆ ಕಾರ್ಯಕ್ರಮವು 12.30 ಕ್ಕೆ ಆರಂಭವಾಗುವುದು. ಜಿಲ್ಲೆಯ ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಶ್ರೀ ಕನಕ ದಾಸ ಜಯಂತಿಯನ್ನು ಕಡ್ಡಾಯವಾಗಿ ಆಚರಿಸಬೇಕು ಎಂದು ಕಟ್ಟು ನಿಟ್ಟಿನ ಸೂಚನೆ ನೀಡಿದರು. ಈ ಕಾರ್ಯಕ್ರಮಕ್ಕೆ ಆಹ್ವಾನ ಪತ್ರಿಕೆ ಮುದ್ರಣ, ವಿತರಣೆ, ವೇದಿಕೆ ಸಿದ್ಧತೆ ಮತ್ತು ಅಲಂಕಾರ, ಕುಡಿಯುವ ನೀರು, ಆಂಬುಲೆನ್ಸ್ ವ್ಯವಸ್ಥೆ, ಪೋಲೀಸ್ ಬಿಗಿ ಭದ್ರತೆ,ಮಧ್ಯಾಹ್ನದ ಉಪಹಾರ, ನಗರದ ಸ್ವಚ್ಚತೆ, ಸಾಧಕರಿಗೆ ಸನ್ಮಾನ, ಪ್ರತಿಭಾ ಪುರಸ್ಕಾರ, ಕಲಾತಂಡಗಳೊಂದಿಗೆ ಮೆರವಣಿಗೆ, ಸಾಧಕರ ಆಯ್ಕೆ ಸೇರಿದಂತೆ ಕಾರ್ಯಕ್ರಮ ಆಯೋಜನೆಗೆ ಅಗತ್ಯ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲು ಸಮಿತಿಗಳನ್ನು ರಚಿಸಿ ಸಮುದಾಯದ ಮುಖಂಡರಿಗೆ ಮತ್ತು ಅಧಿಕಾರಿಗಳಿಗೆ ಇಲಾಖಾವಾರು ಕಾರ್ಯಭಾರವನ್ನು ಸಭೆಯಲ್ಲಿ ಹಂಚಿಕೆ ಮಾಡಿದು ಹಾಗೂ ಈ ಎಲ್ಲ ಕಾರ್ಯಗಳನ್ನು ಸಮರ್ಪಕವಾಗಿ ನಿರ್ವಹಿಸಿ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿಗಳು ತಿಳಿಸಿದರು . ಜಯಂತ್ಯೋತ್ಸವಕ್ಕೆ ಯಾವುದೇ ಲೋಪದೋಷವಾಗದಂತೆ ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ಸೂಚನೆಗಳನ್ನು ಸಂಬಂಧ ಪಟ್ಟ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳಿಗೆ ಈ ವೇಳೆ ನೀಡಿದರು.

ಜಿಲ್ಲೆಯ ಸಮಸ್ತ ನಾಗರಿಕರು, ಸಮುದಾಯದ ಮುಖಂಡರು, ಪದಾಧಿಕಾರಿಗಳು, ಸರ್ಕಾರೇತರ ಸಂಸ್ಥೆಗಳ ಮುಖಂಡರು, ಸದಸ್ಯರು, ರೈತಬಾಂಧವರು ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಜಿಲ್ಲಾಧಿಕಾರಿಗಳು ಈ ವೇಳೆ ಮನವಿ ಮಾಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್ ಭಾಸ್ಕರ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಅತಿಕ್ ಪಾಷಾ , ಶಾಲಾ ಮತ್ತು ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಬೈಲಾಂಜಿನಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿ ಕುಮಾರ್, ನಗರ ಸಭೆಯ ಅಧಿಕಾರಿ ಉಮಾ ಶಂಕರ್, ಕುರುಬರ ಸಂಘದ ಜಿಲ್ಲಾಧ್ಯಕ್ಷ ಎ. ನಾಗರಾಜು, ತಾಲ್ಲೂಕು ಅಧ್ಯಕ್ಷರಾದ ಆನಂದ,ಹಾಗೂ ಶ್ರೀ ಕನಕ ದಾಸ ಸಂಘದ ಪದಾಧಿಕಾರಿಗಳು,ವಿವಿಧ ಸಂಘ ಸಂಸ್ಥೆಗಳ ಮುಖಂಡರು, ಸದಸ್ಯರು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

## ಕಾನೂನಿನ ಮೂಲಕವೇ ಮಕ್ಕಳನ್ನು ದತ್ತು ಪಡೆಯಬೇಕು

**ಚಿಕ್ಕಬಳ್ಳಾಪುರ:** ಮಕ್ಕಳನ್ನು ಕಾನೂನಿನ ಮೂಲಕವೇ ದತ್ತು ಪಡೆದು ಪರಿಪಾಲನೆ ಮಾಡಬೇಕು. ಅನಧಿಕೃತವಾಗಿ ದತ್ತು ಪಡೆಯುವುದು ಶಿಕ್ಷಾರ್ಹ ಅಪರಾಧ ಎಂದು ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ.ಶಿಲ್ಪ ಅವರು ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ನ ಸರ್ ಎಂ ವಿಶ್ವೇಶ್ವರಯ್ಯ ಸಭಾಂಗಣದಲ್ಲಿ 2024ನೇ ವರ್ಷದ ಅಂತರಾಷ್ಟ್ರೀಯ ದತ್ತು ಮಾಸಾಚರಣೆ ಪ್ರಯುಕ್ತ ಬುಧವಾರ ಆಯೋಜಿಸಿದ್ದ ಗ್ರಾಮ ಮಟ್ಟದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತು ತಾಲ್ಲೂಕು ಮಟ್ಟದ ಕಾರ್ಯನಿರ್ವಹಣಾಧಿಕಾರಿಗಳಿಗೆ ಮಕ್ಕಳ ದತ್ತು ಪ್ರಕ್ರಿಯೆ ಕುರಿತು ಜಿಲ್ಲಾ ಮಟ್ಟದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಕ್ಕಳಿಲ್ಲದವರು ಶಾಶ್ವತವಾಗಿ ಮಗುವಿನ ಹಕ್ಕು ಬಾಧ್ಯತೆ ಗಳೊಂದಿಗೆ ಮತ್ತು ಜವಾಬ್ದಾರಿಗಳನ್ನು ಕಾನೂನು ಬದ್ಧವಾಗಿ ಪಡೆದುಕೊಳ್ಳುವುದೇ ದತ್ತು. ದತ್ತು ಪ್ರಕ್ರಿಯೆಗೆ ಪರಿತ್ಯಕ್ತ, ಅನಾಥ, ಒಪ್ಪಿಸಲ್ಪಟ್ಟ ಮಕ್ಕಳು ಒಳಪಡುತ್ತಾರೆ. ಮಕ್ಕಳ ಮಾರಾಟ ಶಿಕ್ಷಾರ್ಹ ಅಪರಾಧ. ಮಕ್ಕಳನ್ನು ಮಾರುವುದು ಅಥವಾ ಕೊಳ್ಳುವುದು ಅಥವಾ ಕಾನೂನು ಬಾಹಿರದತ್ತು ಪ್ರಕಿಯೆಯಲ್ಲಿ ತೊಡಗಿಸುವುದು ಕಾನೂನು ರೀತ್ಯಾ ಶಿಕ್ಷಾರ್ಹ ಅಪರಾಧ. ಮಕ್ಕಳನ್ನು ಮಾರುವವರಿಗೂ ಹಾಗೂ ಹಾಗೂ ಕೊಳ್ಳುವರಿಗೂ ಬಾಲನ್ಯಾಯಕಾಯ್ದೆ 2015 ಸೆಕ್ಷನ್ 81ರ ಅನ್ವಯ

5 ವರ್ಷಗಳವರೆಗೂ ಸೆರೆಮನೆ ವಾಸದೊಂದಿಗೆ 1 ಲಕ್ಷದವರೆಗೆ ದಂಡ ವಿಧಿಸಲಾಗುವುದು. ಈ ಅಪರಾಧದಲ್ಲಿಆಸ್ಪತ್ರೆಯ ಅಧಿಕಾರಿಗಳು,ಸಿಬ್ಬಂದಿ ಶಾಮೀಲಾದರೆ 3 ವರ್ಷಗಳಿಗೆ ಕಡಿಮೆ ಇಲ್ಲದಂತೆ 7 ವರ್ಷಗಳವರೆಗೆ ವಿಸ್ತರಣೆಯಾಗುವುದು. ದತ್ತು ಪಡೆಯಲು ಇಚ್ಚಿಸುವ ದಂಪತಿಗಳು ನೊಂದಣಿ ಮಾಡಿಕೊಳ್ಳಲು ಕೇಂದ್ರ ಸರ್ಕಾರದ https://cara.wcd.gov.in ಅಥವಾ https://carings.wcd.gov.in ವೆಬ್‌ಸೈಟ್ ಅನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ಎಲ್ಲಾ ಅಧಿಕಾರಿಗಳಿಗೆ ವಿಡಿಯೋ ಮುಖಾಂತರ ಮತ್ತು ಆಡಿಯೋ ಮುಖಾಂತರ ದತ್ತು ಪ್ರಕ್ರಿಯೆ ಬಗ್ಗೆ ಮತ್ತು ಮಕ್ಕಳ ಹಕ್ಕುಗಳ ಕುರಿತು ಅರಿವು ಮೂಡಿಸಲಾಯಿತು.

ಈ ಸಂದರ್ಭದ್ದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಅತಿಕ್ ಪಾಷಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವೆಂಕಟೇಶ್ ರೆಡ್ಡಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ನೌತಾಜ್.ಬಿ ಮುಂತಾದವರು ಭಾಗವಹಿಸಿದ್ದರು.

### ಖಾಸಗಿ ಸೋಲಾರ್ ಕಂಪನಿಗೆ ಮಣೆ

# ಭೂರಹಿತ ದಲಿತರು ಬೀದಿ ಪಾಲು

**ಹುಳಿಯಾರು:** ಖಾಸಗಿ ಒಡತನದ ಸೋಲಾರ್ ಕಂಪನಿಗೆ ಸರ್ಕಾರಿ ಭೂಮಿ ಗುತ್ತಿಗೆ ನೀಡುವ ಮೂಲಕ ಆ ಭೂಮಿಯಲ್ಲಿ ಅನ್ನ ತಿನ್ನುತ್ತಿದ್ದ ದಲಿತರನ್ನು ಒಕ್ಕಲೆಬ್ಬಿಸಿ, ಬೀದಿಗೆ ತಳ್ಳಿರುವ ಘಟನೆ ಹುಳಿಯಾರು ಸಮೀಪದ ಕಂದಿಗೆರೆ ಹೋಬಳಿಯ ಚಿಕ್ಕರಾಂಪುರದಲ್ಲಿ ನಡೆದಿದೆ.

ಸರ್ಕಾರಿ ಸರ್ವೆ ನಂ. 14 ರಲ್ಲಿರುವ 148 ಎಕರೆ ಸರ್ಕಾರಿ ಭೂಮಿಯನ್ನು ಚಿಕ್ಕರಾಂಪುರದ ಪರಿಶಿಷ್ಟ ಜಾತಿಯ ಒಂದೇ ಕೋಮಿನ ನೂರಾರು ಜನ ಕಳೆದ 30-40 ವರ್ಷಗಳಿಂದ ಉಳುಮೆ ಮಾಡಿಕೊಂಡಿದ್ದು ತಮ್ಮ ಹಸಿದ ಹೊಟ್ಟೆಯ ತುಂಬಲು ಹಿಡಿ ಅನ್ನ ಬೆಳೆದುಕೊಳ್ಳುತ್ತಿದ್ದರು. ಮಳೆಯಾಶ್ರಿತ ಬೆಳೆಯಾದ ರಾಗಿ, ಹುರುಳಿ ಬೆಳೆದು ವರ್ಷ ಪೂರ್ತಿ ಈ ಕುಟುಂಬಗಳು ನೆಮ್ಮದಿಯ ಜೀವನ ಸಾಗಿಸುತ್ತಿದ್ದರು.

ಸರ್ವೆ 14 ರಲ್ಲಿ ಸುಮಾರು 62 ಕುಟುಂಬ ತಲಾ ಎರಡೆರಡು ಎಕರೆ ಭೂಮಿಯನ್ನು 1980 ರಿಂದಲೂ ಬಗರ್ ಹುಕುಂ ಸಾಗುವಳಿ ಮಾಡಿಕೊಂಡು ಬರುತ್ತಿದ್ದಾರೆ. 1990 ಮತ್ತು 1998 ಹಾಗೂ 2018 ರಲ್ಲಿ ಈ ಭಾಗದ ಭೂರಹಿತ ದಲಿತ ವರ್ಗದ ರೈತರು ಫಾರಂ: 50, 53, ಮತ್ತು 57 ನಲ್ಲಿ ಅರ್ಜಿ ಹಾಕಿ ಸಕ್ರಮಕ್ಕಾಗಿ ಮನವಿ ಸಲ್ಲಿಸಿದ್ದಾರೆ. ಅವರ ಅನುಭವದ ಮೇಲೆ ಹಿಂದೆ ಕೆಲವರಿಗೆ ಟಿಟಿ ಕಟ್ಟಿಸಿಕೊಳ್ಳಲಾಗಿದೆ. ಕೆಲವರಿಗೆ ಸರ್ವೆ ಮಾಡಿ ಸ್ಕೆಚ್ ಸಹ ಮಾಡಲಾಗಿದೆ. ಕೆಲವರಿಗೆ ಸಾಗುವಳಿ ಚೀಟಿ ಕೊಡಲಾಗಿದೆ. ಕೆಲವು ಖಾತೆಗಳೂ ಆಗಿದೆ.

ಆದರೆ ಕಳೆದ ಎರಡು ಮೂರು ತಿಂಗಳ ಹಿಂದಷ್ಟೆ ಮೆಘಾ ಇಂಜಿನಿಯರಿಂಗ್ ಮತ್ತು ಇನ್ ಫ್ರಾಸ್ಟ್ರಕ್ಚರ್ ಲಿಮಿಟೆಡ್ ಎಂಬ ಕಂಪನಿ ರೈತರು ಸ್ವಾಧೀನದಲ್ಲಿರುವ ಸುಮಾರು 40 ಕ್ಕೂ ಹೆಚ್ಚು ಭೂಮಿಯನ್ನು ಸಮತಟ್ಟು ಮಾಡಿ ಸೋಲಾರ್ ಪ್ಯಾನಲ್ ಅಳವಡಿಸಲು ಮುಂದಾಗಿದೆ. ವಿಷಯ ತಿಳಿದ ಗ್ರಾಮದ ದಲಿತರು, ಬಗರ್‌ಹುಕುಂ ಸಾಗುವಳಿದಾರರು ಸ್ಥಳಕ್ಕೆ ಧಾವಿಸಿ, ತಮ್ಮ ಭೂಮಿ ತಮಗೆ ಬಿಡಿ, ಯೋಜನೆ ಬೇರೆ ಕಡೆ ಮಾಡಿ, ಬಡ ದಲಿತರಿಗೆ ಅನ್ಯಾಯ ಮಾಡಬೇಡಿ ಎಂದು ಮನವಿ ಮಾಡಿದ್ದಾರೆ.

ಸದರಿ ಜಮೀನು ತಮಗೆ ಲೀಸ್‌ಗೆ ನೀಡಿದ್ದು, ಯೋಜನೆ ಅನುಷ್ಠಾನ ಮಾಡುವುದಾಗಿ ಸಿಬ್ಬಂಧಿ



> “ ಮೊದಲು ಗುಡ್ಡದ ಕೆಳಗೆ ಸಮತಟ್ಟು ಮಾಡುತ್ತಿದ್ದರು. ನಾವು ಪವನಯಂತ್ರ ಅಳವಡಿಸಲು ರಸ್ತೆ ಮಾಡುತ್ತಿದ್ದಾರೆ ಎಂದುಕೊಂಡಿದ್ದೆವು. ಹೀಗೆ 40 ಎಕರೆ ಸಮತಟ್ಟು ಮಾಡಿದಾಗ ಅನುಮಾನ ಬಂದು ಹೋಗಿ ಕೇಳಿದಾಗ ಸೋಲಾರ್ ಹಾಕುತ್ತಿದ್ದೇವೆ ಎಂದರು. ಆಗ ಎಲ್ಲರೂ ಒಗ್ಗಟ್ಟಾಗಿ ಇಲ್ಲಿ ಮೂರ್ನಲ್ಕು ದಶಕಗಳಿಂದ ಸಾಗುವಳಿ ಮಾಡುತ್ತಿದ್ದೇವೆ. ಈ ಭೂಮಿ ಬಿಟ್ಟರೆ ಬೇರೆ ಭೂಮಿಯಿಲ್ಲ. ನಮ್ಮನ್ನು ಒಕ್ಕಲೆಬ್ಬಿಸಲು ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದೇವೆ. ಈಗ ಕೆಲಸ ನಿಲ್ಲಿಸಿದ್ದಾರೆ. ಮತ್ತೆ ಆರಂಭಿಸಿದರೆ ಉಗ್ರ ಹೋರಾಟಕ್ಕೆ ಧುಮುಕುತ್ತೇವೆ.
>
> **। ವೆಂಕಟೇಶ್**
> ಸಾಗುವಳಿದಾರ, ಚಿಕ್ಕರಾಮಪುರ

> ಚಿಕ್ಕರಾಮಪುರದಲ್ಲಿ ಸೋಲಾರ್ ಪ್ಲಾಂಟ್ ಮಾಡುತ್ತಿರುವ ಸ್ಥಳ ಪರಿಶೀಲಿಸಿದ್ದೇನೆ. ಅಲ್ಲಿ ವಾಸ್ತವವಾಗಿ ಸಾಗುವಳಿ ಮಾಡಿರುವ ಲಕ್ಷಣ ಕಂಡುಬಂದಿಲ್ಲ. ಅಲ್ಲದೆ ಕಡಿದಾದ ಕಾಡುಗಲ್ಲು ಹಾಗೂ ಕುರುಚಲು ಗಿಡಗಳಿರುವ ಪ್ರದೇಶ. ಆಜೂಬಾಜಿನಲ್ಲೂ ಸಾಗುವಳಿ ಮಾಡಿಲ್ಲ. ಮುಖ್ಯವಾಗಿ ಈ ಭೂಮಿ ಕೃಷಿಗೆ ಯೋಗ್ಯವಾದ ಭೂಮಿಯಲ್ಲ. ಈ ವರದಿಯನ್ನೇ ಜಿಲ್ಲಾಧಿಕಾರಿಗಳಿಗೆ ಸಲ್ಲಿಸುತ್ತೇನೆ.
>
> **। ಕೆ.ಪುರಂದರ್**
> ತಹಸೀಲ್ದಾರ್, ಚಿಕ್ಕನಾಯಕನಹಳ್ಳಿ

ಬೆದರಿಕೆ ಹಾಕಿ, ದೌರ್ಜನ್ಯದಿಂದ ದಲಿತರನ್ನು ಸದರಿ ಸ್ಥಳದಿಂದ ಹೊರ ಹಾಕಿದೆ. ದಿಕ್ಕು ಕಾಣದ ದಲಿತರು ನ್ಯಾಯ ಮತ್ತು ರಕ್ಷಣೆಗಾಗಿ ಕಂದಾಯ ಇಲಾಖೆ ಹಾಗೂ ಸ್ಥಳೀಯ ಆಡಳಿತದ ಮೊರೆ ಹೋಗಿದೆ. ಈ ಭಾಗದಲ್ಲಿ ನೂರಾರು ಎಕರೆ ಸರ್ಕಾರದ ಖಾಲಿ ಭೂಮಿ ಇದ್ದರೂ ದಲಿತರ ವಿರುದ್ಧ ಇರುವ ಅಧಿಕಾರಿಗಳು ದಲಿತರು ಬಗರ್‌ಹುಕುಂ ಸಾಗುವಳಿ ಮಾಡುತ್ತಿರುವ ಭೂಮಿಯನ್ನೇ ಆಮೀಷಕ್ಕೊಳಗಾಗಿ ಗುತ್ತಿಗೆ ನೀಡಿ, ದಲಿತರಿಗೆ ಅನ್ಯಾಯ ಮಾಡುವ ಜೊತೆಗೆ ಪರೋಕ್ಷವಾಗಿ ದೌರ್ಜನ್ಯ ಎಸಗಲಾಗಿದೆ ಎಂದು ಆರೋಪಿಸಿದ್ದಾರೆ.

ಈಗ ನೊಂದ ಜನ ಸರ್ಕಾರ ಮತ್ತು ಖಾಸಗೀ ಕಂಪನಿ ವಿರುದ್ಧ ಪ್ರತಿಭಟನೆಗೆ ಮುಂದಾಗಿದ್ದು, ಪ್ರಾಣ ಹೋದರೂ ಭೂಮಿ ಬಿಡುವುದಿಲ್ಲ ಎಂದು ಹೋರಾಟಕ್ಕೆ ಇಳಿದಿದ್ದಾರೆ. ದಲಿತ ಭೂರಹಿತರಿಗೆ ಆಗಿರುವ ಅನ್ಯಾಯಕ್ಕೆ ನ್ಯಾಯ ಕೊಡಿಸಲು ಕರ್ನಾಟಕ ರಾಜ್ಯ ಭೂಮಿ ಮತ್ತು ವಸತಿ ಹಕ್ಕು ವಂಚಿತರ ಹೋರಾಟ ಸಮಿತಿಯ ತಿಪಟೂರು ಕೃಷ್ಣ, ರಾಘವೇಂದ್ರ, ಯಗಚಿಕಟ್ಟೆ, ಶಿವಕುಮಾರ್ ಮತ್ತಿಘಟ್ಟ ಮತ್ತಿತರು ಸ್ಥಳಕ್ಕೆ ಬೇಟಿ ನೀಡಿ ಮಾಹಿತಿ ಮತ್ತು ದಾಖಲೆ ಸಂಗ್ರಹಿಸಿದರು. ನ್ಯಾಯ ಸಿಗದಿದ್ದರೆ ಅನ್ಯಾಯದ ವಿರುದ್ಧ ಹೋರಾಟ ಮಾಡುವುದಾಗಿ ಭರವಸೆ ನೀಡಿದರು.

## ಸ್ವಯಂ ಸೇವಕ ಗೃಹರಕ್ಷಕ ಸದಸ್ಯ ಸ್ಥಾನಗಳಿಗೆ ಅರ್ಜಿ ಅಹ್ವಾನ

**ಚಿಕ್ಕಬಳ್ಳಾಪುರ:** ಜಿಲ್ಲೆಯ ವಿವಿಧ ತಾಲ್ಲೂಕು ಘಟಕಗಳಲ್ಲಿ ಖಾಲಿ ಇರುವ 87 ಸ್ವಯಂ ಸೇವಕ ಗೃಹರಕ್ಷಕ ಸದಸ್ಯ ಸ್ಥಾನಗಳಿಗೆ ಅರ್ಹರಿರುವ ಹಾಗೂ ಸೇವಾ ಮನೋಭಾವ ಹೊಂದಿರುವ ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇಚ್ಚೆಯುಳ್ಳ ಅಭ್ಯರ್ಥಿಗಳು ಎಸ್. ಎಸ್. ಎಲ್. ಸಿ ಯಲ್ಲಿ ಕಡ್ಡಾಯವಾಗಿ ಉತ್ತೀರ್ಣರಾಗಿರುವ ದೃಢೀಕರಣ ಆಧಾರ್ ಕಾರ್ಡ್, ಎಸ್. ಬಿ. ಐ ಬ್ಯಾಂಕ್ ಪುಸ್ತಕ, ಸರ್ಕಾರಿ ರಜಾ ದಿನಗಳನ್ನು ಹೊರತುಪಡಿಸಿ ಚಿಕ್ಕಬಳ್ಳಾಪುರ ಜಿಲ್ಲಾ ಗೃಹರಕ್ಷಕ ದಳದ ಕಚೇರಿಯಲ್ಲಿ ಉಚಿತವಾಗಿ ಅರ್ಜಿಗಳನ್ನು ಪಡೆಯಬಹುದು. ಅರ್ಜಿಗಳನ್ನು ಸಂಪೂರ್ಣವಾಗಿ ಭರ್ತಿ ಮಾಡಿ ಅರ್ಜಿಯೊಂದಿಗೆ ಅಗತ್ಯ ದಾಖಲೆಗಳನ್ನು ಡಿಸೆಂಬರ್ 20 ರ ಒಳಗಾಗಿ ಜಿಲ್ಲಾ ಗೃಹರಕ್ಷಕ ದಳ ಕಚೇರಿಗೆ ಸಲ್ಲಿಸುವಂತೆ ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಸಮಾದೇಷ್ಟರು ಜಿಲ್ಲಾ ಗೃಹರಕ್ಷಕದಳ ಕಾರ್ಯಾಲಯ, ಅಣಕನೂರು ಗ್ರಾಮ, ಚಿಕ್ಕಬಳ್ಳಾಪುರ ತಾ/ ಜಿ/- 562101 ದೂರವಾಣಿ - 08156- 200006 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಗೃಹರಕ್ಷಕ ದಳದ ಸಮಾದೇಷ್ಟರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಭಾರತೀಯ ಸ್ಟೇಟ್ ಬ್ಯಾಂಕ್ ನಿಂದ ಸಾಮಾಜಿಕ ಭದ್ರತಾ ಯೋಜನೆಗಳ ಅಭಿಯಾನ

**ಚಾಮರಾಜನಗರ:** ಭಾರತೀಯ ಸ್ಟೇಟ್ ಬ್ಯಾಂಕ್ ವತಿಯಿಂದ ಸಾಮಾಜಿಕ ಭದ್ರತಾ ಯೋಜನೆಗಳ ಅಭಿಯಾನದಡಿ ವಿವಿಧ ಯೋಜನೆಗಳಾದ ಅಟಲ್ ಪಿಂಚಣಿ ಯೋಜನೆ, ಜೀವನಜ್ಯೋತಿ ವಿಮಾ ಯೋಜನೆ ಹಾಗೂ ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ (ಪಿ.ಎಂ.ಎಸ್.ಬಿ.ವೈ) ಯೋಜನೆಯಡಿ 18 ರಿಂದ 70 ವರ್ಷದ ಉಳಿತಾಯ ಖಾತೆದಾರರು ಪ್ರತಿ ವರ್ಷ ಜೂನ್ 1 ರಿಂದ ಮುಂದಿನ ಮೇ 31ರ ವರೆಗೆ ಪ್ರೀಮಿಯಂ ಪಾವತಿ ಉಳಿತಾಯ ಖಾತೆಯಿಂದ ಆಟೋ ಡೆಬಿಟ್ ಮೂಲಕ ವಾರ್ಷಿಕ 20 ರೂ. ಪಾವತಿಸಿದರೆ ಅಪಘಾತದಿಂದ ಮರಣ ಹೊಂದಿದರೆ 2 ಲಕ್ಷ ರೂ. ಹಾಗೂ ಅಪಘಾತದಲ್ಲಿ ಭಾಗಶಃ ಅಂಗವೈಕಲ್ಯತೆ ಹೊಂದಿದರೆ 1 ಲಕ್ಷ ರೂ. ವಿಮಾ ಸುರಕ್ಷೆ ನೀಡಲಾಗುತ್ತದೆ. ಪ್ರಧಾನ ಮಂತ್ರಿ ಜೀವನ್ ಜ್ಯೋತಿ ವಿಮಾ ಯೋಜನೆಯಡಿ 18 ರಿಂದ 50 ವರ್ಷದ ಉಳಿತಾಯ ಖಾತೆದಾರರು (ಯೋಜನೆಯಡಿ ಒಂದು ಬಾರಿ ದಾಖಲಾದ ನಂತರ ವಾರ್ಷಿಕ ಪ್ರೀಮಿಯಂ ಸರಿಯಾಗಿ ಪಾವತಿಸಿದ್ದಲ್ಲಿ ವಿಮಾ ಸುರಕ್ಷೆಯು 55 ವರ್ಷ ವಯಸ್ಸಿನವರೆಗೂ ಮುಂದುವರೆಯುತ್ತದೆ) ಪ್ರತಿ ವರ್ಷ ಜೂನ್ 1 ರಿಂದ ಮುಂದಿನ ಮೇ 31 ರವರೆಗೆ ಪ್ರೀಮಿಯಂ ಪಾವತಿ ಉಳಿತಾಯ ಖಾತೆಯಿಂದ ಆಟೋ ಡೆಬಿಟ್ ಮೂಲಕ ವಾರ್ಷಿಕ 436 ರೂ. ಪಾವತಿಸಿದರೆ 2 ಲಕ್ಷ ರೂ. ವಿಮಾ ಸುರಕ್ಷೆ ನೀಡಲಾಗುತ್ತದೆ. ಅಟಲ್ ಪಿಂಚಣಿ ಯೋಜನೆಯಡಿ 18 ರಿಂದ 40ರ ವಯೋಮಿತಿಯ ಎಲ್ಲಾ ಖಾತೆದಾರರು ಈ ಯೋಜನೆಗೆ ಸೇರಲು ಅರ್ಹರಿರುತ್ತಾರೆ. 60 ವರ್ಷ ವಯಸ್ಸಿನ ನಂತರ ಹೂಡಿಕೆಗೆ ಅನುಸಾರವಾಗಿ ನಿಯಮಿತ ಮಾಸಿಕ ಪಿಂಚಣಿ 1 ಸಾವಿರದಿಂದ 5 ಸಾವಿರ ರೂ.ವರೆಗೆ ಸರ್ಕಾರದಿಂದ ಖಾತರಿಯುಕ್ತ ಪಿಂಚಣಿ ಸೌಲಭ್ಯ ನೀಡಲಾಗುತ್ತದೆ. ಹೂಡಿಕೆದಾರರ ಮರಣಾ ನಂತರ ಗಂಡ ಅಥವಾ ಹೆಂಡತಿಗೆ ಪಿಂಚಣಿ ಮುಂದುವರೆಯುತ್ತದೆ. ನಾಮಿನಿಗೆ ಹೂಡಿಕೆ ಮೊತ್ತದ ಮರುಪಾವತಿ ಸೌಲಭ್ಯ, ಹಾಗೂ ವಯಸ್ಸು ಮತ್ತು ಯೋಜನೆಯ ಆಯ್ಕೆಗೆ ಅನುಸಾರವಾಗಿ 42 ರೂ.ಗಳಿಂದ 291 ರೂ. ಮಾಸಿಕ ಕಂತುಗಳನ್ನು ಪಾವತಿಸಬಹುದು. ಕನಿಷ್ಠ ಹೂಡಿಕೆ, ಗರಿಷ್ಠ ಲಾಭ ಪಡೆಯಬಹುದು. ಈ ಯೋಜನೆಗಳಿಗೆ ಫಲಾನುಭವಿಗಳಾಗಲು ಉಳಿತಾಯ ಖಾತೆಯ ವಿವರ, ಅಕೌಂಟ್ ನಂಬರ್, ಖಾತೆದಾರರ ಆಧಾರ್ ಜೆರಾಕ್ಸ್ ಪ್ರತಿ, ನಾಮಿನಿ ಆಧಾರ್ ಜೆರಾಕ್ಸ್ ಪ್ರತಿಯೊಂದಿಗೆ ಅಗತ್ಯ ದಾಖಲಾತಿಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಗ್ರಾಹಕ ಸೇವಾ ಪ್ರತಿನಿಧಿ, ಗ್ರಾಹಕ ಸೇವಾ ಕೇಂದ್ರ, ಹತ್ತಿರದ ಎಸ್.ಬಿ.ಐ ಶಾಖೆಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಸಮೀಕ್ಷೆ

**ಮೈಸೂರು:** ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಸಮೀಕ್ಷೆ ನಡೆಸುತ್ತಿದ್ದು, ಒಣ ಶೌಚಾಲಯವನ್ನು ಸ್ವಚ್ಛಗೊಳಿಸುವ, ಅನೈರ್ಮಲ್ಯ ಶೌಚಾಲಯಗಳಿಂದ ಹೊರಹೋಗಿ ತೆರೆದ ಚರಂಡಿಯಲ್ಲಿ ಸಂಗ್ರಹವಾಗುವ ಮಾನವ ಸಂಪನ್ಮೂಲ ಸ್ವಚ್ಛಗೊಳಿಸುವ, ಶೌಚಾಲಯದ ಮಲಗುಂಡಿಗಳನ್ನು ದೈಹಿಕವಾಗಿ ಸ್ವಚ್ಛಗೊಳಿಸುವ ವರ್ಗದಲ್ಲಿನ ಯಾವುದೇ ವ್ಯಕ್ತಿಗಳು ಇದ್ದಲ್ಲಿ ನವೆಂಬರ್ 14 ರೊಳಗಾಗಿ ಸೂಕ್ತ ದಾಖಲಾತಿಗಳೊಂದಿಗೆ ರಮ್ಮನಹಳ್ಳಿಯ ಪಟ್ಟಣ ಪಂಚಾಯಿತಿಯ ಕಾರ್ಯಾಲಯದಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ರಮ್ಮನಹಳ್ಳಿ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಿಸಾನ್ ಮಾಲ್ ಸ್ಥಾಪನೆಗೆ ಅರ್ಜಿ

**ಮೈಸೂರು:** 2024-25 ನೇ ಸಾಲಿನ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಕರ್ಜನ್ ಪಾರ್ಕ್‌ನ ತೋಟಗಾರಿಕೆ ಇಲಾಖೆಯ ಆವರಣದಲ್ಲಿ ಕಿಸಾನ್ ಮಾಲ್ ಸ್ಥಾಪಿಸಲು ಅರ್ಹ ರೈತ ಉತ್ಪಾದಕರ ಸಂಸ್ಥೆಯಿಂದ ಕರ್ನಾಟಕ ಪಬ್ಲಿಕ್ ಪ್ರೋಕ್ಯೂರ್ಮೆಂಟ್ ಪೋರ್ಟಲ್‌ನಲ್ಲಿ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ನವೆಂಬರ್ 25 ಕೊನೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂ:ಸಂ: 0821-2422255 ನ್ನು ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳ ದಿನಾಚರಣೆ; ಸ್ಪರ್ಧೆಗಳಲ್ಲಿ ಭಾಗವಹಿಸಲು ಅರ್ಜಿ ಆಹ್ವಾನ

**ರಾಮನಗರ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಬಾಲಭವನ ಸೊಸೈಟಿ ವತಿಯಿಂದ 2024-25ನೇ ಸಾಲಿನಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ಜಿಲ್ಲೆಯಲ್ಲಿನ 6 ರಿಂದ 16 ವರ್ಷದ ಮಕ್ಕಳಿಗೆ ಕರ್ನಾಟಕ ಶಾಸ್ತ್ರೀಯ ಸಂಗೀತ ನೃತ್ಯ, ಹಿಂದುಸ್ಥಾನಿ ಸಂಗೀತ, ಸುಮಗ ಸಂಗೀತ, ವಾದ್ಯ ಸಂಗೀತ, ತಬಲ, ಬೃದಂಗ ಕೀಬೋರ್ಡ್, ಕೊಳಲು, ಡೊಳ್ಳುಮತ್ತು ನಗಾರಿ ಹಾಗೂ ವಿಜ್ಞಾನ ವಿಷಯದಲ್ಲಿ ಸೃಜನಾತ್ಮಕ ಆವಿಷ್ಕಾರ ಹಾಗೂ ಚಿತ್ರ ಕಲೆ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಈ ಸ್ಪರ್ಧೆಯಲ್ಲಿ ಭಾಗವಹಿಸಲು ಇಚ್ಚಿಸುವ ಮಕ್ಕಳು ಹಾಗೂ ವಿದ್ಯಾರ್ಥಿಗಳು ನ.12ರ ಸಂಜೆ 4 ಗಂಟೆಯೊಳಗೆ ರಾಮನಗರ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಚೇರಿಯಲ್ಲಿ ಅರ್ಜಿ ಪಡೆದು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಬಾಲಭವನ ಸಂಯೋಜಕರಾದ ದಿನೇಶ್ ಎನ್.ಎಸ್. ದೂ. ಸಂ: 080-29524996 ಅಥವಾ 9844796445 ಅನ್ನು ಸಂಪರ್ಕಿಸುವಂತೆ ಮಹಿಳಾ ಮತ್ತು ಮಕ್ಕಳ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಗತಿ ಆಂಗ್ಲ ಶಾಲೆಯ ರಾಜ್ಯ ಮಟ್ಟಕ್ಕೆ ಆಯ್ಕೆ

**ವಿಜಯಪುರ:** ಪಟ್ಟಣದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ನಡೆದ ಜಿಲ್ಲಾ ಮಟ್ಟದ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದಲ್ಲಿ ಪ್ರಗತಿ ಆಂಗ್ಲ ಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿ ಹಲವಾರು ಕ್ರೀಡೆಗಳಲ್ಲಿ ಪ್ರಶಸ್ತಿಗಳನ್ನು ಗಳಿಸಿ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಜಿಲ್ಲಾ ಮಟ್ಟದ ಅಥ್ಲೆಟಿಕ್ಸ್ ವಿಭಾಗದಲ್ಲಿ 1. ಪ್ರತಿಕ್ಷ .ಹೆಚ್.ಎಂ (7ನೇ ತರಗತಿ ಡಿ ವಿಭಾಗದ ವಿದ್ಯಾರ್ಥಿನಿ) ಎತ್ತರ ಜಿಗಿತ ಪ್ರಥಮ ಸ್ಥಾನ. 2. ವಿವೇಕ್. ಎ (ಏಳನೇ ತರಗತಿ ಎ ವಿಭಾಗದ ವಿದ್ಯಾರ್ಥಿ) 100 ಮೀಟರ್ ಓಟದಲ್ಲಿ ದ್ವಿತೀಯ ಸ್ಥಾನ. ಪ್ರಶಸ್ತಿಗಳನ್ನು ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಎಲ್ಲಾ ವಿದ್ಯಾರ್ಥಿಗಳನ್ನು ಸಂಸ್ಥೆಯ ಅಧ್ಯಕ್ಷರಾದ ಎಂ .ಸತೀಶ್ ಕುಮಾರ್ ರವರು , ವ್ಯವಸ್ಥಾಪಕ ನಿರ್ದೇಶಕರಾದ ಎಸ್ .ಕೃಪಾಶಂಕರ್ ರವರು , ಆಡಳಿತಾಧಿಕಾರಿಗಳಾದ ರಜತ ಪಟೇಲ್ ರವರು ಮತ್ತು ಮುಖ್ಯೋಪಾಧ್ಯಯರಾದ ಜೆ.ಎನ್. ಪ್ರಕಾಶ್ ರವರು ಹಾಗೂ ಎಲ್ಲಾ ಶಿಕ್ಷಕ ವೃಂದದವರು ಅಭಿನಂದಿಸಿದ್ದಾರೆ.



## ಯುಕೆ ದೇಶಕ್ಕೆ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರವಾಸ

**ಬೆಂಗಳೂರು:** ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಲಿಂಗರಾಜ ಗಾಂಧಿ ಅವರು ಬ್ರಿಟಿಷ್ ಕೌನ್ಸಿಲ್ ಪ್ರಾಯೋಜಿತ ಪ್ರತಿಭಾವಂತ ಸ್ನಾತಕ ವಿದ್ಯಾರ್ಥಿಗಳ ಎರಡು ವಾರದ ಶೈಕ್ಷಣಿಕ ಪ್ರವಾಸಕ್ಕೆ ಆಯ್ಕೆಯಾದ ಐದು ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಶುಭಕೋರಿದರು.

ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬ್ರಿಟಿಷ್ ಕೌನ್ಸಿಲ್ ಮತ್ತು ಆಯ್ದ ಸಾರ್ವಜನಿಕ ವಿಶ್ವವಿದ್ಯಾನಿಲಯಗಳು ಜೊತೆಯಾಗಿ ಪರಿಕಲ್ಪಿಸಿದ ಸ್ಕೌಟ್ ಕಾರ್ಯಕ್ರಮದ ಭಾಗವಾಗಿ ಮೂವತ್ತು ಪ್ರತಿಭಾವಂತ ಸ್ನಾತಕ ವಿದ್ಯಾರ್ಥಿಗಳಿಗೆ ಯು.ಕೆ ದೇಶದ ಉನ್ನತ ಶಿಕ್ಷಣ ಸಂಸ್ಥೆಗಳಿಗೆ ನವೆಂಬರ್ 9 ರಿಂದ 23 ರವರೆಗೆ ಭೇಟಿ ನೀಡುವ ಎರಡು ವಾರಗಳ ಶೈಕ್ಷಣಿಕ ಪ್ರವಾಸವನ್ನು ಮಾಡಲಿದ್ದಾರೆ. ಈ ಪ್ರವಾಸದಲ್ಲಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರಾಗಿ ಆರು ಜನ ಶಿಕ್ಷಕರನ್ನು ಹಾಗೂ ಉನ್ನತ ಶಿಕ್ಷಣ ಪರಿಷತ್ತಿನ ಇಬ್ಬರು ಅಧಿಕಾರಿಗಳು ಭಾಗವಹಿಸಲಿದ್ದಾರೆ. ಸ್ಕೌಟ್ ಕಾರ್ಯಕ್ರಮ ವಿಶ್ವವಿದ್ಯಾಲಯದ ಸ್ನಾತಕ ವಿದ್ಯಾರ್ಥಿಗಳಿಗೆ ಅಂತರಾಷ್ಟ್ರೀಯ ಶಿಕ್ಷಣ ಅದರಲ್ಲೂ ಯು.ಕೆ. ದೇಶದ ಉನ್ನತ ಶಿಕ್ಷಣದ ಅನುಭವವನ್ನು ನೀಡಲಿದ್ದು, ಇದರಿಂದಾಗಿ ವಿದ್ಯಾರ್ಥಿಗಳಿಗೆ ಪದವಿ ಶಿಕ್ಷಣದ ನಂತರದ ಶೈಕ್ಷಣಿಕ ಹಾಗೂ ವೃತ್ತಿಪರತೆ ಕುರಿತು ಅಗಾಧವಾದ ಮಾಹಿತಿ ದೊರೆಯಲಿದ್ದು, ಜೀವನವನ್ನು ರೂಪಿಸಿಕೊಳ್ಳುವಲ್ಲಿ ಅನುಕೂಲವಾಗಲಿದೆ. ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಈ ಕಾರ್ಯಕ್ರಮಕ್ಕಾಗಿ ಆಯ್ಕೆ ಆಗಿದ್ದು, ಅರ್ಹತ ಮಾನದಂಡಗಳನ್ನು ಅನುಸರಿಸಿ ಸಾಮಾಜಿಕ ನ್ಯಾಯದ ಆಧಾರದ ಮೇಲೆ ಮೂರನೇ ಸೆಮಿಸ್ಟರ್‌ನಲ್ಲಿ ವ್ಯಾಸಂಗ ಮಾಡುತ್ತಿರುವ ಮಲ್ಲೇಶ್ವರಂ ಮಹಿಳಾ ವಿಶ್ವವಿದ್ಯಾಲಯ ಕಾಲೇಜಿನ ಬಿಸಿಎ 3ನೇ ಸೆಮಿಸ್ಟರ್‌ನ ವಿದ್ಯಾರ್ಥಿನಿರಾದ ರಾಧಿಕಾ ಎಲ್.ಜಾಧವ್, ಅನುರಾಧ ಲಕ್ಷ್ಮಿ, ಬೆಂಗಳೂರು ನಗರ ವಿಶ್ವವಿದ್ಯಾಲಯದ ಕಾಮರ್ಸ್ ವಿಭಾಗದ ಬಿ.ಕಾಂ 3ನೇ ಸೆಮಿಸ್ಟರ್ ನ ಖುಲೂದ್ ಎಸ್ ಅಹಮದ್, ಕಂಪ್ಯೂಟರ್ ಅಪ್ಲಿಕೇಶನ್ ವಿಭಾಗದ ಬಿಸಿಎ 3ನೇ ಸೆಮಿಸ್ಟರ್‌ನ ನಿತಿನ್‌ಕುಮಾರ್ ಎನ್.ಕೆ. ಹಾಗೂ ಕಂಪ್ಯೂಟರ್ ಅಪ್ಲಿಕೇಶನ್ ವಿಭಾಗದ ಬಿಸಿಎ 3ನೇ ಸೆಮಿಸ್ಟರ್‌ನ ಹರ್ಷಿತಾ ಕೆ.ಎಂ ಐದು ಪ್ರತಿಭಾವಂತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ಪ್ರೊ. ಕೆ.ಆರ್. ಜಲಜ, ಡೀನರು ವಾಣಿಜ್ಯ ನಿಕಾಯ ಮತ್ತು ನೋಡಲ್ ಅಧಿಕಾರಿಗಳು ವಿದ್ಯಾರ್ಥಿಗಳ ಮಾರ್ಗದರ್ಶನಕ್ಕಾಗಿ ಜೊತೆಗೆ ಪ್ರಯಾಣ ಮಾಡಲಿದ್ದಾರೆ.

ಇದೊಂದು ವಿನೂತನವಾದ ಅವಕಾಶವಾಗಿದ್ದು ಸ್ನಾತಕ ವಿದ್ಯಾರ್ಥಿಗಳಿಗೆ ಯು.ಕೆ ದೇಶದ ಉನ್ನತ ಶಿಕ್ಷಣದ ಪರಿಚಯದ ಜೊತೆಗೆ ಅಲ್ಲಿಯ ಕಲಿಕಾ ವಾತಾವರಣದ ಅನುಭವವಾಗಲಿದೆ. ಇದರಿಂದಾಗಿ ವಿದ್ಯಾರ್ಥಿಗಳಿಗೆ ತಮ್ಮ ಕೌಶಲ್ಯ ಅಭಿವೃದ್ಧಿಗಾಗಿ ಮತ್ತು ಶೈಕ್ಷಣಿಕ ಉನ್ನತಿಗಾಗಿ ಅನುಕೂಲವಾಗಲಿದೆ.

ಈ ಕಾರ್ಯಕ್ರಮದಲ್ಲಿ ವಿಶ್ವವಿದ್ಯಾನಿಲಯದ ಕುಲಸಚಿವರು, ಕುಲಸಚಿವರು (ಮೌಲ್ಯಮಾಪನ), ವಿವಿಧ ವಿಭಾಗಗಳ ಡೀನರು ಮತ್ತು ಪ್ರಾಧ್ಯಾಪಕರು ಉಪಸ್ಥಿತರಿದ್ದರು.

## ಕಾರಿನ ಮೇಲೆ ಬಸ್ ಪಲ್ಟಿ : ಹತ್ತಕ್ಕೂ ಹೆಚ್ಚು ಮಂದಿಗೆ ಗಾಯ

**ಚಾಮರಾಜನಗರ :** ಖಾಸಗಿ ಬಸ್ ವೊಂದು ಕಾರಿನ ಮೇಲೆ ಪಲ್ಟಿ ಹೊಡೆದ ಪರಿಣಾಮ ಹತ್ತಕ್ಕೂ ಹೆಚ್ಚು ಪ್ರಯಾಣಿಕರಿಗೆ ತೀವ್ರ ಸ್ವರೂಪದ ಗಾಯವಾಗಿರುವ ಘಟನೆ ಕರ್ನಾಟಕ ತಮಿಳುನಾಡು ಮುಖ್ಯ ರಸ್ತೆಯಲ್ಲಿ ಶುಕ್ರವಾರ ಸಂಭವಿಸಿದೆ.

ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಪಿ ಜಿ ಪಾಳ್ಯ ಸಮೀಪ ಹೊಸ ದೊಡ್ಡಿ ಗ್ರಾಮದ ರಸ್ತೆಯಲ್ಲಿ ಖಾಸಗಿ ಬಸ್ ವೊಂದು ಕಾರಿನ ಮೇಲೆ ಪಲ್ಟಿಯಾಗಿ 10ಕ್ಕೂ ಹೆಚ್ಚು ಮಂದಿಗೆ ಗಾಯವಾಗಿದ್ದು, ಕಾರು ಇಲ್ಲದಿದ್ದರೆ ಬಸ್ ಪ್ರಪಾತಕ್ಕೆ ಉರುಳುವ ಸಾಧ್ಯತೆ ಇದ್ದು, ಹೆಚ್ಚಿನ ದುರಂತ ಸಂಭವಿಸುತ್ತಿತ್ತು.

ಹನೂರು ತಾಲೂಕಿನ ಒಡೆಯರಪಾಳ್ಯ ದಿಂದ ಕೊಳ್ಳೇಗಾಲದ ಕಡೆಗೆ ತೆರಳುತ್ತಿದ್ದ ಖಾಸಗಿ ಬಸ್ ಹಾಗೂ ರಾಮಾಪುರ ದಿಂದ ಬಣ್ಣಾರಿ ಕಡೆಗೆ ತೆರಳುತ್ತಿದ್ದ ಕಾರಿನ ನಡುವೆ ಈ ಅವಘಡ ಸಂಭವಹಿಸಿದೆ. ಬಸ್ ಗೆ ಪಲ್ಟಿಯಾಗುತ್ತಿದ್ದಂತೆ ಕಾರು ನುಗ್ಗಿದ ಪರಿಣಾಮ ಎರಡು ವಾಹವೂ ಜಖಂ ಆಗಿದೆ ಗಾಯಾಳುಗಳನ್ನು ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ಸರ್ಕಾರಿ ಆಸ್ಪತ್ರೆಗೆ ಚಿಕಿತ್ಸೆಗೆ ದಾಖಲು ಮಾಡಲಾಗಿದೆ.



### ಇನ್ನರ್ ವೀಲ್ ಕ್ಲಬ್‌ನ ಜಿಲ್ಲಾ ಗೌರ್ನರ್ ಶ್ರೀಮತಿ ಹೇಳಿಕೆ

# ಸಮಾಜ ಸೇವೆಯಲ್ಲಿ ಇನ್ನಲ್ ವೀಲ್ ಮುಂಚೂಣಿ

**ವಿಜಯಪುರ:** ಇನ್ನರ್ ವೀಲ್ ಕ್ಲಬ್‌ನ ಕಾರ್ಯಕ್ರಮಗಳು ಜನಮಾನಸದಲ್ಲಿ ಚಿರಪರಿಚಿತವಾಗಿದ್ದು ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರೆಯುತ್ತಿದೆ. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಮೂಲ ಸೌಲಭ್ಯಗಳ ಕೊರತೆಯಾಗಬಾರದು ಎಂಬ ಉದ್ದೇಶದಿಂದ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದೇವೆ ಎಂದು ಇನ್ನರ್ ವೀಲ್ ಕ್ಲಬ್‌ನ ಜಿಲ್ಲಾ ಗೌರ್ನರ್ ಶ್ರೀಮತಿರವರು ತಿಳಿಸಿದರು.

ಪಟ್ಟಣ ಸಮೀಪದ ಬೈರಾಪುರ ಗ್ರಾಮದ ಸರ್ಕಾರಿ ಶಾಲಾ ಆವರಣದಲ್ಲಿ ವಿಜಯಪುರ ಇನ್ನರ್ ವೀಲ್ ಕ್ಲಬ್ ವತಿಯಿಂದ ನೂತನವಾಗಿ ನಿರ್ಮಿಸಿರುವ ವೇದಿಕೆ ಮತ್ತು ಅದಕ್ಕೆ ಸುಸಜ್ಜಿತ ಮೇಲ್ಚಾವಣಿಯನ್ನು ಲೋಕಾರ್ಪಣೆ ಮಾಡಿ ಮಾತನಾಡಿ, ಕ್ಲಬ್ ಸದಸ್ಯರು ಸ್ಥಳೀಯವಾಗಿ ಮತ್ತು ಅಂತರಾಷ್ಟ್ರೀಯವಾಗಿ ಮಾನವೀಯ ಸೇವೆಗಾಗಿ ಅನೇಕ ಅವಕಾಶಗಳನ್ನು ಹೊಂದಿದ್ದಾರೆ. ಸೇವಾ ಕಾರ್ಯಕ್ರಮಗಳು ಆರೋಗ್ಯ, ರಕ್ಷಣೆ, ಹಸಿವು, ಬಡತನ, ಅನಕ್ಷರತೆ ಮತ್ತು ಪರಿಸರದಂತಹ ಕಾಳಜಿಗಳನ್ನು ತಿಳಿಸುತ್ತವೆ. ಇನ್ನರ್ ವೀಲ್ ಕ್ಲಬ್‌ನ ಸದಸ್ಯರು ಸಮುದಾಯಕ್ಕೆ ಹಿಂತಿರುಗಿಸುವುದರಿಂದ ಬರುವ ಸಾರ್ಥಕತೆಯನ್ನು ಅನುಭವಿಸುತ್ತಾರೆ ಎಂದು ತಿಳಿಸಿದರು.

ವಿಜಯಪುರ ಇನ್ನರ್ ವೀಲ್ ಅಧ್ಯಕ್ಷೆ ಪ್ರೇಮ ನಾಗರಾಜಪ್ಪ ಮಾತನಾಡಿ, ನಾವು ಬದುಕುವುದರ ಜತೆಗೆ ಸಮಾಜಕ್ಕಾಗಿ ನಮ್ಮನ್ನು ನಾವು ತೊಡಗಿಸಿಕೊಳ್ಳಲು ಇನ್ನರ್ ವೀಲ್ ಕ್ಲಬ್ ಪರಿಣಾಮಕಾರಿಯಾದ ವೇದಿಕೆ. ವಿಶ್ವದರ್ಜೆಯ ಗೌರವವನ್ನು ಹೊಂದಿರುವ ಇನ್ನರ್ ವೀಲ್ ಕ್ಲಬ್‌ನ ಸೇವಾಕಾರ್ಯಗಳೇ ಸಂಸ್ಥೆಯ



ಏಳ್ಗೆಗೆ ಬಹು ಅಮೂಲ್ಯ ಕಾರಣವಾಗಿದೆ. ಬೈರಾಪುರ ಸರ್ಕಾರಿ ಶಾಲೆಯ ಶಿಕ್ಷಕರು ವೇದಿಕೆ ನಿರ್ಮಾಣಕ್ಕೆ ಮನವಿ ಮಾಡಿದ್ದರು ಆದರೆ ನಾವು ವೇದಿಕೆಗೆ ಮೇಲ್ಚಾವಣಿಯನ್ನು ಅಳವಡಿಸಿ ಸುಸಜ್ಜಿತವಾಗಿ ಮಾಡಿಸಿದ್ದೇವೆ, ಹಾಗೂ ಸಂಘ ಸಂಸ್ಥೆಗಳು ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳತ್ತ ಗಮನ ಹರಿಸಿ ಅಲ್ಲಿನ ಅಗತ್ಯತೆಗಳನ್ನು ಪೂರೈಸುವಲ್ಲಿ ಮನಸ್ಸು ಮಾಡಬೇಕೆಂದರು.

ಜಿಲ್ಲಾ ಉಪಾಧ್ಯಕ್ಷೆ ಜನನಿಗೌಡ, ಪಿ.ಡಿ.ಸಿ ಆಶಾ ಶೈಲೇಂದ್ರ , ವಿಜಯಪುರ ಇನ್ನರ್ ವೀಲ್ ಕಾರ್ಯದರ್ಶಿ ಮಾಲತಿ ಆನಂದ್, ಖಜಾಂಚಿ ನಮಿತ ಸುಪ್ರೀತ್, ಐ.ಎಸ್.ಓ ಪ್ರೀತಿ ಮಹೇಶ್, ಎಡಿಟರ್ ಗಾಯತ್ರಿ ಮಂಜುನಾಥ್, ಸದಸ್ಯರಾದ ವೀಣಾ ನಟಶೇಖರ್, ಶಾಲಾ ಮುಖ್ಯ ಶಿಕ್ಷಕರಾದ ಭಾಗ್ಯ ಇನ್ನು ಹಲವು ಸದಸ್ಯರು ಶಾಲಾ ಶಿಕ್ಷಕರು ಮಕ್ಕಳು ಹಾಜರಿದ್ದರು.

## ನ. 12ರಂದು ಮರಿಯಾಲದಲ್ಲಿ ರಾಷ್ಟ್ರೀಯ ದತ್ತು ಮಾಸಾಚರಣೆ ಕುರಿತು ಅರಿವು ಕಾರ್ಯಕ್ರಮ

**ಚಾಮರಾಜನಗರ:** ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಹಯೋಗದಲ್ಲಿ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರಿಗೆ ರಾಷ್ಟ್ರೀಯ ದತ್ತು ಮಾಸಾಚರಣೆ ಕುರಿತು ಅರಿವು ಕಾರ್ಯಕ್ರಮವನ್ನು ನವೆಂಬರ್ 12ರಂದು ಬೆಳಿಗ್ಗೆ 10 ಗಂಟೆಗೆ ಚಾಮರಾಜನಗರ ತಾಲೂಕಿನ ಮರಿಯಾಲ ಗ್ರಾಮದಲ್ಲಿರುವ ಬಸವರಾಜೇಂದ್ರ ನರ್ಸಿಂಗ್ ಕಾಲೇಜಿನಲ್ಲಿ ಏರ್ಪಡಿಸಲಾಗಿದೆ. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಈಶ್ವರ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಮರಿಯಾಲ ಬಸವರಾಜೇಂದ್ರ ಆಸ್ಪತ್ರೆಯ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಜನರಲ್ ಫಿಸಿಶಿಯನ್ ಡಾ. ಎಂ. ಬಸವರಾಜೇಂದ್ರ ಅವರು ಅಧ್ಯಕ್ಷತೆ ವಹಿಸುವರು. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಎನ್. ಚಲುವರಾಜ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಎ. ರಮೇಶ, ಬಸವರಾಜೇಂದ್ರ ಆಸ್ಪತ್ರೆಯ ಪ್ರಸೂತಿ ಹಾಗೂ ಸ್ತ್ರೀರೋಗ ತಜ್ಞರಾದ ಡಾ. ಶ್ವೇತಾ ಶಶಿಧರ್, ಬಸವರಾಜೇಂದ್ರ ಶುಶ್ರೂಷ ಕಾಲೇಜಿನ ಪ್ರಭಾರ ಪ್ರಾಂಶುಪಾಲರಾದ ಟಿ. ನದೀಯಾ, ಶುಶ್ರೂಷ ಶಾಲೆಯ ಪ್ರಾಂಶುಪಾಲರಾದ ಎನ್. ಮಂಜುನಾಥ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಸಂಪನ್ಮೂಲ ವ್ಯಕ್ತಿಗಳಾಗಿ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಸರಸ್ವತಿ ಅವರು ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಸಂಜೆ ಟಿಪ್ಸ್

## ಇಂಟರ್‌ನ್ಯಾಷನಲ್ ಫೈನಾನ್ಸ್ ಕಾರ್ಪೋರೇಷನ್‌ನಿಂದ 25 ಮಿಲಿಯ ಡಾಲರ್ ಬಂಡವಾಳ ಸಂಗ್ರಹಿಸಿದ ಪ್ರೊಫೆಕ್ಟಸ್ ಕ್ಯಾಪಿಟಲ್

ಸಣ್ಣ, ಅತಿಸಣ್ಣ ಮತ್ತು ಮಧ್ಯಮ ಪ್ರಮಾಣದ ಉದ್ಯಮಗಳಿಗಾಗಿ ಇರುವ ಬ್ಯಾಂಕಿಂಗ್ಯೇತರ ಹಣಕಾಸು ಕಂಪನಿಯಾದ ಪ್ರೊಫೆಕ್ಟಸ್ ಕ್ಯಾಪಿಟಲ್ ಪ್ರೈ ಲಿ ವಿಶ್ವ ಬ್ಯಾಂಕ್ ಸಮೂಹದ ಸದಸ್ಯತ್ವ ಹೊಂದಿರುವ ಇಂಟರ್ನ್ಯಾಷನಲ್ ಫೈನಾನ್ಸ್ ಕಾರ್ಪೊರೇಷನ್ಗೆ ನಾನ್ ಕನ್ವರ್ಟಿಬಲ್ ಡಿಬೆಂಚರ್‌ಗಳನ್ನು ಒದಗಿಸುವ ಮೂಲಕ 25 ಮಿಲಿಯನ್ ಡಾಲರ್ ಸಂಗ್ರಹಿಸಿದೆ.ಇದು ಐಎಫ್ಸಿ ಭಾರತದಲ್ಲಿ ಎಂಎಸ್‌ಎಂಇಗಳಿಗಾಗಿರುವ ಸಂಸ್ಥೆಯೊಂದಕ್ಕೆ ಮಾಡುತ್ತಿರುವ ಮೊದಲ ಹೂಡಿಕೆಯಾಗಿದೆ. ಸಂಗ್ರಹವಾದ ಬಂಡವಾಳವನ್ನು ಗ್ರೀನ್ ಅಸೆಟ್ಸಳಿಗಾಗಿ ಬಳಸುತ್ತಿರುವುದರಿಂದ ಈ ಎನ್ಸಿಡಿಗಳನ್ನು ಗ್ರೀನ್ ಬಾಂಡ್ಸಳೆಂದು ಕರೆಯಲಾಘಿದೆ. ಪ್ರೊಫೆಕ್ಟಸ್ ಕ್ಯಾಪಿಟಲ್ ಇಂಟರ್ನ್ಯಾಷನಲ್ ಕ್ಯಾಪಿಟಲ್ ಮಾರ್ಕೆಟ್ ಅಸೋಸಿಯೇಷನ್ನ ಗ್ರೀನ್ ಬಾಂಡ್ ನೀತಿಗಳಿಗೆ ಅನುಗುಣವಾಗಿ ಗ್ರೀನ್ ಬಾಂಡ್ಗಳನ್ನು ಅಭಿವೃದ್ಧಿಪಡಿಸಿತ್ತು. ಐಎಫ್ಸಿಯ ಬಂಡವಾಳ ನೆರವು ಎಂಎಸ್‌ಎಂಇಗಳಿಗೆ ನೆರವು ನೀಡುವ ಪ್ರೊಫೆಕ್ಟಸ್ ಕ್ಯಾಪಿಟಲ್ನ ಪ್ರಯತ್ನಗಳಿಗೆ ಬೆಂಗಾವಲಾಗಿದ್ದು, ಭಾರತದ ಹವಾಮಾನ ಗುರಿ ಸಾಧನೆಗೆ ಪೂರಕವಾಗಿದೆ.ಐಎಫ್ಸಿಯ ಹೂಡಿಕೆಯ ಜೊತೆಗೆ ಯೂರೋಪಿಯನ್ ಒಕ್ಕೂಟದ ಪ್ರಾದೇಶಿಕ ಅಸ್ಸಲರೇಟಿಂಗ್ ಕ್ಲೈಮೇಟ್ ಸ್ಮಾರ್ಟ್ ಅಂಡ್ ಇನ್ಕ್ಲೂಸಿವ್ ಇನ್ಫ್ರಾಸ್ಟ್ರಕ್ಚರ್ ಇನ್ ಸೌತ್ ಏಷ್ಯ (ಎಸಿಎಸ್‌ಐಐಎಸ್) ಕಾರ್ಯಕ್ರಮದ ಸಲಹೆಯನ್ನೂ ಪ್ರೊಫೆಕ್ಟಸ್ ಕ್ಯಾಪಿಟಲ್ ಪಡೆದುಕೊಳ್ಳುತ್ತಿದೆ. ಇದರಡಿ ಐಎಫ್ಸಿ, ಭಾರತದ ಎಂಎಸ್‌ಎಂಇ ಕಂಪೆನಿಗಳ ಶಕ್ತಿ ಕ್ಷಮತೆಯನ್ನು ಗುರುತಿಸಿ ಅವುಗಳ ಆಪರೇಷನ್ ತಂಡ ಮತ್ತು ಮ್ಯಾನೇಜ್ಮೆಂಟ್ನ ಸಾಮರ್ಥ್ಯ ವೃದ್ಧಿಗೆ ಒತ್ತು ನೀಡಲಿದೆ. ಜೊತೆಗೆ ಈ ಕಂಪೆನಿಗಳ ಪ್ರಗತಿ ಕಾರ್ಯತಂತ್ರ ರೂಪಿಸಲೂ ನೆರವಾಗಿ ಹಸಿರುಮನೆ ಅನಿಲ ಮಾಲಿನ್ಯವನ್ನು ಕಡಿಮೆ ಮಾಡಲಿದೆ. ಪ್ರೊಫೆಕ್ಟಸ್ ಕ್ಯಾಪಿಟಲ್ನ ಸ್ಥಾಪಕ ಮತ್ತು ಸಿಇಒ ಕೆ.ವಿ. ಶ್ರೀನಿವಾಸನ್ ಮಾತನಾಡಿ ''ವಿಶ್ವ ಬ್ಯಾಂಕ್ ಸಮೂಹದ ಸದಸ್ಯತ್ವ ಹೊಂದಿರುವ ಐಎಫ್ಸಿ ಜೊತೆಗೆ ಪಾಲುದಾರಿಕೆ ಪ್ರಕಟಿಸಲು ಸಂತಸವಾಗುತ್ತಿದೆ. ಇದು ನಮಗೆ ಸಿಕ್ಕ ಗೌರವ ಎಂದರು.

# ಹೆಸರು ಬೇಳೆ ಹಲ್ವಾ

## ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಹಳದಿ ಬಣ್ಣದ ಹೆಸರುಬೇಳೆ - 1 ಕಪ್, ನೀರು-1/2 ಕಪ್, ತುಪ್ಪ- 3/4 ಕಪ್, ಸಕ್ಕರೆ -1 ಕಪ್, ಏಲಕ್ಕಿ ಪುಡಿ - ಒಂದು ಚಿಟಕಿ, ಹೆಚ್ಚಿದ ಬಾದಾಮಿ 3-4 (ಅಲಂಕಾರಕ್ಕೆ), ಕೇಸರಿ ಎಳೆ 3-4 (ಅಲಂಕಾರಕ್ಕೆ)

### ಮಾಡುವ ವಿಧಾನ

ಒಂದು ಪಾತ್ರೆಯಲ್ಲಿ ಹೆಸರು ಬೇಳೆಯನ್ನು ಹಾಕಿ 3-4 ಗಂಟೆಗಳ ಕಾಲ ನೀರಿನಲ್ಲಿ ನೆನೆಯಲು ಬಿಡಿ. ನೆನೆದ ಬೇಳೆಯನ್ನು ಮಿಕ್ಸರ್ ಗೆ ಹಾಕಿ ಜೊತೆಗೆ ಒಂದು ಚಮಚ ನೀರನ್ನು ಬೆರೆಸಿ ನುಣುಪಾಗಿ ರುಬ್ಬಿಕೊಳ್ಳಬೇಕು. ನಂತರ ಒಂದು ಪಾತ್ರೆಯಲ್ಲಿ ರುಬ್ಬಿಕೊಂಡ ಪೇಸ್ಟ್ ಮತ್ತು 1/2 ಕಪ್ ತುಪ್ಪವನ್ನು ಹಾಕಿ ಸಾಧಾರಣ ಉರಿಯಲ್ಲಿ ಬೇಯಿಸಬೇಕು. ಮಿಶ್ರಣ ಗಂಟು-ಗಂಟಾಗದಂತೆ ನಿರಂತರವಾಗಿ ಕೈ ಆಡಿಸುತ್ತಲೇ ಇರಬೇಕು. ಮಿಶ್ರಣ ಹೊಂಬಣ್ಣಕ್ಕೆ ತಿರುಗಿದ ನಂತರ 1/4 ಕಪ್ನಷ್ಟು ತುಪ್ಪವನ್ನು ಹಾಕಿ ಕೈ ಆಡಿಸುತ್ತ ಇರಿ. ತುಪ್ಪ ಮಿಶ್ರಣದಿಂದ ಹೊರಬರಲು ಪ್ರಾರಂಭಿಸಿದಾಗ ಉರಿಯನ್ನು ಕಡಿಮೆ ಮಾಡಿ ಬೇಯಿಸುವುದನ್ನು ಮುಂದುವರಿಸಬೇಕು. ಈ ಸಮಯದಲ್ಲೇ ಒಂದು ಪಾತ್ರೆಯಲ್ಲಿ ಸಕ್ಕರೆಯನ್ನು ಹಾಕಿ, ಅದು ಮುಳುಗುವಷ್ಟು ನೀರನ್ನು ಹಾಕಿ ಪಾಕ ತಯಾರಿಸಿಕೊಳ್ಳಬೇಕು. ತಯಾರಾದ ಪಾಕವನ್ನು ದಾಲ್ ಮಿಶ್ರಣಕ್ಕೆ ಸೇರಿಸಿ ಚೆನ್ನಾಗಿ ಬೆರೆತು ಕೊಳ್ಳುವಂತೆ ಕೈ ಆಡಿಸಿ. ಸ್ವಲ್ಪ ಸಮಯದಲ್ಲೇ ಹಲ್ವಾ ಪಾತ್ರೆಯ ಬದಿಯಲ್ಲಿ ಬಿಟ್ಟುಕೊಳ್ಳಲು ಪ್ರಾರಂಭವಾಗುತ್ತದೆ. ಆಗ ಏಲಕ್ಕಿ ಪುಡಿಯನ್ನು ಹಾಕಿ ಚೆನ್ನಾಗಿ ಕಲಕಿ. ನಂತರ ಹೆಚ್ಚಿಕೊಂಡ ಬಾದಾಮಿ ಚೂರು ಹಾಗೂ ಕೇಸರಿ ಎಳೆಯಿಂದ ಅಲಂಕಾರಗೊಳಿಸಿ ಸವಿಯಲು ನೀಡಿ.

# ಆಯಾಸ ದೂರ ಮಾಡುವ ಅನಾನಸು



## ಹೆಲ್ತ್ ಟಿಪ್ಸ್

ಅನಾನಸ್ ಹಣ್ಣು ಕೇವಲ ಬಾಯಿಗೆ ರುಚಿ ಕೊಡುವುದು ಮಾತ್ರವಲ್ಲ, ಮೆದುಳಿಗೂ ಉಪಯುಕ್ತವಾದುದು. ಮೆದುಳಿಗೆ ಅಗತ್ಯವಾದ ಮ್ಯಾಂಗನೀಸ್, ಫ್ರೋಟೋಸ್ ಹಾಗೂ ಗ್ಲುಕೋಸ್ ನಂತಹ ನೈಸರ್ಗಿಕ ಸಕ್ಕರೆ ಅಂಶಗಳನ್ನು ಅನಾನಸ್ ಒಳಗೊಂಡಿದೆ.

ಇದನ್ನು ಹಸಿಯಾಗಿಯೂ ಸೇವಿಸಬಹುದು, ಬೇರೆ ಹಣ್ಣುಗಳೊಂದಿಗೆ ಬೆರೆಸಿಯೂ ತಿನ್ನಬಹುದು.

ರಸವನ್ನು ಕುಡಿಯಬಹುದು. ಈ ಅನಾನಸ್ ಹಣ್ಣನ್ನು ಹೇಗೆ ಸೇವಿಸಿದರೂ ಹಣ್ಣಿನಲ್ಲಿರುವ ಪೌಷ್ಟಿಕಾಂಶಗಳು ಶರೀರಕ್ಕೆ ಸೇರುತ್ತವೆ.

ಊಟದ ನಂತರ ಅನಾನಸ್ ಹಣ್ಣಿಗೆ ಸ್ವಲ್ಪ ಉಪ್ಪು, ಕರಿಮೆಣಸಿನ ಪುಡಿ ಉದುರಿಸಿ ಸೇವಿಸುವುದರಿಂದ ಅಜೀರ್ಣ ಸಮಸ್ಯೆಯಿಂದ ಮುಕ್ತಿ ಪಡೆಯಬಹುದು.

ಕಾಳುಮೆಣಸಿನ ಪುಡಿ ಹಚ್ಚಿ ಅನಾನಸ್ ಸೇವಿಸುವುದರಿಂದ ಆಮ್ಲ ಪಿತ್ತ ನಿವಾರಣೆಯಾಗುತ್ತದೆ.

ಅನಾನಸ್ ಹಣ್ಣಿನ ನಿಯಮಿತ ಸೇವನೆಯು ಗಂಟಲು ಬೇನೆಯನ್ನು ದೂರವಿಡುತ್ತದೆ.

ಪಿತ್ತಕೋಶ ಊತ, ಮೂತ್ರ ಕಟ್ಟುವಿಕೆ, ಕಣ್ಣಿನ ಸುತ್ತ ಊದುವಿಕೆ ಮುಂತಾದ ಸಮಸ್ಯೆಗಳನ್ನು ಈ ಅನಾನಸ್ ಹಣ್ಣನ್ನು ಸೇವಿಸುವುದರಿಂದ ನಿವಾರಿಸಬಹುದು.

ಅನಾನಸ್ ತಿಂದು ಹಾಲು ಕುಡಿದರೆ ಬೇರಾವ ಅಡ್ಡ ಪರಿಣಾಮಗಳೂ ಉಂಟಾಗುವುದಿಲ್ಲ. ದಿನವಿಡೀ ಚೈತನ್ಯದಿಂದ ಇರುವಂತೆ ನೋಡಿಕೊಳ್ಳುತ್ತದೆ.

# ಒಡೆದ ಹಿಮ್ಮಡಿ? ಮನೆಮದ್ದು?

## ಬ್ಯೂಟಿ ಟಿಪ್ಸ್

ಮುಖ ಹಾಗೂ ಕೈಗಳಂತೆಯೇ ಕಾಲಿಗೂ ಕೂಡ ಆರೈಕೆಯ ಅಗತ್ಯವಿರುತ್ತದೆ. ಕಾಲು ಒಡೆಯುವ ಸಮಸ್ಯೆ ಇದ್ದರೆ ಅದರ ನೋವು ಒಂದೆಡೆಯಾದರೆ ನಿಮಗಿಷ್ಟದ ಚಪ್ಪಲಿಗಳನ್ನ ಹಾಕಲು ಸಾಧ್ಯವಿಲ್ಲ ಅನ್ನೋ ನೋವು ಮತ್ತೊಂದಡೆ. ಈ ಸಮಸ್ಯೆಯಿಂದ ಪಾರಾಗಬೇಕು ಅಂದರೆ ನೀವು ಈ ಮನೆಮದ್ದುಗಳನ್ನ ಟ್ರೈ ಮಾಡಬಹುದು. ಮೃದುವಾದ ಹಿಮ್ಮಡಿ ಹೊಂದಬೇಕು ಅನ್ನೋ ಆಸೆ ಯಾರಿಗ್ ತಾನೇ ಇರೋದಿಲ್ಲ ಹೇಳಿ. ಇದಕ್ಕಾಗಿ ನೀವು ಒಂದು ಟಬ್ನಲ್ಲಿ ಬೆಚ್ಚನೆಯ ನೀರಿಗೆ ನಿಮ್ಮಿಷ್ಟದ ಶಾಂಪೂ ಹಾಕಿ ನೊರೆ ತರಿಸಿಕೊಳ್ಳಿ. ಇದಕ್ಕೆ 100 ಎಂಎಲ್ ಸಾಸಿವೆ ಎಣ್ಣೆ, 500 ಮಿ.ಲೀ ದಪ್ಪನೆಯ ಹಾಲು, ಒಂದು ಮುಷ್ಟಿ ಗುಲಾಬಿ ಹೂವಿನ ದಳ, ಕಹಿ ಬೇವಿನ ಎಲೆ ಹಾಗೂ 5 ಹನಿ ಶ್ರೀಗಂಧದ ಎಣ್ಣೆ ಹಾಕಿ. ಈ ಎಲ್ಲವನ್ನ ಚೆನ್ನಾಗಿ ಮಿಶ್ರಣ ಮಾಡಿ ನಿಮ್ಮ ಕಾಲನ್ನ 20 ನಿಮಿಷಗಳ ಕಾಲ ಇಟ್ಟುಕೊಳ್ಳಿ. ಈ ರೀತಿ ಮಾಡೋದ್ರಿಂದ ಕಾಲಿನಲ್ಲಿರುವ ಎಲ್ಲಾ ಡೆಡ್ ಸ್ಕಿನ್ಗಳು ನಾಶವಾಗಲಿದೆ. ಇದನ್ನ ಬಿಟ್ಟರೆ ನೀವು ಪ್ರತಿದಿನ ಒಂದು 3 ಚಮಚ ಸಕ್ಕರೆಯಲ್ಲಿ 1 ನಿಂಬೆ ಹೋಳನ್ನ ಅಂಟಿಸಿ ಇದರಲ್ಲಿಂದ ಕಾಲನ್ನ ಸ್ಕಬ್ ಮಾಡಿ, ಬಳಿಕ ಸ್ವಚ್ಛ ನೀರಿನಲ್ಲಿ ಕಾಲನ್ನ ತೊಳೆದುಕೊಳ್ಳಿ. ಇದರಿಂದ ನಿಮ್ಮ ಪಾದ ಫಳ ಫಳ ಅಂತಾ ಹೊಳೆಯೋದು ಪಕ್ಕಾ. ಅಲೋವೇರಾ ಜೆಲ್ನಲ್ಲಿ ಆಂಟಿ ಬ್ಯಾಕ್ಟೀರಿಯಾ ಅಂಶವಿದೆ. ಹೀಗಾಗಿ ನೀವು ರಾತ್ರಿ ಮಲಗುವ ಮುನ್ನ ಒಡೆದ ಕಾಲಿಗೆ ಆಲೋವೇರಾ ಜೆಲ್ಲನ್ನ ಚೆನ್ನಾಗಿ ಲೇಪಿಸಿ ಮಲಗಿ. ಈ ರೀತಿ ಮಾಡುವ ಮುನ್ನ ಕಾಲನ್ನ ಸ್ವಚ್ಛ ನೀರಿನಿಂದ ತೊಳೆದು ಶುಭ್ರ ಟವೆಲ್ನಿಂದ ಪಾದಗಳನ್ನ ಒರೆಸಿಕೊಳ್ಳೋದನ್ನ ಮರೆಯುವಂತಿಲ್ಲ.



# ಪ್ರಭಾಸ್ ಜತೆಗೆ ಹೊಂಬಾಳೆ ಫಿಲಂಸ್ ಮೂರು ಸಿನಿಮಾ ಘೋಷಣೆ

ಹೊಂಬಾಳೆ ಫಿಲಂಸ್ನ ವಿಜಯ್ ಕಿರಗಂದೂರು ಇದೀಗ ತೆಲುಗು, ತಮಿಳು, ಮಲಯಾಳಂ ಸೇರಿದಂತೆ ಬೇರೆ ಭಾಷೆಗಳಿಗೂ ಕಾಲಿಟ್ಟಿದೆ. ಈಗಾಗಲೇ 'ಕೆಜಿಎಫ್', 'ಸಲಾರ್' ಮತ್ತು 'ಕಾಂತಾರ'ದಂತಹ ಪ್ಯಾನ್ ಇಂಡಿಯಾ ಚಿತ್ರಗಳನ್ನು ನಿರ್ಮಿಸಿದೆ.

ಇದೀಗ ತೆಲುಗು ಮೂಲದ ಪ್ಯಾನ್ ಇಂಡಿಯಾ ನಟ ಪ್ರಭಾಸ್ ಅಭಿನಯದಲ್ಲಿ ಮೂರು ಚಿತ್ರಗಳನ್ನು ಘೋಷಿಸಿದೆ.

ಹೊಂಬಾಳೆ ಫಿಲಂಸ್ ನಿರ್ಮಾಣದ 'ಬಘೀರ' ಕಳೆದ ವಾರವಷ್ಟೇ ಬಿಡುಗಡೆಯಾಗಿ ಯಶಸ್ವಿ ಪ್ರದರ್ಶನ ಕಾಣುತ್ತಿದೆ. ಇನ್ನೊಂದು ಕಡೆ 'ಸಲಾರ್ - ಅಧ್ಯಾಯ 1'ರ ಚಿತ್ರೀಕರಣ ನಡೆಯುತ್ತಿದ್ದು, ಮುಂದಿನ ವರ್ಷ ಆಗಸ್ಟ್ನಲ್ಲಿ ಬಿಡುಗಡೆಯಾಗುವ ಸಾಧ್ಯತೆ ಇದೆ. ಇದರ ಜೊತೆಗೆ ಪ್ರಭಾಸ್ ಅಭಿನಯದ 'ಸಲಾರ್ 2' ಸೇರಿದಂತೆ ಇನ್ನೂ ಎರಡು ಚಿತ್ರಗಳನ್ನು ನಿರ್ಮಿಸುವುದಾಗಿ ಘೋಷಿಸಿದೆ.

'ಸಲಾರ್' ಚಿತ್ರವು ಕಳೆದ ವರ್ಷ ಬಿಡುಗಡೆಯಾಗಿತ್ತು. ಆ ಸಂದರ್ಭದಲ್ಲೇ ಚಿತ್ರದ ಇನ್ನೊಂದು ಭಾಗ ಬರುತ್ತದೆ ಎಂದು ಘೋಷಣೆಯಾಗಿತ್ತು. ಅದರಂತೆ 'ಸಲಾರ್ 2' ಚಿತ್ರದ ಪ್ರೀ-ಪ್ರೊಡಕ್ಷನ್ ಕೆಲಸಗಳು ನಡೆಯುತ್ತಿವೆ. ಇದರ ಜೊತೆಗೆ ಪ್ರಭಾಸ್ ಜೊತೆಗೆ ಇನ್ನೂ ಎರಡು ಸಿನಿಮಾ ಮಾಡಲು ಹೊಂಬಾಳೆ ನಿರ್ಧರಿಸಿದೆ. ಈ ಮೂರು ಚಿತ್ರಗಳು ದೊಡ್ಡ ಬಜೆಟ್ನಲ್ಲಿ, ದೊಡ್ಡ ಕ್ಯಾನ್ವಾಸ್ನಲ್ಲಿ, ಪ್ಯಾನ್ ಇಂಡಿಯಾ ಚಿತ್ರಗಳಾಗಿ ನಿರ್ಮಾಣವಾಗಲಿವೆ.

ಪ್ರಭಾಸ್ ಸದ್ಯ ಭಾರತೀಯ ಚಿತ್ರರಂಗದ ಬಹುಬೇಡಿಕೆಯ ನಟ. 'ರಾಜಾ ಸಾಬ್', 'ಸ್ಪಿರಿಟ್', 'ಕಲ್ಕಿ 2', 'ಸಲಾರ್ 2' ಮತ್ತು 'ಫೌಜಿ' ಸೇರಿದಂತೆ ಹಲವು ಸಿನಿಮಾಗಳಲ್ಲಿ ನಟಿಸುವುದಕ್ಕೆ ಒಪ್ಪಿಕೊಂಡಿದ್ದಾರೆ. ಹೀಗಿರುವಾಗಲೇ, ಇದೇ ಲಿಸ್ಟ್ಗೆ ಇನ್ನೂ ಎರಡು ಸಿನಿಮಾಗಳು ಸೇರ್ಪಡೆಯಾಗಲಿದೆ. ಇಂಥ ನಟನ ಜತೆಗೆ ಒಟ್ಟು ಮೂರು ಸಿನಿಮಾಗಳನ್ನು ನಿರ್ಮಿಸಲು ಹೊಂಬಾಳೆ ಸಂಸ್ಥೆ ಸನ್ನದ್ಧವಾಗಿದೆ.

ಪ್ರಭಾಸ್ ಅವರೊಂದಿಗಿನ ಸಹಯೋಗದ ಕುರಿತು ಮಾತನಾಡಿರುವ ಹೊಂಬಾಳೆ ಫಿಲಂಸ್ನ ವಿಜಯ್ ಕಿರಗಂದೂರು, 'ಹೊಂಬಾಳೆ ಫಿಲಂಸ್ ಮೂಲಕ ನಾವು ಗಡಿಗಳನ್ನು ಮೀರಿದ ಕಥೆ ಹೇಳುವ ಪ್ರಯತ್ನದಲ್ಲಿದ್ದೇವೆ. ಪ್ರಭಾಸ್ ಅವರೊಂದಿಗಿನ ನಮ್ಮ ಸಹಯೋಗವು ಮತ್ತೊಂದು ಹೊಸ ಹೆಜ್ಜೆ. ಅದು ಮುಂದಿನ ಪೀಳಿಗೆಗೆ ಸ್ಫೂರ್ತಿಯಾಗಲಿದೆ' ಎಂಬ ನಂಬಿಕೆ ಇದೆ' ಎಂದು ಹೇಳಿದ್ದಾರೆ.

Hombale FILMS



# ಸೈಕ್ಯಾಡೆಲಿಕ್ ಥ್ರಿಲ್ಲರ್ 'ಅಂಶು' ಗೀಗ ಸೆನ್ಸಾರ್ ಸರ್ಟಿಫಿಕೆಟ್ ಸಿಕ್ಕಖುಷಿ!

ಇತ್ತೀಚೆಗಷ್ಟೇ ಬಿಡುಗಡೆಗೊಂಡಿದ್ದ ಟ್ರೈಲರ್ ಮೂಲಕ ಪ್ರೇಕ್ಷಕರನ್ನೆಲ್ಲ ಮೋಡಿ ಮಾಡಿದ್ದ ಚಿತ್ರ 'ಅಂಶು'. ನಮ್ಮ ನಡುವೆಯೇ ಘಟಿಸೋ ಕಥೆಯೊಂದು, ಕಮರ್ಶಿಯಲ್ ಜಾಡಿನಲ್ಲಿ ಮೂಡಿ ಬಂದಿರುವ ಸುಳಿವು ಕಂಡು ಎಲ್ಲರೂ ಥ್ರಿಲ್ ಆಗಿದ್ದರು. ಅದೇ ಖುಷಿಯಲ್ಲಿ ಬಿಡುಗಡೆಗೆ ಸಜ್ಜುಗೊಳ್ಳುತ್ತಿರೋ ಚಿತ್ರತಂಡವೀಗ ಮತ್ತೊಂದು ಖುಷಿಯ ವಿಚಾರವನ್ನು ಹಂಚಿಕೊಂಡಿದೆ. ಸೆನ್ಸಾರ್ ಪರೀಕ್ಷೆ ದಾಟಿಕೊಂಡಿರುವ ಅಂಶು ಚಿತ್ರಕ್ಕೀಗ ಯು/ಎ ಸರ್ಟಿಫಿಕೆಟ್ ಸಿಕ್ಕಿದೆ. ಸಾಮಾಜಿಕ ಸ್ಥಿತ್ಯಂತರವೊಂದಕ್ಕೆ ಸಿನಿಮಾ ಸ್ಪರ್ಶ ನೀಡಿರುವ ಕುಸುರಿ ಕೆಲಸಕ್ಕೆ ಸೆನ್ಸಾರ್ ಅಧಿಕಾರಿಗಳು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ಈ ಮೂಲಕ ಅಂಶು ಇದೀಗ ನಿರ್ಣಾಯಕ ಘಟ್ಟ ತಲುಪಿಕೊಂಡಿದೆ.



ಗ್ರಹಣ ಎಲ್ ಎಲ್ ಪಿ ಬ್ಯಾನರಿನಡಿಯಲ್ಲಿ ರತನ್ ಗಂಗಾಧರ್ ಸಂಪತ್ ಶಿವಶಂಕರ್, ಕೃತಿ ನಾಣಯ್ಯ ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಚೆಲುವರಾಜ್, ಜಯಚಂದ್ರ, ಯಲ್ಲಪ್ಪ, ಪ್ರಮೋದ್ ಚಿನ್ನಸ್ವಾಮಿ, ಡಾ.ಮಧುರಾಜ್ ಸಹ ನಿರ್ಮಾಪಕರಾಗಿ ಸಾಥ್ ಕೊಟ್ಟಿದ್ದಾರೆ. ಈ ಹಿಂದೆ ಫಸ್ಟ್ ಲುಕ್ ಟೀಸರ್ ಮೂಲಕವೇ ಗಮನ ಸೆಳೆದಿದ್ದ ಈ ಚಿತ್ರದಲ್ಲಿ ಗಟ್ಟಿಮೇಳ ಖ್ಯಾತಿಯ ನಿಶಾ ರವಿಕೃಷ್ಣನ್ ನಾಯಕಿಯಾಗಿ ನಟಿಸಿದ್ದಾರೆ. ಆ ಧಾರಾವಾಹಿಯಲ್ಲಿ ರೌಡಿ ಬೇಬಿ ಅವತಾರದಲ್ಲಿ ಕಂಗೊಳಿಸಿದ್ದ ನಿಶಾ ಇಲ್ಲಿ ಭಾವನಾತ್ಮಕ ಪಾತ್ರವೊಂದರ ಮೂಲಕ ಹಿರಿತೆರೆ ಪ್ರೇಕ್ಷಕರ ಮನಗೆಲ್ಲಲು ಮುಂದಾಗಿದ್ದಾರೆ. ಅವರ ಪಾತ್ರದ ಚಹರೆ ಟ್ರೈಲರ್ ಮೂಲಕ ಸ್ಪಷ್ಟವಾಗಿಯೇ ಜಾಹೀರಾಗಿತ್ತು. ಅಂದಹಾಗೆ, ಇದು ಕನ್ನಡದ ಮಟ್ಟಿಗೆ ಅತ್ಯಪರೂಪವಾದ ಸೈಕ್ಯಾಡೆಲಿಕ್ ಥ್ರಿಲ್ಲರ್ ಜಾನರಿನ ಚಿತ್ರ.

ಎಂ.ಸಿ ಚನ್ನಕೇಶವ ಈ ಸಿನಿಮಾ ಮೂಲಕ ಸ್ವತಂತ್ರ ನಿರ್ದೇಶಕರಾಗಿದ್ದಾರೆ. ಈ ಪ್ರಥಮ ಹೆಜ್ಜೆಯಲ್ಲಿಯೇ ಅವರು ಸಮಾಜುಮುಖಿ ಕಥೆಯನ್ನು ದೃಶ್ಯಕ್ಕೆ ಒಗ್ಗಿಸಿದ್ದಾರೆ. ಸಾಮಾಜಿಕ ತುಡಿತ ಹೊಂದಿರೋ ಕಥೆಯನ್ನು ಕಮರ್ಶಿಯಲ್ ಚೌಕಟ್ಟಿನಲ್ಲಿ ಪ್ರಸ್ತುತಪಡಿಸೋದು ಸವಾಲಿನ ಕೆಲಸ. ಅಂಶು ಚಿತ್ರದಲ್ಲಿ ಅದನ್ನು ಸಾಧ್ಯವಾಗಿಸಲಾಗಿದೆಯಂತೆ. ಅದರ ಒಟ್ಟಾರೆ ಆವೇಗ ಎಂಥಾದ್ದೆಂಬುದು ಈಗಾಗಲೇ ಪ್ರೇಕ್ಷಕರಿಗೆ ಅರಿವಾಗಿದೆ. ಸುನೀಲ್ ನರಸಿಂಹಮೂರ್ತಿ ಛಾಯಾಗ್ರಾಹಕರಾಗಿ ಈ ಚಿತ್ರ ಭಾಗವಾಗಿದ್ದಾರೆ. ಆಶಾ ಎಂ ಥಾಮಸ್ ವಸ್ತ್ರವಿನ್ಯಾಸದ ಮೂಲಕ ಈ ಚಿತ್ರವನ್ನು ಅಂದಗಾಣಿಸಿದ್ದಾರೆ. ಜಿ.ವಿ ಪ್ರಕಾಶ್, ವಿದ್ಯಾಸಾಗರ್ ಜೊತೆ ಪ್ರೋಗ್ರಾಮರ್ ಆಗಿದ್ದ ಕೆ.ಸಿ ಬಾಲರಂಗನ್ ಸಂಗೀತ ನಿರ್ದೇಶನ ಮಾಡಿದ್ದಾರೆ. ನವ ಪ್ರತಿಭೆ ವಿಘ್ನೇಶ್ ಶಂಕರ್ ಹಿನ್ನೆಲೆ ಸಂಗೀತ ನೀಡಿದ್ದಾರೆ. ಮಹೇಂದ್ರ, ಗೌಡ ಸಂಭಾಷಣೆ ಮತ್ತು, ಸಾಹಿತ್ಯದ ಜವಾಬ್ದಾರಿ ನಿಭಾಯಿಸಿದ್ದಾರೆ. ಇದೇ ನವೆಂಬರ್ 21ರ ಗುರುವಾರ ಈ ಚಿತ್ರ ರಾಜ್ಯಾದ್ಯಂತ ಬಿಡುಗಡೆಗೊಳ್ಳಲಿದೆ.





ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ದೂರ ಪ್ರಯಾಣ ಸಾಧ್ಯತೆ, ಕೋರ್ಟ್ ವ್ಯವಹಾರಗಳಲ್ಲಿ ಪ್ರಗತಿ, ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಯಶಸ್ಸು.

**ವೃಷಭ:** ಕೃಷಿಕರಿಗೆ ಅನುಕೂಲ, ನೂತನ ವ್ಯಾಪಾರದವರಿಗೆ ಹೆಚ್ಚಿನ ಲಾಭ, ಸಂಬಂಧಿಕರಿಂದ ಸಹಾಯ ನಿರೀಕ್ಷೆ.

**ಮಿಥುನ:** ಶತ್ರು ಕಾಟದಿಂದ ಮುಕ್ತಿ, ಅವಿವಾಹಿತರಿಗೆ ವಿವಾಹ ಯೋಗ, ಬಂಧುಗಳಿಂದ ನಷ್ಟ ಸಾಧ್ಯತೆ.

**ಕರ್ಕಾಟಕ:** ಹೊಸ ವಾಹನ ಖರೀದಿ ಯೋಗ, ವಿದ್ಯಾಭ್ಯಾಸದಲ್ಲಿ ನಿರಾಸಕ್ತಿ, ಕುಟುಂಬದಲ್ಲಿ ಸಣ್ಣಪುಟ್ಟ ಭಿನ್ನಾಭಿಪ್ರಾಯ.

**ಸಿಂಹ:** ವೈವಾಹಿಕ ಜೀವನದಲ್ಲಿ ನೆಮ್ಮದಿ ಇರುತ್ತದೆ, ನಿಮ್ಮ ಆರ್ಥಿಕ ಪರಿಸ್ಥಿತಿ ಸುಧಾರಿಸಲಿದೆ, ಅಧಿಕ ಕೋಪ ತಾಪ.

**ಕನ್ಯಾ:** ಅವಿವೇಕದ ಆಲೋಚನೆ, ಷೇರು ವ್ಯವಹಾರದಲ್ಲಿ ನಷ್ಟ, ಅನಾರೋಗ್ಯದಿಂದ ಚೇತರಿಕೆ.

**ತುಲಾ:** ಹಿರಿಯರ ಆರೋಗ್ಯದಲ್ಲಿ ಚೇತರಿಕೆ, ಸಾಲ ತೀರಿಸುವ ಪ್ರಯತ್ನ, ಧಾರ್ಮಿಕ ಕಾರ್ಯದಲ್ಲಿ ಆಸಕ್ತಿ.

**ವೃಶ್ಚಿಕ:** ವಿದ್ಯಾರ್ಥಿಗಳು ಓದಿನ ಬಗ್ಗೆ ಗಮನವಹಿಸಿ, ವಿದೇಶ ಪ್ರಯಾಣ ಸಾಧ್ಯತೆ, ಹೊಸ ವಾಹನ ಖರೀದಿ ಯೋಗ.

**ಧನಸ್ಸು:** ಆಕಸ್ಮಿಕ ಧನಾಗಮನ, ನೆರೆಹೊರೆಯವರಿಂದ ಸಮಸ್ಯೆ, ಕಟ್ಟಡ ನಿರ್ಮಾಣ ಗುತ್ತಿಗೆದಾರರಿಗೆ ಲಾಭ.

**ಮಕರ:** ಶತ್ರು ಕಾಟದಿಂದ ಮುಕ್ತಿ, ಅಧಿಕ ಕೋಪದಿಂದ ಸಂಬಂಧಗಳಲ್ಲಿ ಬಿರುಕು, ಅವಕಾಶ ವಂಚಿತರಾಗುವಿರಿ.

**ಕುಂಭ:** ಹಿತಶತ್ರುಗಳಿಂದ ತೊಂದರೆ, ಪಾಲುದಾರಿಕೆಯಲ್ಲಿ ಸಮಸ್ಯೆ, ಪ್ರಯಾಣದಲ್ಲಿ ವಿಘ್ನ.

**ಮೀನ:** ಆಭರಣ ವ್ಯಾಪಾರಿಗಳಿಗೆ ಲಾಭ, ಮಿತ್ರರಿಂದ ಸಹಕಾರ, ಅನಾರೋಗ್ಯದ ಭಯ.

# ವಿಶ್ವವಿಜ್ಞಾನ ದಿನ




ವಿಶ್ವ ವಿಜ್ಞಾನ ದಿನ ಇದನ್ನು ನವೆಂಬರ್ 10 ರಂದು ಸ್ಮರಿಸಲಾಗುತ್ತದೆ, ವಿಜ್ಞಾನವು ಜಾಗತಿಕ ಶಾಂತಿ ಮತ್ತು ಅಭಿವೃದ್ಧಿಯನ್ನು ಹೇಗೆ ಉತ್ತೇಜಿಸುತ್ತದೆ ಎಂಬುದನ್ನು ಆಚರಿಸಲು. ವಿಜ್ಞಾನಿಗಳ ಅನೇಕ ಆವಿಷ್ಕಾರಗಳು ಮತ್ತು ಆವಿಷ್ಕಾರಗಳು ಪ್ರಪಂಚದಾದ್ಯಂತದ ಲಕ್ಷಾಂತರ ಜನರಿಗೆ ಆರ್ಥಿಕ ಅಭಿವೃದ್ಧಿ, ಬಡತನ ಕಡಿತ, ಸಾಕ್ಷರತೆ ಮತ್ತು ಉತ್ತಮ ಪೋಷಣೆಯನ್ನು ಉತ್ತೇಜಿಸಲು ಸಹಾಯ ಮಾಡಿದೆ. ಜಾಗತಿಕ ಶಾಂತಿಯನ್ನು ಸಾಧಿಸುವಲ್ಲಿ ವಿಜ್ಞಾನದ ಸಾಧನೆಗಳನ್ನು ನೆನಪಿಟ್ಟುಕೊಳ್ಳುವುದು ಮತ್ತು ವೈಜ್ಞಾನಿಕ ಶಿಕ್ಷಣ ಮತ್ತು ಸಂಶೋಧನೆಯಲ್ಲಿ ಹೂಡಿಕೆಯನ್ನು ಮುಂದುವರಿಸುವುದು ಈ ದಿನವನ್ನು ಆಚರಿಸುವ ಉದ್ದೇಶವಾಗಿದೆ. ವಿಜ್ಞಾನ ಮತ್ತು ಅದರ ಆವಿಷ್ಕಾರಗಳನ್ನು ಅಳವಡಿಸಿಕೊಳ್ಳಲು ಖಟಿಜಿಠಡಿತಿ ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ವಿಜ್ಞಾನದಲ್ಲಿ ಕಂಡುಕೊಳ್ಳಲು ಸಹಾಯ ಮಾಡುತ್ತಿದೆ, ಪ್ರಪಂಚದಾದ್ಯಂತ ಲಭ್ಯವಿರುವ ವಿವಿಧ ವಿಜ್ಞಾನ ವಿದ್ಯಾರ್ಥಿವೇತನಗಳ ಮಾಹಿತಿಗೆ ಸುಲಭ ಪ್ರವೇಶವನ್ನು ನೀಡುತ್ತದೆ. ವಿಶ್ವ ವಿಜ್ಞಾನ ದಿನವು ಸಮಾಜಕ್ಕೆ ವಿಜ್ಞಾನ ತಂದ ಧನಾತ್ಮಕ ಪರಿಣಾಮವನ್ನು ಸ್ವೀಕರಿಸುತ್ತದೆ. ಸಮಾಜದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನದ ಪಾತ್ರವನ್ನು ಅರ್ಥಮಾಡಿಕೊಳ್ಳುವುದು ಈ ದಿನವನ್ನು ಆಚರಿಸುವ ಮುಖ್ಯ ಉದ್ದೇಶವಾಗಿದೆ. 1999 ರಲ್ಲಿ, ಯುನೆಸ್ಕೋ ಮತ್ತು ಇಂಟರ್ನ್ಯಾಷನಲ್ ಕೌನ್ಸಿಲ್ ಫಾರ್ ಸೈನ್ಸ್ ವಿಜ್ಞಾನದ ಮೊದಲ ವಿಶ್ವ ಸಮ್ಮೇಳನವನ್ನು ಆಯೋಜಿಸಿತು. ಈವೆಂಟ್ ಹಂಗೇರಿಯಲ್ಲಿ ನಡೆಯಿತು, ಮತ್ತು ಹಲವಾರು ನಿಯೋಗಗಳು ವಿಜ್ಞಾನದ ಬಗ್ಗೆ ಸಮಾಜಕ್ಕೆ ಶಿಕ್ಷಣ ನೀಡುವ ಅಗತ್ಯವನ್ನು ಪರಸ್ಪರ ಒಪ್ಪಿಕೊಂಡವು. ವಿಜ್ಞಾನಕ್ಕೆ ವಿಶೇಷ ದಿನ ಅಥವಾ ವಾರವನ್ನು ಮೀಸಲಿಡಬೇಕೆಂದು ಸರ್ವಾನುಮತದಿಂದ ನಿರ್ಧರಿಸಲಾಯಿತು. ಸಮ್ಮೇಳನದಲ್ಲಿ ಭಾಗವಹಿಸಿದವರು ವೈಜ್ಞಾನಿಕ ಸಾಕ್ಷರತೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿದ್ದರು ಮತ್ತು ಕ್ರಿಯಾ ಯೋಜನೆಯನ್ನು ಅಭಿವೃದ್ಧಿಪಡಿಸಿದರು. ಈ ಯೋಜನೆಯನ್ನು ಸೈನ್ಸ್ ಅಜೆಂಡಾ ಎಂದು ಹೆಸರಿಸಲಾಯಿತು - ಕ್ರಿಯೆಗಾಗಿ ಚೌಕಟ್ಟು. ಒಂದು ವರ್ಷದ ನಂತರ, ಯುನೆಸ್ಕೋದ ಕಾರ್ಯನಿರ್ವಾಹಕ ಮಂಡಳಿಯು ಶಾಂತಿ ಮತ್ತು ಅಭಿವೃದ್ಧಿಗಾಗಿ ವಿಜ್ಞಾನ ದಿನವನ್ನು ಅನುಮೋದಿಸಿತು. 2001 ರಲ್ಲಿ, ವಿಜ್ಞಾನ ಮತ್ತು ಸಮಾಜದ ನಡುವೆ ಆಳವಾದ ಸಂಪರ್ಕವನ್ನು ಸೃಷ್ಟಿಸಲು ಕ್ರಮಗಳನ್ನು ತೆಗೆದುಕೊಳ್ಳಲಾಯಿತು. ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿನ ಇತ್ತೀಚಿನ ಬೆಳವಣಿಗೆಗಳ ಬಗ್ಗೆ ಜನರಿಗೆ ನಿಯಮಿತ ನವೀಕರಣಗಳನ್ನು ನೀಡಲಾಯಿತು. ಅಂತೆಯೇ, ನಮ್ಮ ಗ್ರಹವು ಎದುರಿಸುತ್ತಿರುವ ಪರಿಸರ ಸವಾಲುಗಳನ್ನು ಮತ್ತು ಹೆಚ್ಚು ಸಮರ್ಥನೀಯವಾಗಿ ಬದುಕುವುದು ಹೇಗೆ ಎಂಬುದನ್ನು ಜನರಿಗೆ ಅರ್ಥಮಾಡಿಕೊಳ್ಳಲು ವಿಜ್ಞಾನಿಗಳು ಮುಂದೆ ಬಂದರು. 2002 ರಲ್ಲಿ, ಶಾಂತಿ ಮತ್ತು ಅಭಿವೃದ್ಧಿಗಾಗಿ ಮೊದಲ ವಿಶ್ವ ವಿಜ್ಞಾನ ದಿನವನ್ನು ವಿಶ್ವದಾದ್ಯಂತ ಆಚರಿಸಲಾಯಿತು. ಯುನೆಸ್ಕೋದ ಮಾರ್ಗದರ್ಶನ ಮತ್ತು ಬೆಂಬಲದ ಅಡಿಯಲ್ಲಿ ಈ ದಿನವನ್ನು ಆಚರಿಸಲು ವಿವಿಧ ಸರ್ಕಾರೇತರ ಸಂಸ್ಥೆಗಳು (ಎನ್ಜಿಒಗಳು), ಸರ್ಕಾರಿ ಸಂಸ್ಥೆಗಳು, ಸಂಶೋಧನಾ ಕೇಂದ್ರಗಳು, ಶಾಲೆಗಳು, ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳು ಸೇರಿದಂತೆ ಶಿಕ್ಷಣ ಸಂಸ್ಥೆಗಳು ಒಗ್ಗೂಡಿದವು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಕಿರಣ್ ರಾಜ್ ಅಭಿನಯದ 'ಮೇಘ' ಮಾಸಾಂತ್ಯಕ್ಕೆ ತೆರೆಗೆ





ಚರಣ್ ನಿರ್ದೇಶನದ, ಕಿರಣ್ ರಾಜ್ -ಕಾಜಲ್ ಕುಂದರ್ ಜೋಡಿಯಾಗಿ ನಟಿಸಿರುವ 'ಮೇಘ' ಚಿತ್ರ ನವೆಂಬರ್ ಅಂತ್ಯಕ್ಕೆ ಬಿಡುಗಡೆಯಾಗಲು ಸಜ್ಜಾಗಿದೆ.

'ಮೇಘ' ಸಿನಿಮಾದಲ್ಲಿ ನಿಜವಾದ ಸ್ನೇಹ ಮತ್ತು ಪ್ರೀತಿಯ ನಡುವೆ ಇರುವ ಸಣ್ಣ ವ್ಯತ್ಯಾಸವನ್ನು ತಿಳಿಸುವ ಕಥೆ ಇದೆ ಎಂದು ಚಿತ್ರತಂಡ ಮಾಹಿತಿ ನೀಡಿದೆ.

'ಕೃಷಿ ಪ್ರೊಡಕ್ಷನ್ಸ್' ಸಂಸ್ಥಾಪಕರಾದ ಯತೀಶ್ ಹೆಚ್. ಆರ್, ಯತೀಶ್ ಆರ್.ಜಿ ಹಾಗೂ ರಮೇಶ್ ಎಚ್.ಎನ್ ಅವರ ಸಹಕಾರದೊಂದಿಗೆ ಪ್ರತಿ ವರ್ಷ ತಲಾ ಒಂದು ಉತ್ತಮವಾದ ಸಿನಿಮಾವನ್ನು ನಿರ್ಮಾಣ ಮಾಡಲು ಸಂಕಲ್ಪ ಹೊಂದಿದ್ದಾರೆ. 'ಕೃಷಿ ಪ್ರೊಡಕ್ಷನ್ಸ್' ಸಂಸ್ಥೆಯ ಚೊಚ್ಚಲ ಸಿನಿಮಾವಾಗಿ 'ಮೇಘ' ಮೂಡಿಬಂದಿದೆ.

ಕಿರಣ್ ರಾಜ್ ಮತ್ತು ಕಾಜಲ್ ಕುಂದರ್ ಜೊತೆ ರಾಜೇಶ್ ನಟರಂಗ ಕೂಡ ಒಂದು ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಹೀರೋ ತಂದೆಯ ಪಾತ್ರವನ್ನು ಅವರಿಗೆ ನೀಡಲಾಗಿದೆ. ಸಿನಿಮಾದಲ್ಲಿ ಶೋಭರಾಜ್, ಸುಂದರ್ ವೀಣಾ, ಸಂಗೀತಾ, ಹನುಮಂತೇಗೌಡ, ಗಿರೀಶ್ ಶಿವಣ್ಣ, ತರಂಗ ವಿಶ್ವ ಮುಂತಾದ ಕಲಾವಿದರು ನಟಿಸಿದ್ದಾರೆ. ಡಾ. ವಿ. ನಾಗೇಂದ್ರ ಪ್ರಸಾದ್ ಅವರು ಎರಡು ಹಾಡುಗಳಿಗೆ ಸಾಹಿತ್ಯ ಬರೆದಿದ್ದು, ಜೋಯಲ್ ಸಕ್ಕರಿ ಅವರು ಸಂಗೀತ ನಿರ್ದೇಶನ ಮಾಡಿದ್ದಾರೆ. ಫ್ರಾಂಕ್ಲಿನ್ ರಾಕಿ ಅವರ ಹಿನ್ನೆಲೆ ಸಂಗೀತ ಈ ಸಿನಿಮಾಗೆ ಇದೆ. ಬಿಡುಗಡೆಗೆ ಸಜ್ಜಾಗುತ್ತಿರುವ 'ಮೇಘ' ಚಿತ್ರ ತಂಡಕ್ಕೆ, ಚಂದ್ರಶೇಖರ್ ರವರು ಸ್ಥಾಪಿಸಿದ 35 ವರ್ಷಗಳ ಅನುಭವ ಮತ್ತು 250 ಕ್ಕೂ ಹೆಚ್ಚು ಚಲನಚಿತ್ರಗಳನ್ನು ವಿತರಿಸಿದ ಪರಂಪರೆ ಹೊಂದಿರುವ ರವಿ ಫಿಲಂಸ್ ರವರು ಕೈ ಜೋಡಿಸಿದ್ದಾರೆ.

# 'ಪುಷ್ಪ 2' ಐಟಂ ಹಾಡಿಗೆ ಸೊಂಟ ಬಳುಕಿಸಿದ ಶ್ರೀಲೀಲಾ





ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ ನಟನೆಯ ಪ್ಯಾನ್ ಇಂಡಿಯಾ ಸಿನಿಮಾ 'ಪುಷ್ಪ 2' ಡಿ.6ರಂದು ರಿಲೀಸ್ ಆಗಲಿದೆ. ಸಿನಿಮಾ ಬಿಡುಗಡೆ ದಿನಗಣನೆ ಶುರುವಾಗಿದೆ. ಹೀಗಿರುವಾಗ ಚಿತ್ರದ ಕುರಿತು ಇಂಟರೆಸ್ಟಿಂಗ್ ಮಾಹಿತಿಯೊಂದು ಸಿಕ್ಕಿದೆ. ಈ ಸಿನಿಮಾದ ಐಟಂ ಹಾಡಿಗೆ ಕನ್ನಡದ ನಟಿ ಶ್ರೀಲೀಲಾ ಕುಣಿದಿದ್ದಾರೆ. ಆ ಫೋಟೋ ಲೀಕ್ ಕೂಡ ಆಗಿದೆ. ಈ ಹಿಂದೆ ಈ ಹಾಡಿಗೆ ಬಾಲಿವುಡ್ ನಟಿಯರ ಹೆಸರೆಲ್ಲ ಕೇಳಿ ಬಂದಿತ್ತು. ಅದರಲ್ಲೂ ಶ್ರದ್ಧಾ ಕಪೂರ್ ಈ ಚಿತ್ರದಲ್ಲಿ ಐಟಂ ಹಾಡಿಗೆ ಹೆಜ್ಜೆ ಹಾಕಲಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡಿತ್ತು. 'ಪುಷ್ಪ 1'ರಲ್ಲಿ ಸಮಂತಾ ಡ್ಯಾನ್ಸ್ ಮಾಡಿದ್ದ ಹಾಡು ಸಿಕ್ಕಾಪಟ್ಟೆ ಸದ್ದು ಮಾಡಿತ್ತು. ಚಿತ್ರದ ಗೆಲುವಿಗೆ ಕಥೆಯ ಜೊತೆ ಸಮಂತಾ ಡ್ಯಾನ್ಸ್ ಪ್ಲಸ್ ಆಗಿತ್ತು. ಹಾಗಾಗಿಯೇ ಪುಷ್ಪ 2ರಲ್ಲೂ ಇದನ್ನೇ ಫಾರ್ಮುಲಾ ಬಳಸುತ್ತಿದ್ದಾರೆ. ಈ ಹಿಂದೆ ಐಟಂ ಹಾಡಿಗೆ ಹೆಜ್ಜೆ ಹಾಕಲು ಜಾನ್ವಿ ಕಪೂರ್, ತೃಪ್ತಿ ದಿಮ್ರಿ, ಶ್ರೀಲೀಲಾ ಹೀಗೆ ಅನೇಕರ ಹೆಸರು ಸದ್ದು ಮಾಡಿತ್ತು. ಈಗ ಶ್ರೀಲೀಲಾ ಕುಣಿದಿರೋದೇ ಪಕ್ಕಾ ಆಗಿದೆ. ಇದೀಗ 'ಸ್ತ್ರೀ 2' ಸಿನಿಮಾದ ಸಕ್ಸಸ್ ಅಲೆಯಲ್ಲಿ ತೇಲುತ್ತಿರುವ ಶ್ರದ್ಧಾಗೆ ಚಿತ್ರತಂಡ ಮಣೆ ಹಾಕಿದೆ ಎನ್ನಲಾಗಿತ್ತು. ಚಿತ್ರದಲ್ಲಿ ನಟಿಗೆ ಸ್ಪೆಷಲ್ ಹಾಡಿಗೆ ಹೆಜ್ಜೆ ಹಾಕಲು ಕೇಳಲಾಗಿದೆ ಎಂದೂ ಹೇಳಲಾಗಿತ್ತು. ಆದರೆ, ಈಗ ಚಿತ್ರಣವೇ ಬದಲಾಗಿದೆ. ಈಗಾಗಲೇ ಹಾಡಿನ ಚಿತ್ರೀಕರಣ ಕೂಡ ಮುಗಿದಿದೆ.

# 'ತಲೆಹರಟೆ' ಹಾಡಿಗೆ ಗಾಯಕನಾದ ನಟ ಜಗ್ಗೇಶ್



ಡಾಲಿ ಧನಂಜಯ್ ನಿರ್ಮಾಣದ ವಿದ್ಯಾಪತಿ ಸಿನಿಮಾ ನಾನಾ ವಿಧದಲ್ಲಿ ನಿರೀಕ್ಷೆ ಹೆಚ್ಚಿಸಿದೆ. ಟೀಸರ್, ಮೇಕಿಂಗ್ ನಿಂದಲೇ ಗಮನಸೆಳೆದಿರುವ ಈ ಚಿತ್ರದ ಮೊದಲ ಹಾಡು ಬಿಡುಗಡೆಯಾಗಿದೆ. ಕರಾಟೆ ತರಗತಿಯಲ್ಲಿ ವಿದ್ಯಾಪತಿಯ ತಲೆಹರಟೆಯ ಹಾಡಿಗೆ ನವರಸ ನಾಯಕ ಜಗ್ಗೇಶ್ ಧ್ವನಿಯಾಗಿದ್ದಾರೆ. ಅಯ್ಯೋ ವಿಧಿಯೇ ಎಂದು ಶುರುವಾಗುವ ಹಾಡಿಗೆ ಸುಜಿತ್ ವೆಂಕಟರಾಮಯ್ಯ ಸಾಹಿತ್ಯ, ಡಾಸ್ಮೋಡ್ ಸಂಗೀತ ಸಖತ್ ಕಿಕ್ ಕೊಡುತ್ತದೆ. ಸಖತ್ ಫನ್ ಆಗಿ ಮೂಡಿಬಂದಿರುವ ಗೀತೆಯಲ್ಲಿ ರಂಗಾಯಣ ರಘು ಕೂಡ ಹೆಜ್ಜೆ ಹಾಕಿರುವುದು ವಿಶೇಷ.

''ಟಗರು ಪಲ್ಯ'' ಮೂಲಕ ಮಸ್ತ್ ಮನರಂಜನೆ ನೀಡಿದ್ದ ನಾಗಭೂಷಣ್ ಈ ಚಿತ್ರದಲ್ಲಿ ನಾಯಕನಾಗಿ ನಟಿಸಿದ್ದು, 'ಉಪಾಧ್ಯಕ್ಷ'ನ ಬೆಡಗಿ ಮಲ್ಯೈಕಾ ವಸೂಪಾಲ್ ನಾಯಕಿಯಾಗಿ ಸಾಥ್ ಕೊಟ್ಟಿದ್ದಾರೆ. ಕರಾಟೆ ಕಿಂಗ್ ಗೆಟಪ್ನಲ್ಲಿ ನಾಗಭೂಷಣ್ ಕಾಣಿಸಿಕೊಳ್ಳುತ್ತಿದ್ದು, ಅವರಿಗೆ ಮಾಸ್ಟರ್ ಆಗಿ ಹಿರಿಯ ನಟ ರಂಗಾಯಣ ರಘು ಅಭಿನಯಿಸಿದ್ದಾರೆ.

ಈ ಹಿಂದೆ ಇಕ್ಕಟ್ ಸಿನಿಮಾ ಮೂಲಕ ಭರವಸೆ ಹುಟ್ಟಿಸಿದ್ದ ಇಶಾಂ ಮತ್ತು ಹಸೀಂ ಖಾನ್ ''ವಿದ್ಯಾಪತಿ'' ಸಿನಿಮಾಗೆ ಆಕ್ಷನ್ ಕಟ್ ಹೇಳಿದ್ದಾರೆ. ಜೊತೆಗೆ, ಸಿನಿಮಾವನ್ನು ಇವರೇ ಬರೆದು, ಸಂಕಲನದ ಜವಾಬ್ದಾರಿಯನ್ನೂ ತಾವೇ ಹೊತ್ತುಕೊಂಡಿದ್ದಾರೆ. ಚಿತ್ರಕ್ಕೆ ಲವಿತ್ ಅವರ ಛಾಯಾಗ್ರಹಣ ಇದೆ. ಡಾಸ್ಮೋಡ್ ಸಂಗೀತ ನಿರ್ದೇಶನ, ಮುರುಳಿ ನೃತ್ಯ ನಿರ್ದೇಶನ, ಸುಜಿತ್ ವೆಂಕಟರಾಮಯ್ಯ ಸಾಹಿತ್ಯ, ಅರ್ಜುನ್ ಮಾಸ್ಟರ್ ಆಕ್ಷನ್ ವಿದ್ಯಾಪತಿ ಸಿನಿಮಾಗಿದೆ. ಟಗರು ಪಲ್ಯ ಸಿನಿಮಾ ನಿರ್ಮಾಣ ಮಾಡಿದ್ದ ಡಾಲಿ ಧನಂಜಯ್ ಇದೀಗ 'ವಿದ್ಯಾಪತಿ' ಪ್ರೊಡ್ಯೂಸ್ ಮಾಡುತ್ತಿದ್ದಾರೆ. ಚಿತ್ರದಲ್ಲಿ ಆಕ್ಷನ್ ಜೊತೆಗೆ ಹಾಸ್ಯವೂ ಇರಲಿದೆ.

# ಕಮಲ್- ಮಣಿರತ್ನಂ ಚಿತ್ರದ ರಿಲೀಸ್ ಡೇಟ್ ಫಿಕ್ಸ್



ಕಮಲ್ ಹಾಸನ್ ಮತ್ತು ಮಣಿರತ್ನಂ ಅವರು 37 ವರ್ಷಗಳ ನಂತರ 'ಥಗ್ ಲೈಫ್' ಚಿತ್ರದೊಂದಿಗೆ ಮತ್ತೆ ಒಂದಾಗಿದ್ದಾರೆ. ಈ ಚಿತ್ರವು 2025ರ ಜೂನ್ 5ರಂದು ಪ್ರಪಂಚದಾದ್ಯಂತ ಬಿಡುಗಡೆಯಾಗಲಿದ್ದು, ಇಂದು ಕಮಲ್ ಹಾಸನ್ ಅವರ ಹುಟ್ಟುಹಬ್ಬದ ಸಂಭ್ರಮದಲ್ಲಿ ಬಿಡುಗಡೆ ದಿನಾಂಕವನ್ನು ಘೋಷಿಸಲಾಯಿತು. ರಾಜ್ ಕಮಲ್ ಫಿಲ್ಮ್ಸ್ ಇಂಟರ್‌ನ್ಯಾಷನಲ್ ಮತ್ತು ಮದ್ರಾಸ್ ಟಾಕೀಸ್ ಸಹ-ನಿರ್ಮಾಣದಲ್ಲಿ ಬರುತ್ತಿರುವ ಈ ಚಿತ್ರವನ್ನು ರೆಡ್ ಜೈಯಂಟ್ ಮೂವೀಸ್ ವಿತರಿಸಲಿದೆ. ಚಿತ್ರದ ತಾರಾಗಣ ಕಮಲ್ ಹಾಸನ್, ಸಿಲಂಬರಸನ್ ಟಿಆರ್, ತ್ರಿಷಾ, ಅಶೋಕ್ ಸೆಲ್ವನ್, ಐಶ್ವರ್ಯ ಲಕ್ಷ್ಮಿ, ಜೋಜು ಜಾರ್ಜ್, ಅಭಿರಾಮಿ ಮತ್ತು ನಾಸರ್ ಮತ್ತಿತರ ನಟರನ್ನು ಒಳಗೊಂಡಿದೆ. ಈ ಬಹು ನಿರೀಕ್ಷಿತ ಚಿತ್ರಕ್ಕೆ ದಿಗ್ಗಜ ಎ.ಆರ್. ರೆಹಮಾನ್ ಅವರ ಸಂಗೀತವಿದೆ. ಈ ಚಿತ್ರದ ಕತೆ, ಚಿತ್ರಕತೆಯನ್ನು ಮಣಿರತ್ನಂ ಮತ್ತು ಕಮಲ್ ಹಾಸನ್ ಬರೆದಿದ್ದು, ಮಣಿರತ್ನಂ ನಿರ್ದೇಶನದಲ್ಲಿ ರವಿ ಆರ್ ಚಂದ್ರನ್ ಅವರ ಸಿನಿಮಾಟೋಗ್ರಫಿ, ಅನ್ಬರಿವ್ ಅವರ ಆಕ್ಷನ್ ಕೋರಿಯಾಗ್ರಫಿ ಈ ಚಿತ್ರಕ್ಕಿದೆ.

### ಟೀಂ ಇಂಡಿಯಾ ಪಾಕಿಸ್ತಾನಕ್ಕೆ ಬರದಿದ್ದರೆ

# ಐಸಿಸಿ ಟೂರ್ನಿಗಳಿಗೆ ಬಹಿಷ್ಕಾರ

**ಇಸ್ಲಾಮಾಬಾದ್:** ಮುಂದಿನ ವರ್ಷ ನಡೆಯಲಿರುವ ಚಾಂಪಿಯನ್ಸ್ ಟ್ರೋಫಿಯಲ್ಲಿ ಪಾಲ್ಗೊಳ್ಳುವ ವಿಚಾರದಲ್ಲಿ ಭಾರತ-ಪಾಕಿಸ್ತಾನದ ನಡುವೆ ಹಗ್ಗಜಗ್ಗಾಟ ಮುಂದುವರಿದಿದೆ. ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಈಗಾಗಲೇ ಪಾಕ್‌ಗೆ ಪ್ರಯಾಣಿಸುವುದಿಲ್ಲ ಎಂದು ಸ್ಪಷ್ಟವಾಗಿ ಹೇಳಿದ್ದರೂ, ಪಿಸಿಬಿ ಮಾತ್ರ ಬರಲೇಬೇಕೆಂದು ಪಟ್ಟು ಹಿಡಿದಿದೆ. ಈ ನಡುವೆ ಪಾಕಿಸ್ತಾನ ಕ್ರಿಕೆಟ್ ಮಂಡಳಿ ಮಹತ್ವದ ಹೇಳಿಕೆಯೊಂದನ್ನು ನೀಡಿದೆ.

ಪಾಕ್ ತಂಡದ ಮಾಜಿ ನಾಯಕ ರಶೀದ್ ಲತೀಫ್, ಭಾರತ ಈ ಬಾರಿ ಪಾಕಿಸ್ತಾನಕ್ಕೆ ಹೋಗದಿದ್ದರೆ, ಐಸಿಸಿ ಕಾರ್ಯಕ್ರಮಗಳನ್ನು ಬಹಿಷ್ಕರಿಸುವ ದೊಡ್ಡ ಹೆಜ್ಜೆಯನ್ನು ಪಿಸಿಬಿ ತೆಗೆದುಕೊಳ್ಳುತ್ತದೆ ಹೇಳಿದ್ದಾರೆ.

ಇದು ದ್ವಿಪಕ್ಷೀಯ ಸರಣಿ ಅಥವಾ ಏಷ್ಯಾ ಕಪ್ ಆಗಿದ್ದರೆ, ಭಾರತವು ಆಡಬೇಕೆ ಅಥವಾ ಬೇಡವೇ ಎಂದು ತಂಡಗಳನ್ನು ಕೇಳಬಹುದಿತ್ತು. ಇದು ದ್ವಿಪಕ್ಷೀಯ ಪಂದ್ಯವಾಗಿದ್ದರೆ, ಪಂದ್ಯವನ್ನು ರದ್ದು ಮಾಡಬಹುದಿತ್ತು. ಆದ್ರೆ ನೀವು ಈಗಾಗಲೇ ಸಹಿ ಮಾಡಿರುವುದರಿಂದ ಐಸಿಸಿ ಒಪ್ಪಂದಗಳನ್ನು ನಿರಾಕರಿಸಲಾಗುವುದಿಲ್ಲ. ಭಾರತವು ಗಟ್ಟಿ ನಿಲುವು ತೆಗೆದುಕೊಳ್ಳಬೇಕು ಎಂದು ಹೇಳಿದ್ದಾರೆ.



ಈಗಾಗಲೇ ಎಲ್ಲಾ ಪ್ರಸಾರಕರು ಮತ್ತು ಪ್ರಾಯೋಜಕರು 2024-31ರ ಅವಧಿಗೆ ಸಹಿ ಮಾಡಿದ್ದಾರೆ. ಭಾರತ ತಂಡ ಭಾಗವಹಿಸಲು ನಿರಾಕರಿಸಿದ್ರೆ, ಬಲವಾದ ಕಾರಣ ಇರಬೇಕು. ಬಿಸಿಸಿಐ ಭದ್ರತೆಯ ಕಾರಣಗಳನ್ನು ನೀಡಿ ಟೂರ್ನಿ ನಿರಾಕರಿಸಲು ಮುಂದಾಗುತ್ತಿದೆ. ಹಾಗಾದರೆ ಆಸ್ಟ್ರೇಲಿಯಾ, ನ್ಯೂಜಿಲೆಂಡ್, ಇಂಗ್ಲೆಂಡ್ ಮತ್ತು ದಕ್ಷಿಣ ಆಫ್ರಿಕಾದಂತಹ ತಂಡಗಳು ಪಾಕಿಸ್ತಾನಕ್ಕೆ ಬರುತ್ತಿಲ್ಲವೇ? ಭಾರತವು ಪಾಕಿಸ್ತಾನಕ್ಕೆ ಹೋಗದಿದ್ದರೆ, ಪಾಕಿಸ್ತಾನವು ಐಸಿಸಿ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದಿಲ್ಲ ಎಂದು ಹೇಳಿದ್ದಾರೆ.

ಮುಂದುವರಿದು ಪಾಕಿಸ್ತಾನ ಮತ್ತು ಭಾರತ ಇರುವುದರಿಂದಲೇ ಐಸಿಸಿ ಅಸ್ತಿತ್ವದಲ್ಲಿದೆ.

### ಬಿಸಿಸಿಐ ಷರತ್ತು ಏನು?

**ಚಾಂಪಿಯನ್ಸ್ ಟ್ರೋಫಿಗಾಗಿ ಭಾರತ ತಂಡವು ಪಾಕಿಸ್ತಾನಕ್ಕೆ ಬರುವುದಿಲ್ಲ ಎಂದು ಬಿಸಿಸಿಐ ಹೇಳಿದೆ. ಜೊತೆಗೆ ಭಾರತದ ಎಲ್ಲಾ ಪಂದ್ಯಗಳನ್ನು ದುಬೈಗೆ ಸ್ಥಳಾಂತರಿಸುವಂತೆ ಬೇಡಿಕೆಯಿಟ್ಟಿದೆ ಎಂದು ವರದಿಯಾಗಿದೆ.**

ಭಾರತದಂತೆ ಪಾಕಿಸ್ತಾನ ಸರ್ಕಾರವೂ ನಾವು ಆಡುವುದಿಲ್ಲ ಎಂದು ಹೇಳಿದರೆ, ಯಾರೂ ಕೂಡ ಪಂದ್ಯವನ್ನು ವೀಕ್ಷಿಸುವುದಿಲ್ಲ. ಬಿಸಿಸಿಐನಿಂದಲೂ ಯಾವುದೇ ಪ್ರಯೋಜನ ಆಗೋದಿಲ್ಲ ಎಂದು ಕೆಣಕಿದ್ದಾರೆ.

ಚಾಂಪಿಯನ್ಸ್ ಟ್ರೋಫಿಯಲ್ಲಿ ಅಫ್ಘಾನಿಸ್ತಾನ, ಆಸ್ಟ್ರೇಲಿಯಾ, ಬಾಂಗ್ಲಾದೇಶ, ಇಂಗ್ಲೆಂಡ್, ಭಾರತ, ನ್ಯೂಜಿಲೆಂಡ್, ದಕ್ಷಿಣ ಆಫ್ರಿಕಾ ಮತ್ತು ಹಾಲಿ ಚಾಂಪಿಯನ್ ಪಾಕಿಸ್ತಾನ ಸೇರಿದಂತೆ ತಲಾ 4 ತಂಡಗಳ ಎರಡು ಗುಂಪುಗಳನ್ನು ಒಳಗೊಂಡಿವೆ. ಈಗಾಗಲೇ ಚಾಂಪಿಯನ್ಸ್ ಟ್ರೋಫಿ ವೇಳಾಪಟ್ಟಿ ನಿಗದಿಯಾಗಿದ್ದು, ಪಾಕಿಸ್ತಾನದ ಮುಲ್ತಾನ್, ರಾವಲ್ಪಿಂಡಿ ಹಾಗೂ ಲಾಹೋರ್ ಕ್ರೀಡಾಂಗಣಗಳು ಆತಿಥ್ಯ ವಹಿಸಲು ಸಜ್ಜಾಗಿವೆ.

# ವಿಶ್ವ ದಾಖಲೆಯ ಶತಕ ಸಿಡಿಸಿದ ಫಿಲ್ ಸಾಲ್ಟ್

ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಈವರೆಗೆ ಕೇವಲ 13 ವಿಕೆಟ್ ಕೀಪರ್‌ಗಳು ಬ್ಯಾಟರ್‌ಗಳು ಮಾತ್ರ ಶತಕ ಸಿಡಿಸಿದ್ದಾರೆ. ಈ ಹದಿಮೂರು ವಿಕೆಟ್ ಕೀಪರ್‌ಗಳಲ್ಲಿ ಅತ್ಯಧಿಕ ಸೆಂಚುರಿ ಬಾರಿಸಿದ್ದು ಇಂಗ್ಲೆಂಡ್‌ನ ಫಿಲ್ ಸಾಲ್ಟ್. ವೆಸ್ಟ್ ಇಂಡೀಸ್ ವಿರುದ್ಧದ ಮೊದಲ ಟಿ20 ಪಂದ್ಯದಲ್ಲಿ ಸ್ಫೋಟಕ ಸೆಂಚುರಿ ಸಿಡಿಸುವುದರೊಂದಿಗೆ ಸಾಲ್ಟ್ ಹೊಸ ವಿಶ್ವ ದಾಖಲೆಯನ್ನು ತಮ್ಮದಾಗಿಸಿಕೊಂಡಿದ್ದಾರೆ.

ಬಾರ್ಬಡೋಸ್‌ನ ಕಿಂಗ್‌ಸ್ಟನ್ ಓವಲ್ ಮೈದಾನದಲ್ಲಿ ನಡೆದ ವೆಸ್ಟ್ ಇಂಡೀಸ್ ವಿರುದ್ಧದ ಮೊದಲ ಟಿ20 ಪಂದ್ಯದಲ್ಲಿ ವಿಂಡೀಸ್ ನೀಡಿದ 183 ರನ್‌ಗಳ ಕಠಿಣ ಗುರಿಯನ್ನು ಬೆನ್ನತ್ತಿದ ಇಂಗ್ಲೆಂಡ್ ತಂಡಕ್ಕೆ ಫಿಲ್ ಸಾಲ್ಟ್ ಸ್ಫೋಟಕ ಆರಂಭ ಒದಗಿಸಿದ್ದರು. ಮೊದಲ ಓವರ್‌ನಿಂದಲೇ ಬಿರುಸಿನ ಬ್ಯಾಟಿಂಗ್ ಪ್ರದರ್ಶಿಸಿದ ಸಾಲ್ಟ್ ಮೈದಾನದ ಮೂಲೆ ಮೂಲೆಗೂ ಸಿಕ್ಸ್-ಫೋರ್‌ಗಳ ಸುರಿಮಳೆಗೈದರು.

ಈ ಸಿಕ್ಸ್-ಫೋರ್‌ಗಳೊಂದಿಗೆ ಫಿಲ್ ಸಾಲ್ಟ್ ಕೇವಲ 53 ಎಸೆತಗಳಲ್ಲಿ ಶತಕ ಪೂರೈಸಿದ್ದಾರೆ. ಈ ಶತಕದೊಂದಿಗೆ ಟಿ20 ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತ್ಯಧಿಕ ಸೆಂಚುರಿ ಸಿಡಿಸಿದ ವಿಕೆಟ್ ಕೀಪರ್ ಎಂಬ ವಿಶ್ವ ದಾಖಲೆಯನ್ನು ಸಾಲ್ಟ್ ತಮ್ಮದಾಗಿಸಿಕೊಂಡಿದ್ದಾರೆ.




ಇದಕ್ಕೂ ಮುನ್ನ ಈ ದಾಖಲೆ ಪಟ್ಟಿಯಲ್ಲಿ ಸಂಜು ಸ್ಯಾಮ್ಸನ್ (ಭಾರತ), ಲೆಸ್ಲಿ ಡನ್ಬಾರ್ (ಸರ್ಬಿಯಾ) 2 ಶತಕಗಳೊಂದಿಗೆ ಸಾಲ್ಟ್ ಜೊತೆ ಅಗ್ರಸ್ಥಾನ ಹಂಚಿಕೊಂಡಿದ್ದರು. ಇದೀಗ ಮೂರನೇ ಸೆಂಚುರಿ ಸಿಡಿಸುವ ಮೂಲಕ ಫಿಲ್ ಸಾಲ್ಟ್ ಹೊಸ ಇತಿಹಾಸ ನಿರ್ಮಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಹಾಗೆಯೇ ಟಿ20 ಕ್ರಿಕೆಟ್ ಇತಿಹಾಸದಲ್ಲಿ ಒಂದೇ ತಂಡದ ವಿರುದ್ಧ ಮೂರು ಸೆಂಚುರಿ ಸಿಡಿಸಿದ ವಿಶೇಷ ವಿಶ್ವ ದಾಖಲೆ ಕೂಡ ಫಿಲ್ ಸಾಲ್ಟ್ ಪಾಲಾಗಿದೆ. 2023 ರಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ಶತಕ ಬಾರಿಸುವ ಮೂಲಕ ಸಾಲ್ಟ್ ಸೆಂಚುರಿ ಖಾತೆ ತೆರೆದಿದ್ದರು. ಇದಾದ ಬಳಿಕ 2023 ರಲ್ಲೇ ವಿಂಡೀಸ್ ವಿರುದ್ಧದ 2ನೇ ಟಿ20 ಶತಕ ಸಿಡಿಸಿದ್ದರು. ಇದೀಗ ಮೂರನೇ ಸೆಂಚುರಿ ಚಚ್ಚುವ ಮೂಲಕ ಒಂದೇ ತಂಡದ ವಿರುದ್ಧ ಮೂರು ಟಿ20 ಶತಕ ಸಿಡಿಸಿದ ವಿಶ್ವದ ಏಕೈಕ ಬ್ಯಾಟರ್ ಎನಿಸಿಕೊಂಡಿದ್ದಾರೆ.

ಇನ್ನು ಈ ಪಂದ್ಯದಲ್ಲಿ 54 ಎಸೆತಗಳನ್ನು ಎದುರಿಸಿದ ಫಿಲ್ ಸಾಲ್ಟ್ 6 ಭರ್ಜರಿ ಸಿಕ್ಸ್, 9 ಫೋರ್‌ಗಳೊಂದಿಗೆ ಅಜೇಯ 103 ರನ್ ಚಚ್ಚಿದರು. ಈ ಶತಕದ ನೆರವಿನಿಂದ ಇಂಗ್ಲೆಂಡ್ ತಂಡವು 16.5 ಓವರ್‌ಗಳಲ್ಲಿ 2 ವಿಕೆಟ್ ಕಳೆದುಕೊಂಡು 183 ರನ್‌ಗಳಿಸಿ 8 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.

# ಹುರುಳಿಕಾಳು, ನುಗ್ಗೆಸೊಪ್ಪಿನ ಸಾರು ತಿನ್ನುವುದರಿಂದ ಆರೋಗ್ಯ

**ಹುಳಿಯಾರು:** ವಾರಕ್ಕೊಮ್ಮೆ ಹುರುಳಿಕಾಳು, ನುಗ್ಗೆಸೊಪ್ಪಿನ ಸಾರು ತಿನ್ನುವುದರಿಂದ ಆರೋಗ್ಯವಾಗಿರಬಹುದು ಎಂದು ಹಂದನಕೆರೆ ಶ್ರೀಮಠದ ಗುರುಗಳಾದ ವೇದಮೂರ್ತಿ ರುದ್ರಾರಾಧ್ಯರು ತಿಳಿಸಿದರು.

ಹುಳಿಯಾರಿನ ಸನ್ಮಾರ್ಗ ಥಿಯಾಸಾಫಿಕಲ್ ಸೊಸೈಟಿಯ ಥಿಯಾಸಾಫಿಕಲ್ ಸೇವಾ ವಿಭಾಗ ಮತ್ತು ಶ್ರೀ ಗುರು ಗೋಸೇವಾ ಪರಿವಾರದ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಪಂಚಗವ್ಯ ಆಯುರ್ವೇದ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಎಣ್ಣೆಯಲ್ಲಿ ಖರೀದ ಪದಾರ್ಥಗಳು, ಸಿಹಿ ತಿಂಡಿಗಳು ಹಾಗೂ ಜಂಕ್ ಫುಡ್‌ಗಳಿಂದ ದೂರ ಇರಬೇಕು. ಬೆಳಗ್ಗೆ ಬೆಡ್ ಕಾಫಿ ಬಿಟ್ಟು ಕಷಾಯ ಕುಡಿಯಿರಿ, ಬೆಳಗ್ಗೆ 9 ರೊಳಗೆ ಮದ್ಯಾಹ್ನ 1 ರೊಳಗೆ ಸಂಜೆ 7 ರೊಳಗೆ ಊಟತಿಂಡಿ ತಿನ್ನಿ. ತಿಂದ ಬಳಿಕ ಯತ್ತೇಚ್ಚವಾಗಿ ನೀರು ಕುಡಿಯದೆ



ಸ್ವಲ್ಪ ಸಮಯದ ನಂತರ ಕುಡಿಯಬೇಕು. ತಿಂದ ನಂತರ ನೂರೆಜ್ಜೆಯಷ್ಟಾದರೂ ನಡೆಯಬೇಕು. ಬಹುಮುಖ್ಯವಾದಿ ತಿಂಗಳಿಗೆರಡು ಬಾರಿಯಾದರೂ ಉಪವಾಸ ಮಾಡಬೇಕು. ನಿಯಮಿತವಾದ ವ್ಯಾಯಾಮ, ಕಾಲಕಾಲದ ಹಣ್ಣುಗಳನ್ನು ತಿನ್ನುವ ಅಭ್ಯಾಸ ಇದ್ದರೆ ರೋಗಗಳಿಂದ ಮುಕ್ತಿ ಪಡೆಯಬಹುದು ಎಂದರು. ಪಂಚಗವ್ಯ ಚಿಕಿತ್ಸಾ ತಜ್ಞರಾದ ಡಾ.ಡಿ.ಪಿ.ರಮೇಶ್ ಮಾತನಾಡಿ ಶೌಚಾಲಯಕ್ಕೆ ಕೂರಲಾಗದಂತೆ ಮಂಡಿ ನೋವು ಅನುಭವಿಸುತ್ತಿರುವವರು ಅರ್ಧ ಗ್ಲಾಸ್ ಹಾಲಿಗೆ ಅರ್ಧ ಗ್ಲಾಸ್ ನೀರು, ಒಂದು ಚಿಟಕಿ ಅರಿಸಿನ, ಒಂದು ಚಮಚ ತುಪ್ಪ ಬೆಸರಿ ನಿತ್ಯ ಎರಡು ಬಾರಿ ಸೇವಿಸಿದರೆ ಹತ್ತದಿನ್ನೈದು ದಿನಗಳಲ್ಲಿ ಸರಿಯಾಗುತ್ತದೆ. ಆದರೆ ಇಂತಹ ಸರಳ ಮನೆಮದ್ದು ಬಿಟ್ಟು ದುಭಾರಿ ವೆಚ್ಚದ ಇಂಗ್ಲೀಷ್ ಮೆಡಿಸಿನ್‌ಗೆ ಮಾರುಹೋಗುತ್ತಿರುವುದು ವಿಪರ್ಯಾಸ ಎಂದರಲ್ಲದೆ ಪಂಚಗವ್ಯ ಚಿಕಿತ್ಸೆಯಿಂದ ಕ್ಯಾನ್ಸರ್ ಕೂಡ ವಾಸಿ ಮಾಡಬಹುದಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಥಿಯಾಸಾಫಿಕಲ್ ಸೊಸೈಟಿ ಅಧ್ಯಕ್ಷರಾದ ಬಸವರಾಜಪ್ಪ ವಹಿಸಿದ್ದರು. ಸೇವಾ ವಿಭಾಗದ ಅಧ್ಯಕ್ಷ ಎಚ್.ಬಿ.ಸತೀಶ್, ಗುರು, ಉಪನ್ಯಾಸಕ ನರೇಂದ್ರಬಾಬು, ಥಿಯಾಸಾಫಿಕಲ್‌ನ ಎಂ.ಆರ್. ಗೋಪಾಲ್, ಜಗದೀಶ್ ಮತ್ತಿತರರು ಇದ್ದರು.

### ಸರ್ಕಾರಿ ಬಾಲಕಿಯರ ಪ್ರೌಢಶಾಲೆಗೆ ಮೋನಾ ರೋತ್ ಭೇಟಿ

# ಶಿಕ್ಷಕರು, ವಿದ್ಯಾರ್ಥಿಗಳೊಂದಿಗೆ ಸಂವಾದ

**ಚಾಮರಾಜನಗರ:** ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿಗೆ (ಪ್ರೌಢಶಾಲಾ ವಿಭಾಗ) ಇಂದು ಭೇಟಿ ನೀಡಿ ಅಲ್ಲಿನ ಶಿಕ್ಷಕರು ಹಾಗೂ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳೊಂದಿಗೆ ವಿವಿಧ ಕಲಿಕಾ ವಿಷಯಗಳ ಕುರಿತು ಸಂವಾದ ನಡೆಸಿದರು.

ಚಾಮರಾಜನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ (ಪ್ರೌಢಶಾಲಾ ವಿಭಾಗ) ನಡೆದ ಚಾಮರಾಜನಗರ ತಾಲೂಕುಮಟ್ಟದ ಸಮಾಜ ವಿಜ್ಞಾನ ಪ್ರಶ್ನೆಪತ್ರಿಕೆ ರಚನಾ ಕಾರ್ಯಾಗಾರದಲ್ಲಿ ಭಾಗಿಯಾಗಿದ್ದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರು ಶಿಕ್ಷಕರ ಬೋಧನಾ ವಿಧಾನ ಹಾಗೂ ವಿದ್ಯಾರ್ಥಿಗಳ ಕಲಿಕಾ ಸಾಮರ್ಥ್ಯದ ಬಗ್ಗೆ ಪರಿಶೀಲನೆ ನಡೆಸಿದರು.

ಮೊದಲಿಗೆ ತರಗತಿಯ ಪ್ರತಿಯೊಬ್ಬ ವಿದ್ಯಾರ್ಥಿನಿಯರನ್ನು ಪರಿಚಯ ಮಾಡಿಕೊಂಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ವಿದ್ಯಾರ್ಥಿಗಳ ಜೊತೆ ಆತ್ಮೀಯವಾಗಿ ಮಾತನಾಡಿದರು. ಕಳೆದ ವಾರ್ಷಿಕ ಪರೀಕ್ಷೆಯಲ್ಲಿ ವಿವಿಧ ವಿಷಯಗಳಲ್ಲಿ ಅತಿಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಪ್ರಶಂಸಿಸಿದರು. ಈ ಬಾರಿಯ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿಯೂ ಉತ್ತಮ ಸಾಧನೆ ಮಾಡಲು



ಪ್ರೇರೇಪಿಸಿದರು.

ಪಠ್ಯ ವಿಷಯದ ಕುರಿತು ವಿದ್ಯಾರ್ಥಿಗಳಿಗೆ ವಿವಿಧ ಪ್ರಶ್ನೆಗಳನ್ನು ಕೇಳಿದರು. ಕಲಿಕಾ ಪ್ರಕ್ರಿಯೆಯಲ್ಲಿ ನಿರೀಕ್ಷಿತ ಪ್ರಗತಿ ಸಾಧಿಸದ ಮಕ್ಕಳ ತೊಂದರೆಗಳ ಬಗ್ಗೆ ಸ್ವತಹ ಮಕ್ಕಳನ್ನೆ ವಿಚಾರಿಸಿ ಮಾಹಿತಿ ಪಡೆದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅವರು ಮಕ್ಕಳಿಗೆ ವ್ಯಾಕರಣ, ಪತ್ರ ಬರೆಯುವ ಬಗೆ, ವ್ಯಾಸಂಗ ಪೇರಣಾರ್ಥಕ ಕ್ರಿಯೆಗಳ ಬಗ್ಗೆ ವಿದ್ಯಾರ್ಥಿಗಳಿಗೆ ತಿಳಿಹೇಳಿದರು.

ವಿದ್ಯಾರ್ಥಿಗಳಿಗೆ ಕಠಿಣವಾದ ಅಧ್ಯಾಯಗಳನ್ನು ಸಂಕ್ಷಿಪ್ತವಾಗಿ ಅರ್ಥೈಸಿಕೊಳ್ಳುವ ರೀತಿಯಲ್ಲಿ ಮಕ್ಕಳಿಗೆ ಪಾಠ-ಪ್ರವಚನ ಮಾಡಬೇಕು. ಪ್ರತಿ ವಿಷಯದಲ್ಲಿಯೂ ಮಾದರಿ ಪರೀಕ್ಷೆ ನೆಡೆಸಬೇಕು. ಎಲ್ಲಾ ವಿದ್ಯಾರ್ಥಿಗಳಿಗೂ ಪ್ರಶ್ನೆಯನ್ನು ಕೇಳಬೇಕು. ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಳ್ಳಬೇಕು. ಮಕ್ಕಳ ಮುಂದಿನ ಭವಿಷ್ಯ ರೂಪಿಸುವಲ್ಲಿ ಮುಂದಾಗುವಂತೆ ಶಿಕ್ಷಕರಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅವರು ಸೂಚಿಸಿದರು.

ಬಳಿಕ ಸ್ವತಹ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರೇ ವಿದ್ಯಾರ್ಥಿಗಳಿಗೆ ಸುಲಭವಾಗಿ ಅರ್ಥವಾಗುವ ಮಾದರಿಯಲ್ಲಿ ಸಮಾಜ ವಿಜ್ಞಾನ ಹಾಗೂ ಹಿಂದಿ ವಿಷಯಗಳ ಕುರಿತು ಪಾಠ ಮಾಡಿ ವಿದ್ಯಾರ್ಥಿಗಳ ಮನಗೆದ್ದರು. ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಾದ ರಾಮಚಂದ್ರರಾಜೇ ಅರಸ್, ಕ್ಷೇತ್ರ ಶಿಕ್ಷಣಾಧಿಕಾರಿ ಹನುಮಶೆಟ್ಟಿ, ಕಾಲೇಜಿನ ಉಪಪ್ರಾಂಶುಪಾಲರಾದ ನಂಜುಂಡಸ್ವಾಮಿ, ಇತರರು ಇದೇ ಸಂದರ್ಭದಲ್ಲಿ ಇದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com